ಸಂಪುಟ: 21, ಸಂಚಿಕೆ: 129, ಪುಟಗಳು: 8, ಭಾನುವಾರ, 18 ಫೆಬ್ರವರಿ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಭಾನುವಾರ 18, ಫೆಬ್ರವರಿ -2024)

- ಶ್ರೀ ಶೋಭಕೃತ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಮಾಘ ಮಾಸ, ಶುಕ್ಲಪಕ್ಷ,
- ನವಮಿ/ ದಶಮಿ
- ಕೃತಿಕಾ ನಕ್ಷತ್ರ / ರೋಹಿಣಿ ನಕ್ಷತ್ರ
- ರಾಹುಕಾಲ: 04:59 PM 06 : 30 PM
- ಗುಳಿಕಕಾಲ: 03:28 PM04 : 59 PM
- ಯಮಗಂಡಕಾಲ: 12:27 PM 01 : 58 PM

## ಸಂವಿಧಾನವೇ ನಮ್ಮ ಧರ್ಮಗ್ರಂಥ



**ಬೆಂಗಳೂರು:** ಸಂವಿಧಾನವೇ ನಮ್ಮ ಧರ್ಮ ಗ್ರಂಥ, ಬಿಜೆಪಿಯವರು ಹಾಗೂ ಹಿಂದುತ್ವವಾದಿಗಳು ಹೇಳುವ ಗ್ರಂಥ ನಮ್ಮದಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಭಾರತ ಸಂವಿಧಾನ ಹಾಗೂ ಐಕ್ಯತಾ ಸಮಾವೇಶಕ್ಕೆ ಸಂಬಂಧಿಸಿದಂತೆ ಸುದ್ದಿಗೋಷ್ಠಿ ನಡೆಸಿದ ಅವರು, ಸಂವಿಧಾನದಲ್ಲಿ ಕೆಲವರಿಗೆ ನಂಬಿಕೆ, ಗೌರವ ಇಲ್ಲ. ಅವರಿಗೆ ಸಂವಿಧಾನದ ಬಗ್ಗೆ ಗೊತ್ತಿಲ್ಲ ಅಂತೇನಿಲ್ಲ, ಗೊತ್ತಿದ್ದೂ ದಾರಿ ತಪ್ಪಿಸುತ್ತಿದ್ದಾರೆ. ಯಾರು ದಾರಿ ತಪ್ಪಿಸುತ್ತಿದ್ದಾರೆ ಎಂದು ನನ್ನ ಬಾಯಿಯಿಂದ ಹೇಳಿಸಬೇಡಿ ಎಂದಿದ್ದಾರೆ.

ನಮಗೆ ಸ್ಪಷ್ಟತೆ ಇದ್ದರೆ ದಾರಿ ತಪ್ಪಲು ಸಾಧ್ಯವಿಲ್ಲ. ನಮ್ಮ ಸ್ಥಿತಿಗೆ ಹಣೆಬರಹದ ಸಂಬಂಧ ಕಲ್ಪಿಸ್ತೀವಿ. ಹಣೆಬರಹ ಹಾಗೂ ಹಿಂದಿನ ಜನ್ಮ ಅನ್ನೋದೇನೂ ಇಲ್ಲ. ಈ ಜನ್ಮವೊಂದೇ ಗಟ್ಟಿ, ಪುನರ್ಜನ್ಮ ಇಲ್ಲ. ಮತ್ತೆ ಹುಟ್ಟಿ ಬರ್ತೀವಿ ಅನ್ನೋದು ಸುಳ್ಳು ಎಂದಿದ್ದಾರೆ. ಸಂವಿಧಾನ ಜಾರಿಗೆ ಬಂದು 75 ವರ್ಷ ಆಗಿದೆ. ಈ 75ನೇ ವರ್ಷವನ್ನು ಅರ್ಥಪೂರ್ಣವಾಗಿ ಆಚರಿಸಲು ನಾವು ನಿರ್ಧರಿಸಿದ್ದೇವೆ. ರಾಜ್ಯದ ಪ್ರತಿ ಜಿಲ್ಲೆಗಳಲ್ಲಿ ಸಂವಿಧಾನ ಜಾಥಾ ನಡೀತಿದೆ. ಕಳೆದ ಜ.26 ರಿಂದ ಈ ಜಾಥ ಆರಂಭವಾಗಿದೆ. ಫೆ.24 ಹಾಗೂ 25 ಸಮಾವೇಶ ಇದೆ, ಹೆಸರಾಂತ ಭಾಷಣಕಾರರು ಬರಲಿದ್ದಾರೆ. ಚಿಂತಕರಾದ ಪ್ರೊ.ಅಶುತೋಷ್ ವರ್ಷ್ನೆಯ್, ಮೇಧಾ ಪಾಟ್ಕರ್, ಡಾ.ಗಣೇಶ್ ದೇವಿ, ಸುಖದೇವ್ ಥೋರಟ್ ಸೇರಿ ಅನೇಕರು ಬರಲಿದ್ದಾರೆ.

ಪುಟ 2

### ತುಮಕೂರಿನ ಕನಸು ಕಂಡಿದ್ದ ಸೋಮಣ್ಣಗೆ ಆರಂಭಿಕ ವಿಘ್ನ

## ಆರ್‌ಎಸ್‌ಎಸ್‌ನಿಂದ ವಲಸಿಗ ಅಸ್ತ್ರ



**ತುಮಕೂರು:** ಈ ಬಾರಿ ತುಮಕೂರು ಲೋಕಸಭಾ ಕ್ಷೇತ್ರಕ್ಕೆ ಮಾಜಿ ಸಚಿವ ವಿ.ಸೋಮಣ್ಣ ಹೆಸರು ಕೇಳಿ ಬಂದ ಬೆನ್ನಲ್ಲೇ ಜಿಲ್ಲೆಯ ರಾಜಕಾರಣದಲ್ಲಿ ದಿಢೀರ್ ಬೆಳವಣಿಗೆಗಳು ಕಂಡು ಬಂದಿವೆ. ವಿ.ಸೋಮಣ್ಣ ಸ್ಪರ್ಧೆಗೆ ಜಿಲ್ಲೆಯ ಬಿಜೆಪಿ ಮುಖಂಡ ಡಾ.ಪರಮೇಶ್ ಪರೋಕ್ಷವಾಗಿ ವಿರೋಧ ವ್ಯಕ್ತಪಡಿಸಿದ್ದಾರೆ. ಆರ್‌ಎಸ್‌ಎಸ್ ಜೊತೆ ಗುರುತಿಸಿಕೊಂಡಿರುವ ಡಾ.ಪರಮೇಶ್, ತುಮಕೂರು ಲೋಕಸಭಾ ಕ್ಷೇತ್ರದ ಬಿಜೆಪಿಯ ಟಿಕೆಟ್ ಆಕಾಂಕ್ಷಿಯಾಗಿದ್ದಾರೆ. ಡಾ.ಪರಮೇಶ್ ಅವರು ಸಿದ್ದಗಂಗಾ ಆಸ್ಪತ್ರೆ ವ್ಯವಸ್ಥಾಪಕ ನಿರ್ದೇಶಕ, ಜಿಲ್ಲಾ ಬಿಜೆಪಿ ಘಟಕ ಖಜಾಂಚಿ ಹಾಗೂ ಆರ್‌ಎಸ್‌ಎಸ್ ಮುಖಂಡರಾಗಿದ್ದಾರೆ.

**ನನಗೆ ಟಿಕೆಟ್ ಸಿಗುತ್ತೆ!:** ತುಮಕೂರು ಕ್ಷೇತ್ರಕ್ಕೆ ವಿ.ಸೋಮಣ್ಣ ಹೆಸರು ಕೇಳಿ ಬಂದ ಹಿನ್ನೆಲೆ ಡಾ.ಪರಮೇಶ್ ಇಂದು ದಿಢೀರ್ ಸುದ್ದಿಗೋಷ್ಠಿ ನಡೆಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಾ.ಪರಮೇಶ್, ಹೈಕಮಾಂಡ್‌ಗೆ ತಲುಪಿದ ನಾಲ್ವರ ಹೆಸರಲ್ಲಿ ನನ್ನ ಹೆಸರು ಮೊದಲಿದೆ. ನನಗೆ ಟಿಕೆಟ್ ಫೈನಲ್ ಆಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪುಟ 2

# ಬರಡಾಯ್ತು ಕೃಷ್ಣ ನದಿ

## ಹನಿ ನೀರಿಗಾಗಿ ಗ್ರಾಮಗಳಲ್ಲಿ ಕಣ್ಣೀರು | ಸರ್ಕಾರದ ವಿರುದ್ಧ ವಾಗ್ದಾಳಿ

**ರಾಯಚೂರು:** ರಾಯಚೂರು ಜಿಲ್ಲೆಯ ಎಡ ಮತ್ತು ಬಲಭಾಗದಲ್ಲಿ ಕೃಷ್ಣಾ ಹಾಗೂ ತುಂಗಭದ್ರಾ ನದಿಗಳು ಹರಿಯುತ್ತಿದ್ದರೂ, ಜಿಲ್ಲೆಯಲ್ಲಿ ಕುಡಿಯುವ ನೀರಿಗಾಗಿ ಹಾಹಾಕಾರ ಶುರುವಾಗಿದೆ . ನೀರಿಲ್ಲದೇ ಆ ಗ್ರಾಮದಲ್ಲಿ ಕಳೆದೊಂದು ವಾರದಿಂದ ಶೇಕಡಾ 60% ರಷ್ಟು ಜನ ಸ್ನಾನವನ್ನೇ ಮಾಡಿಲ್ಲ. ಹೇಗಾದರೂ ಮಾಡಿ ಕುಡಿಯುವುದಕ್ಕಾದರೂ ನೀರಿನ ವ್ಯವಸ್ಥೆ ಮಾಡಿಸಿ ಎಂದು ಗ್ರಾಮಸ್ಥರು ಮುಂದೆ ಅಳಲು ತೋಡಿಕೊಂಡಿದ್ದಾರೆ.

ತೆಲಂಗಾಣ ಗಡಿಯ ರಾಯಚೂರು ತಾಲೂಕಿನ ಡಿ.ರಾಂಪುರ ಗ್ರಾಮದಲ್ಲಿ ನೀರಿಗಾಗಿ ಹಾಹಾಕಾರ ಎದ್ದಿದೆ. ಕೃಷ್ಣಾ ನದಿ ತೀರದ ಡಿ.ರಾಂಪುರ, ಕುರುವಕಲ, ಕುರುವಕುರ್ದ ಸೇರಿ ಏಳೆಂಟು ಗ್ರಾಮಗಳಲ್ಲಿ ಹನಿ ನೀರಿಗಾಗಿಯೂ ಜನರು ಪರದಾಡುವಂತಹ ಪರಿಸ್ಥಿತಿ ಇದೆ. ಕೃಷ್ಣಾ ನದಿ ಮೇಲೆ ಅವಲಂಬಿತವಾಗಿದ್ದ ಗ್ರಾಮಗಳಲ್ಲಿ ಕಳೆದ 10ಕ್ಕೂ ಹೆಚ್ಚು ದಿನಗಳಿಂದ ನೀರಿಗಾಗಿ ಪರಿತಪಿಸುವಂತಹ ಸ್ಥಿತಿ ಇದೆ. ಭೀಕರ ಬರಗಾಲಕ್ಕೆ ಕೃಷ್ಣಾ ನದಿ ಒಣಗಿ ಹೋಗಿದೆ. ಈ ಹಿನ್ನೆಲೆ ಬೇಸಿಗೆ ಪ್ರಾರಂಭದಲ್ಲೇ ಈ ಭಾಗದ ಜನರಿಗೆ ನೀರಿನ ಸಮಸ್ಯೆ ಶುರುವಾಗಿದೆ. ಮೂರ್ನಾಲ್ಕು ಕಿಮಿ ದೂರ ಸಾಗಿ ಜಮೀನುಗಳಲ್ಲಿನ ಬೋರ್ ವೆಲ್ ನೀರನ್ನ ತಂದು ಜನ ಜೀವನ ಸಾಗಿಸಬೇಕಿದೆ. ಇತ್ತ ನಿತ್ಯ ನೂರಾರು ಗ್ರಾಮಸ್ಥರು ನೀರಿಗೆ ದುಂಬಾಲು ಬೀಳುತ್ತಿರುವ ಹಿನ್ನೆಲೆ ಬೆಳೆಗೆ ನೀರು ಸಾಕಾಗಲ್ಲ ಅಂತ ಜಮೀನಿನ ಮಾಲೀಕರು ಕೂಡ ನಿತ್ಯ ನೀರು ಒದಗಿಸಲು ಹಿಂದೇಟು ಹಾಕುತ್ತಿದ್ದಾರೆ.





**ಸರ್ಕಾರದ ವಿರುದ ವೃದೆ ಕಿಡಿ**

ಇನ್ನು ವೃದ್ಧೆಯೊಬ್ಬರು ತೆಲುಗಿನಲ್ಲಿ ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದಿದ್ದಾರೆ. ಎಂಟು ದಿನ ಆಯ್ತು ನೀರಿಲ್ಲ. ಸ್ನಾನ ಮಾಡಲು ನೀರಿಲ್ಲ, ಕುಡಿಯಲು ನೀರಿಲ್ಲ. ಹೊಲದವರು ನೀರು ಬಿಡ್ತಿಲ್ಲ. ಬೋರ್ ವೆಲ್ ನೀರನ್ನ ತಂದು ಸ್ನಾನ ಮಾಡಿದ್ರೆ, ಮೈ ಎಲ್ಲಾ ತುರಿಕೆ ಬರ್ತಿದೆ. ಸರ್ಕಾರ ಎಲ್ಲಿ ಹೋಗಿದೆ ಅಲ್ಲಿ ಓಟು ಹಾಕಿ ಇಲ್ಲಿ ಹೋಗಿ ಅಂತಾರೆ. ಇಲ್ಲಿ ನೀರಿಲ್ಲದೇ ಸತ್ತು ಹೋಗೊ ಸ್ಥಿತಿ ಬಂದಿದೆ ಅಂತ ವೃದ್ಧೆ ನರಸಮ್ಮ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

## ನಾನು ಲೋಕಸಭೆಗೆ ನಿಲ್ಲೋದಿಲ್ಲ

**ಬೆಂಗಳೂರು:** ಅನಗತ್ಯ ಗೊಂದಲ ಬೇಡ. ನಾನು ಲೋಕಸಭೆಗೆ ನಿಲ್ಲೋದಿಲ್ಲ ಎಂದು ಸಚಿವ ಹೆಚ್.ಸಿ.ಮಹದೇವಪ್ಪ ಸ್ಪಷ್ಟಪಡಿಸಿದರು.

ವಿಧಾನಸೌಧದಲ್ಲಿ ಶನಿವಾರ ಭಾರತ ಸಂವಿಧಾನ ಹಾಗೂ ಐಕ್ಯತಾ ಸಮಾವೇಶಕ್ಕೆ ಸಂಬಂಧಿಸಿದಂತೆ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಚಾಮರಾಜನಗರ ಕ್ಷೇತ್ರ ಟಿಕೆಟ್ ಆಕಾಂಕ್ಷಿ ಅಲ್ಲ. ನಾನು ಸ್ಪರ್ಧೆ ಮಾಡಲ್ಲ, ಟಿಕೆಟ್ ಕೇಳಿಲ್ಲ. ಹೈಕಮಾಂಡ್ ಯಾರನ್ನೇ ನಿಲ್ಲಿಸಿದರೂ ಬೆಂಬಲ ನೀಡುತ್ತೇನೆ. ಸುನೀಲ್ ಬೋಸ್‌ಗೆ ಕೊಡಿ ಎಂದು ಕ್ಷೇತ್ರದ ಶಾಸಕರು, ಮುಖಂಡರು ಹೇಳ್ತಿದ್ದಾರೆ. ಸುನೀಲ್ ಬೋಸ್ ಹೆಸರೂ ಕೂಡಾ ಪ್ಯಾನೆಲ್‌ನಲ್ಲಿದೆ ಎಂದು ಚಾಮರಾಜನಗರದಲ್ಲಿ ಪುತ್ರನ ಸ್ಪರ್ಧೆಯ ಸುಳಿವು ಕೊಟ್ಟರು.



ಪುಟ 2

## ಸಂಕ್ಷಿಪ್ತ ಸುದ್ದಿ

### ಹೆಂಡ್ತಿ ಜತೆ ಮಲಗಿದ್ದಾಗಲೇ ರೌಡಿಶೀಟರ್ ಹತ್ಯೆ



**ಬೆಂಗಳೂರು:** ರೌಡಿಶೀಟರ್ ಮಿಲ್ಕ್ ಸತೀಶ್ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ರೌಡಿಶೀಟರ್ ಸತೀಶ್ ಕೊಲೆಗೆ ಜೈಲಿನಿಂದಲೇ ಸುಪಾರಿ ನೀಡಲಾಗಿದೆ. ಲಕ್ಷ ಲಕ್ಷ ಹಣ ನೀಡುವುದಾಗಿ ಜೈಲಿನಿಂದಲೇ ರೌಡಿಶೀಟರ್ ಶಿವಕುಮಾರ್ ಬಬ್ಲಿ ಸುಪಾರಿ ನೀಡಿದ್ದ. ಶಿವಕುಮಾರ್ ಕೊಲೆ ಕೇಸ್‌ನ ಎ1 ಆರೋಪಿ ಕೂಡ. ಪರಪ್ಪನ ಅಗ್ರಹಾರದಿಂದಲೇ ಮೂರು ತಿಂಗಳಿಂದ ಸ್ಕೆಚ್ ಮಾಡಲಾಗಿದ್ದು, ಬಳಿಕ ಅದರಂತಯೇ ರೌಡಿಶೀಟರ್ ಸತೀಶ್‌ನನ್ನು ಜನವರಿ 30ರಂದು ವಿವೇಕನಗರದಲ್ಲಿ ಹೆಂಡತಿ ಜೊತೆ ಮಲಗಿದ್ದಾಗಲೇ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಲಾಗಿತ್ತು.

### ಕೊಟ್ಟ ಹಣ ವಾಪಸ್ ಕೇಳಿದಕ್ಕೆ ಸ್ನೇಹಿತನ ಕೊಲೆ



**ಕಲಬುರಗಿ:** ಕೊಟ್ಟ ಸಾಲ ವಾಪಸ್ ಕೇಳಿದಕ್ಕೆ ಜೊತೆಗಿದ್ದ ಸ್ನೇಹಿತನನ್ನೇ ಕೊಲೆ ಮಾಡಿದ ಘಟನೆ ಕಲಬುರಗಿ ನಗರದ ಆಶ್ರಯ ಕಾಲೋನಿಯಲ್ಲಿ ನಡೆದಿತ್ತು. ರೋಹನ್ ಮೃತ ದುರ್ದೈವಿ. ಫೆಬ್ರವರಿ 6 ರಂದು ಸುನೀಲ್ ಸಿಂಗ್, ಭಗತ್ ಸಿಂಗ್ ಸೋಹೇಲ್ ಎಂಬುವವರು ಜೊತೆಗಿದ್ದ ಸ್ನೇಹಿತ ರೋಹನ್ ಎಂಬಾತನನ್ನ ಚಾಕುವಿನಿಂದ ಇರಿದು ಕೊಲೆ ಮಾಡಿದ್ದರು. ಕೊಲೆಯ ಬಳಿಕ ನಾಲ್ಕು ಜನ ಆರೋಪಿಗಳು ಎಸ್ಕೇಪ್ ಆಗಿದ್ದರು. ಕೊಲೆ ಪ್ರಕರಣವನ್ನ ದಾಖಲಿಸಿಕೊಂಡ ಚೌಕ್ ಪೊಲೀಸರು, ಇದೀಗ ಮೂರು ಜನ ಆರೋಪಿಗಳನ್ನ ಹೆಡೆಮುರಿ ಕಟ್ಟಿದ್ದಾರೆ. ಇನ್ನು ಕೊಲೆಯಾದ ರೋಹನ್ ಸೇರಿದಂತೆ ಹತ್ಯೆ ಮಾಡಿದವರು ಕೂಡ ಸ್ನೇಹಿತರು. ಈ ಸುನೀಲ್ ಸಿಂಗ್ ಹಾಗೂ

ಪುಟ 2

### ಮಾರ್ಚ್ 11, 12ರಂದು ಕೊಪ್ಪಳ ಜಿಲ್ಲೆಯಲ್ಲಿ

## ಆನೆಗೊಂದಿ ಉತ್ಸವ



**ಕೊಪ್ಪಳ:** ಕನ್ನಡ ಮತ್ತು ಪ್ರವಾಸೋದ್ಯಮ ಇಲಾಖೆಯಿಂದ ಮಾರ್ಚ್ 11, 12ರಂದು ಜಿಲ್ಲೆಯ ಗಂಗಾವತಿ ತಾಲೂಕಿನ 'ಆನೆಗೊಂದಿ ಉತ್ಸವ' ನಡೆಯಲಿದೆ ಎಂದು ಗಂಗಾವತಿ ಕ್ಷೇತ್ರದ ಶಾಸಕ ಜನಾರ್ದನ ರೆಡ್ಡಿ ಮಾಹಿತಿ ನೀಡಿದ್ದಾರೆ.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಉತ್ಸವಕ್ಕೆ ಸ್ಥಳೀಯ, ರಾಜ್ಯ, ರಾಷ್ಟ್ರ ಮಟ್ಟದ ಕಲಾವಿದರು ಬರುತ್ತಾರೆ. ಆನೆಗೊಂದಿ ವಿಜಯ ನಗರ ಅರಸರ ಮೊದಲ ರಾಜಧಾನಿಯಾಗಿತ್ತು. ಆನೆಗೊಂದಿ ಉತ್ಸವ ಈ ಭಾಗದ ಸಾಂಸ್ಕೃತಿಕ ಮತ್ತು ಚಾರಿತ್ರಿಕ ಹಿರಿಮೆ ಸಾರುವ ಹೆಮ್ಮೆಯ ಆಚರಣೆಯಾಗಿದೆ.

ಬಿಜೆಪಿ ಜೊತೆ ಕೆಆರ್‌ಪಿಪಿ ವಿಲೀನ ವಿಚಾರವಾಗಿ ಮಾತನಾಡಿದ ಅವರು, ನಾನು ವಾಪಸ್ ಬಿಜೆಪಿ ಸೇರುವ ಪ್ರಶ್ನೆಯೇ ಇಲ್ಲ. ಕೆಆರ್‌ಪಿಪಿಯನ್ನು ಬಿಜೆಪಿಯಲ್ಲಿ ವಿಲೀನ ಕೂಡ ಮಾಡುವುದಿಲ್ಲ. ಆದರೆ ದೇಶದ ಅಭಿವೃದ್ಧಿಗೆ ಬಿಜೆಪಿ ಜತೆ ಹೊಂದಾಣಿಕೆಗೆ ಸಿದ್ಧನಿದ್ದೇನೆ ಎಂದು ಹೇಳಿದ್ದಾರೆ.

ನನ್ನ ಜೊತೆ ಚರ್ಚಿಸಿರುವ ಹಿರಿಯರಿಗೆ ನನ್ನ ವಿಚಾರವನ್ನು ಹೇಳಿದ್ದೇನೆ. ನನ್ನ ಮತ್ತು ಡಿಸಿಎಂ ಡಿ.ಕೆ. ಶಿವಕುಮಾರ್ ನಡುವೆ 20 ವರ್ಷಗಳ ಸಂಬಂಧವಿದೆ. ಆದರೆ ನಾನು ಬಿಜೆಪಿಗೆ ಆಗಲಿ, ಕಾಂಗ್ರೆಸ್‌ಗೆ ಆಗಲಿ ಹೋಗುವುದಿಲ್ಲ.

ಪುಟ 2

### ಪೊಲೀಸ್ ನೇಮಕಾತಿ ಪರೀಕ್ಷೆಯ ಪ್ರವೇಶ ಪತ್ರದಲ್ಲಿ

## ಸನ್ನಿ ಲಿಯೋನ್ ಫೋಟೊ

**ಉತ್ತರ ಪ್ರದೇಶ:** ಉತ್ತರ ಪ್ರದೇಶದ ಯುಪಿ ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ ಪರೀಕ್ಷೆಯಂದು ಪ್ರವೇಶಪತ್ರವೊಂದರಲ್ಲಿ ಸನ್ನಿ ಲಿಯೋನ್ ಚಿತ್ರ ಇರುವುದು ಕಂಡುಬಂದಿದೆ. ಈ ಪೋಸ್ಟರ್ ಎಲ್ಲೆಡೆ ವೈರಲ್ ಆಗಿದೆ. ಪರೀಕ್ಷೆಯ ಮೊದಲ ದಿನ, ಕನೌಜ್ ಜಿಲ್ಲೆಯಲ್ಲಿ ಪೊಲೀಸ್ ನೇಮಕಾತಿ ಪರೀಕ್ಷೆಗೆ ಹಾಜರಾದ ಅಭ್ಯರ್ಥಿಯ ಪ್ರವೇಶ ಪತ್ರ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ.

ಪುಟ 2



### ಕೊಪ್ಪಳ ಜಿಲ್ಲೆಯಲ್ಲಿ ಕುಡಿಯುವ ನೀರು ಸರಬರಾಜಿಗೆ ಪ್ರತಿ ತಾಲೂಕಿಗೆ 50 ಲಕ್ಷ, ಟ್ಯಾಂಕರ್ ನೀರು ಪೂರೈಕೆಗೆ 45 ಲಕ್ಷ ರೂ.

## ಮೀಸಲಿಟ್ಟ ಜಿಲ್ಲಾಡಳಿತ

**ಕೊಪ್ಪಳ:** ಬಿಸಿಲನಾಡು ಕೊಪ್ಪಳ ಜಿಲ್ಲೆಯಲ್ಲಿ ಈಗಾಗಲೇ ಬಿಸಿಲಿನ ಆರ್ಭಟ ಜೋರಾಗಿದೆ. ಜೊತೆಗೆ ಬರಗಾಲದ ಪರಿಣಾಮ ಹಲವೆಡೆ ನೀರಿಗೆ ತತ್ವಾರ ಕೂಡಾ ಆರಂಭವಾಗಿದೆ. ಕೊಪ್ಪಳ ತಾಲೂಕಿನ ಇಂದಿರಾ ನಗರ ತಾಂಡಾ ಸೇರಿದಂತೆ ಹಲವೆಡೆ ನೀರಿಗಾಗಿ ಜನರ ಪರದಾಟ ಆರಂಭವಾಗಿದೆ. ಈ ಬಗ್ಗೆ ಟಿವಿ9 ಡಿಜಿಟಲ್ ನಲ್ಲಿ ಅನೇಕ ಸುದ್ದಿಗಳು ವರದಿಯಾಗಿವೆ. ಈ ನಿಟ್ಟಿನಲ್ಲಿ ಎಚ್ಚೆತ್ತುಕೊಂಡಿರೋ ಕೊಪ್ಪಳ ಜಿಲ್ಲಾಡಳಿತ ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಅನೇಕ ಕ್ರಮಗಳನ್ನು ಕೈಗೊಳ್ಳಲು ಮುಂದಾಗಿದೆ.

ಕುಡಿಯುವ ನೀರಿನ ಸಲುವಾಗಿ ಈಗಾಗಲೇ ಜಿಲ್ಲಾಡಳಿತದಿಂದ ಎಲ್ಲಾ ರೀತಿಯಿಂದ ತಯಾರಿಯಾಗಿದ್ದು, ಜಿಲ್ಲೆಯಲ್ಲಿ ಕುಡಿಯುವ ನೀರಿನ ವ್ಯತ್ಯಯವಾಗದಂತೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಕೊಪ್ಪಳ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ತಿಳಿಸಿದ್ದಾರೆ.



ಜಿಲ್ಲೆಯಲ್ಲಿ ಒಟ್ಟು 153 ಗ್ರಾಮ ಪಂಚಾಯಿತಿಗಳಿದ್ದು 722 ಗ್ರಾಮಗಳಿರುತ್ತವೆ. ಈ ಎಲ್ಲಾ ಗ್ರಾಮಗಳಲ್ಲಿ 430 ಗ್ರಾಮಗಳಿಗೆ ಡಿಬಿಓಟಿ ಎಂವಿಎಸ್ ಯೋಜನೆ ಮುಖಾಂತರ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತದೆ. ಸದ್ಯಕ್ಕೆ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ. ಆದರೆ, ಮುಂದಿನ ದಿನಗಳಲ್ಲಿ 10 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬರಬಹುದು ಎಂದು ಅಂದಾಜಿಸಲಾಗಿದೆ. ಇದಕ್ಕಾಗಿ 2334 ಸರ್ಕಾರಿ ಮತ್ತು 6366 ಖಾಸಗಿ ಬೋರ್‌ವೆಲ್‌ಗಳಿದ್ದು, ಇದರಲ್ಲಿ 898 ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿದೆ. ಖಾಸಗಿ ಬೋರ್ ವೆಲ್‌ಗಳ ಮಾಲೀಕರಿಂದ ಕರಾರು ಪತ್ರವನ್ನು ಮಾಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

**ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜಿಗೆ ರೂ. 45 ಲಕ್ಷ:** ಗ್ರಾಮೀಣ ಮಟ್ಟದಲ್ಲಿ ಅತಿಯಾಗಿ ಕುಡಿಯುವ ನೀರಿನ ಸಮಸ್ಯೆಯಾದರೆ, ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಿಕೊಳ್ಳಲು ಗ್ರಾಮೀಣ ಅಭಿವೃದ್ಧಿ ಇಲಾಖೆಯಿಂದ ಬಿಡುಗಡೆಯಾದ ಅನುದಾನದಲ್ಲಿ ರೂ. 45 ಲಕ್ಷಗಳನ್ನು ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡುವ ಸಲುವಾಗಿ ಮೀಸಲಿರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದ್ದಾರೆ.

ಪುಟ 2



# ಫೆ.24, 25ರಂದು ಬೆಂಗಳೂರಿನಲ್ಲಿ ರಾಷ್ಟ್ರೀಯ ಐಕ್ಯತಾ ಸಮಾವೇಶ

**ಬೆಂಗಳೂರು:** ಫೆ.24, 25ರಂದು ಬೆಂಗಳೂರಿನಲ್ಲಿ ರಾಷ್ಟ್ರೀಯ ಐಕ್ಯತಾ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಫೆ.24ರಂದು ಉದ್ಘಾಟನೆ, ಫೆ.25ರಂದು ಆಲಿ ಮಾಡಲಾಗುವುದು ಭಾರತದ ಸಂವಿಧಾನ ಜಾರಿಯಾಗಿ 75 ವರ್ಷ ಆಗಿದೆ. ಜನವರಿ 26ರಿಂದ 31 ಜಿಲ್ಲೆಗಳಲ್ಲೂ ಸಂವಿಧಾನ ಜಾಥಾ ಕಾರ್ಯಕ್ರಮ ನಡೆಯುತ್ತಿದೆ. ಶಾಲಾ ಕಾಲೇಜುಗಳಲ್ಲಿ ಸಂವಿಧಾನ ಪೀಠಿಕೆ ಓದುವ ಕೆಲಸ ಆಗ್ತಿದೆ ಎಂದರು. ಭಾರತ



ಸಂವಿಧಾನ ಹಾಗೂ ಐಕ್ಯತಾ ಸಮಾವೇಶ ಸಂಬಂಧಿಸಿದಂತೆ ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿದ ಸಿದ್ದರಾಮಯ್ಯ, ಭಾರತದ ಸಂವಿಧಾನ ಜಾರಿಗೆ ಬಂದು 75 ವರ್ಷಕ್ಕೆ ಕಾಲಿಟ್ಟಿದೆ. ಅಮೃತ ಉತ್ಸವದ ಕಾರ್ಯಕ್ರಮವನ್ನ ಅರ್ಥಪೂರ್ಣವಾಗಿ ಆಚರಿಸಬೇಕೆಂದು ತೀರ್ಮಾನ ಮಾಡಿದ್ದೇವೆ. 31 ಜಿಲ್ಲೆಗಳಲ್ಲಿ ಸಂವಿಧಾನ ಜಾಥಾ ಮಾಡುವ ಕಾರ್ಯಕ್ರಮವನ್ನು ಜನವರಿ 26 ರಿಂದ ಹಮ್ಮಿಕೊಳ್ಳಲಾಗಿದೆ. ಇದೇ ತಿಂಗಳ 25ರಂದು ಕೊನೆಯಾಗುತ್ತೆ. ಫೆ.24, 25 ರಾಷ್ಟ್ರೀಯ ಐಕ್ಯತಾ ಸಮಾವೇಶ ಬೆಂಗಳೂರಿನಲ್ಲಿ ನಡೆಯುತ್ತೆ ಎಂದು ತಿಳಿಸಿದರು. ಪ್ರೊ, ಅಶುತೋಷ್, ಪ್ರಶಾಂತ್ ಭೂಷಣ್, ಮೇದಾ ಪಾಟ್ಕರ್ ಸೇರಿದಂತೆ ಅನೇಕ ಮೇದಾವಿಗಳು ಭಾಗವಹಿಸ್ತಿದ್ದಾರೆ. ಜನರ ಭಾವನೆಗಳು, ಸಂವಿಧಾನದ ಬಗ್ಗೆ ಬೆಳಕು ಚೆಲ್ಲುವ ಕೆಲಸ ಮಾಡ್ತಾರೆ. 24ರಂದು ರಾಷ್ಟ್ರೀಯ ಐಕ್ಯತಾ ಸಮಾವೇಶ ಉದ್ಘಾಟನೆಯಾಗಲಿದೆ. 25ರಂದು ದೊಡ್ಡ ರ್ಯಾಲಿ ಮಾಡಲಾಗುತ್ತೆ. ಶಾಲಾ ಕಾಲೇಜುಗಳಲ್ಲಿ ಸಂವಿಧಾನ ಪೀಠಿಕೆ ಓದುವ ಕೆಲಸ ಆಗ್ತಿದೆ. ಬಜೆಟ್ ಪುಸ್ತಕದ ಮೊದಲ ಮುಖ ಪುಟದಲ್ಲಿ ಪ್ರಿಯಾಂಬಲ್ ಉಲ್ಲೇಖಮಾಡಲಾಗಿದೆ. ಸಂವಿಧಾನ ಏನು ಕೊಟ್ಟಿದೆ ಅನ್ನೋದು ಜನರಿಗೆ ಗೊತ್ತಾಗಬೇಕು. ಅವರ ಹಕ್ಕುಗಳನ್ನು ಕೇಳಲಿಕ್ಕೆ ಹೋರಾಟ ಮಾಡುವುದಕ್ಕೆ, ಶಿಕ್ಷಣ ಸಂಘಟನೆ ಹೋರಾಟ ಬಾಬಾಸಾಹೇಬ್ ಅಂಬೇಡ್ಕರ್ ಅವರು ಕೊಟ್ಟಿರುವ ಮೂರು ಅಸ್ತ್ರಗಳು. ಸ್ವಾತಂತ್ರ್ಯ ಬಂದು 77 ವರ್ಷ ಆಗೊಯ್ತು. ಸಂವಿಧಾನ ಜಾರಿಯಾಗಿ 75 ವರ್ಷ ಆದ್ರೂ ಎಲ್ಲರಿಗೂ ಸಮಾನತೆ ಸಿಕ್ಕಿಲ್ಲ. ಸಂವಿಧಾನಕ್ಕೆ ದಕ್ಕೆ ತರುವ ಕೆಲಸ ಮಾಡಿದ್ರೆ ವಿಫಲ ಮಾಡಲೇಬೇಕು. ಇದಕ್ಕೆ ಯಾವುದೇ ಪಕ್ಷ, ವ್ಯಕ್ತಿ ಅಂತಾ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

# ಮಂಗಳೂರಿನಿಂದ ಲೋಕಸಭೆಗೆ ಸ್ಪರ್ಧಿಸ್ತಾರಾ ಬಿ ರಮಾನಾಥ ರೈ

**ಬೆಂಗಳೂರು:** ಲೋಕಸಭಾ ಚುನಾವಣೆ ಹತ್ತಿರ ಬರುತ್ತಿದ್ದಂತೆ ಒಬ್ಬೊಬ್ಬರಾಗಿಯೇ ಎಲ್ಲಾ ಪಕ್ಷಗಳಲ್ಲಿಯೂ ಟಿಕೆಟ್ ಆಕಾಂಕ್ಷಿಗಳಾಗಿ ಗುರುತಿಸಿಕೊಳ್ಳುತ್ತಿದ್ದಾರೆ. ಇದೀಗ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಸೋತಿದ್ದ ಮಾಜಿ ಸಚಿವ ಬಿ ರಮಾನಾಥ ರೈ ಕೂಡ ಲೋಕಸಭೆಗೆ ಸ್ಪರ್ಧಿಸಲು ಪರೋಕ್ಷವಾಗಿ ಇಂಗಿತ ವ್ಯಕ್ತಪಡಿಸಿದ್ದಾರೆ. ಮಂಗಳೂರಿನಲ್ಲಿ ಬೃಹತ್ ಕಾಂಗ್ರೆಸ್ ಸಮಾವೇಶ ನಡೆಯಲಿರುವ ಸ್ಥಳಕ್ಕೆ ಭೇಟಿ ನೀಡಿ ಸಿದ್ಧತೆ, ಸ್ಥಳ ಪರಿಶೀಲನೆ ಮಾಡಿದ ವೇಳೆ ಸುದ್ದಿಗಾರರ ಜೊತೆ



ಮಾತನಾಡಿದ ಮಾಜಿ ಸಚಿವ ರಮಾನಾಥ ರೈ, ಮುಂದಿನ ಲೋಕಸಭಾ ಚುನಾವಣೆಯ ಅಭ್ಯರ್ಥಿಯ ಘೋಷಣೆ ಈ ಸಮಾವೇಶದಲ್ಲಿ ನಡೆಯುವುದಿಲ್ಲ. ಪಕ್ಷದ ಹೈಕಮಾಂಡ್ ಈ ನಿರ್ಧಾರವನ್ನು ತೆಗೆದುಕೊಳ್ಳಲಿದೆ. ಸರ್ವೇ ಮೂಲಕ ಅಭ್ಯರ್ಥಿಯನ್ನು ಆಯ್ಕೆ ಮಾಡುತ್ತದೆ, ನಾನು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತ. ಪಕ್ಷ ನನಗೆ ಎಲ್ಲಾ ಅವಕಾಶ ನೀಡಿದೆ. ಈ ಬಾರಿ ಲೋಕಸಭಾ ಚುನಾವಣೆಗೆ ಅವಕಾಶ ದೊರೆತಲ್ಲಿ ಪಕ್ಷದ ನಿರ್ಧಾರಕ್ಕೆ ಬದ್ಧ ಎಂದು ಹೇಳಿದರು.

ಇನ್ನು, ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರ ಮತೀಯವಾದಕ್ಕೆ ಪುಷ್ಟಿ ಕೊಡುವ ಕ್ಷೇತ್ರ. ಆ ಕಾರಣಕ್ಕಾಗಿ ಇಲ್ಲಿ ನಿರಂತರವಾಗಿ ಮತೀಯವಾದಿ ಪಕ್ಷ ಗೆಲ್ಲುತ್ತಿದೆ ಎಂದ ಬಿ ರಮಾನಾಥ ರೈ, ಆದರೆ ಈ ಬಾರಿ ಆ ರೀತಿ ನಡೆಯಲ್ಲ. ಮತೀಯವಾದ ಅನ್ನೋದು ಒಂದು ಸೀಸನಲ್ ಜ್ವರ ಇದ್ದ ಹಾಗೆ. ಕಾಲ ಕ್ರಮೇಣ ಆ ಜ್ವರ ಕಡಿಮೆಯಾಗುತ್ತೆ. ದಕ್ಷಿಣ ಕನ್ನಡದಲ್ಲೂ ಇದೇ ಪರಿಸ್ಥಿತಿ ಆಗಲಿದೆ. ಮತದಾರರನ್ನು ಭಾವನಾತ್ಮಕವಾಗಿ ಸೆಳೆಯುವ ಪ್ರಯತ್ನ ಬಿಜೆಪಿ ಮಾಡುತ್ತಿದೆ. ಆದರೆ ಪ್ರತಿಬಾರಿಯೂ ಈ ತಂತ್ರ ನಡೆಯಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಡಿಕೆ ಸುರೇಶ್ ವಿರುದ್ಧ ಹೆಚ್‌ಡಿಕೆ ಸ್ಪರ್ಧಿಸಿದರೂ ಚಿಂತಿಲ್ಲ

**ಮಂಗಳೂರು:** ಜೆಡಿಎಸ್ ನಾಯಕ ಹೆಚ್‌ಡಿ ಕುಮಾರಸ್ವಾಮಿ ಬೆಂಗಳೂರು ಗ್ರಾಮಾಂತರ ಕ್ಷೇತ್ರದಿಂದ ಸಂಸದ ಡಿಕೆ ಸುರೇಶ್ ವಿರುದ್ಧವೇ ಸ್ಪರ್ಧಿಸಿದರೂ ಬೇಸರವಿಲ್ಲ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದರು.



ಮಂಗಳೂರಿನಲ್ಲಿ ಕಾಂಗ್ರೆಸ್ ಸಮಾವೇಶ ಮೈದಾನದ ಬಳಿ ಮಾತನಾಡಿದ ಅವರು, ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡ, ಕುಮಾರಸ್ವಾಮಿ ವಿರುದ್ಧವೇ ಸ್ಪರ್ಧಿಸಿದ್ದವನು ನಾನು. ನನ್ನ ಸಹೋದರನ ವಿರುದ್ಧ ಅನಿತಾ ಕುಮಾರಸ್ವಾಮಿ ಸ್ಪರ್ಧೆ ಮಾಡಿದರೂ ಆತನೇ ಗೆದ್ದಿದ್ದಾನೆ. ಬಿಜೆಪಿ, ಜೆಡಿಎಸ್ ನನ್ನ ಸಹೋದರನ ವಿರುದ್ಧ ಸ್ಪರ್ಧಿಸಿದ್ದಾಗಲೂ ಗೆದ್ದಿದ್ದಾನೆ. ಸುರೇಶ್ ದೆಹಲಿಯಲ್ಲಿ ಕೂರುವ ಎಂಪಿ ಅಲ್ಲ, ಹಳ್ಳಿಯ ಸಂಸದ ಎಂದು ಹೇಳಿದರು.

ದೇವೇಗೌಡ, ಕುಮಾರಸ್ವಾಮಿ ನಮ್ಮಲ್ಲಿ ಎಂಪಿ ಆಗಿದ್ದವರು. ಹಳೇ ಎಂಪಿಗಳು ಹಾಗೂ ಈ ಎಂಪಿ ವ್ಯತ್ಯಾಸ ಜನ ನೋಡಿದ್ದಾರೆ. ಬೆಂಗಳೂರು ಗ್ರಾಮಾಂತರದಲ್ಲಿ ಯಾರೇ ನಿಂತರೂ ಸ್ವಾಗತಿಸುತ್ತೇವೆ ಎಂದು ಡಿಕೆ ಶಿವಕುಮಾರ್ ಹೇಳಿದರು.

ರಾಜಕೀಯದಲ್ಲಿ ಯಾವುದೂ ಶಾಶ್ವತ ಹಾಗೂ ಅಸಾಧ್ಯವಲ್ಲ. ರಾಜಕಾರಣ ಸಾಧ್ಯತೆಗಳ ಕಲೆ, ಹೀಗಾಗಿ ಇಲ್ಲಿ ಬದಲಾವಣೆ ವಿಶ್ವಾಸವಿದೆ. ಹೀಗಾಗಿ ಮಂಗಳೂರಿನಲ್ಲಿ ಈ ಬಾರಿ ಸಮಾವೇಶ ಮಾಡುತ್ತಾ ಇದ್ದೇವೆ. ಈ ಭಾಗದಲ್ಲಿ ನಾವು ಗೆಲ್ಲುವ ಸಾಧ್ಯತೆ ಹೆಚ್ಚಿದೆ, ಹಾಗಾಗಿ ಸಮಾವೇಶ ಮಾಡುತ್ತಿದ್ದೇವೆ. ಇಲ್ಲಿ ನಿರುದ್ಯೋಗ ಇದೆ, ಇಲ್ಲಿನ ಜನ ಬೇರೆ ಕಡೆ ಉದ್ಯೋಗಕ್ಕೆ ಹೋಗುತ್ತಾ ಇದ್ದಾರೆ. ಇಲ್ಲಿನವರು ಸೌದಿ, ಬೆಂಗಳೂರು, ಮುಂಬೈ ಕಡೆ ಹೋಗುತ್ತಾ ಇದ್ದಾರೆ. ಇಲ್ಲಿ ಎಷ್ಟೇ ಶಿಕ್ಷಣ ಸಂಸ್ಥೆಗಳಿದ್ದರೂ ಮಕ್ಕಳು ಡ್ರಾಪ್ ಔಟ್ ಆಗುತ್ತಿದ್ದಾರೆ ಎಂದು ಅವರು ತಿಳಿಸಿದರು.

ಇಲ್ಲಿ ಧರ್ಮ ರಾಜಕೀಯ ಇದೆ. ಬಿಜೆಪಿ ಅಭಿವೃದ್ಧಿ ಮಾಡುತ್ತಾ ಇಲ್ಲ. ಈ ಜಿಲ್ಲೆಯ ಬಗ್ಗೆ ನಾವು ಹೊಸ ಅಲೋಚನೆ ಮಾಡುತ್ತೇವೆ. ಉದ್ಯೋಗ ಸೃಷ್ಟಿಸುತ್ತೇವೆ, ಸಂಜೆ ಏಳು ಗಂಟೆ ಬಳಿಕ ಮಂಗಳೂರು ಡೆಡ್ ಸಿಟಿ ಆಗಿದೆ. ವ್ಯಾಪಾರ ವಹಿವಾಟು ನಡೆದು ಜನರಿಗೆ ಉದ್ಯೋಗ ಸಿಗಬೇಕು. ಇಲ್ಲಿನ ಬ್ಯಾಂಕ್‌ಗಳು ಕೂಡ ಇಲ್ಲಿಂದ ಬೇರೆ ಕಡೆ ಹೋಗುತ್ತಾ ಇವೆ. ಇಲ್ಲಿನ ಜನ ದೇವಸ್ಥಾನಗಳಲ್ಲಿ ಭಕ್ತಿಯಿಂದ ಇರುತ್ತಾರೆ. ಅದೇ ವ್ಯವಹಾರಗಳಲ್ಲೂ ಇರಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಜೆರೋಸಾ ಶಾಲೆ ವಿಚಾರದಲ್ಲಿ ಕಾನೂನು ರೀತಿಯಲ್ಲಿ ಪ್ರಕ್ರಿಯೆಗಳು ನಡೆಯಲಿವೆ. ಯಾರೇ ರಾಜಕೀಯ ಮಾಡಿದ್ದರೂ ಕಾನೂನು ಅದರ ಕೆಲಸ ಮಾಡಲಿದೆ. ಅವರು ಹೋರಾಟ ಮಾಡುತ್ತಾ ಇರಲಿ, ಕಾನೂನು ಕೆಲಸ ಮಾಡುತ್ತದೆ. ನಾನು ಪೊಲೀಸ್ ಕೆಲಸ ಮಾಡಲು ಆಗಲ್ಲ, ಪೊಲೀಸರು ಮಾಡುತ್ತಾರೆ. ನಮ್ಮ ರಾಜ್ಯಕ್ಕೆ ಅನ್ಯಾಯ ಆದಾಗ ಬಿಜೆಪಿ ಮಾತನಾಡಿಲ್ಲ. ಬಜೆಟ್‌ನಲ್ಲಿ ದ.ಕ ಜಿಲ್ಲೆಗೂ ಕೊಟ್ಟಿದ್ದೇವೆ, ಮುಸ್ಲಿಮರಿಗೆ ಕೂಡಲೇ ಬಾರದಾ ಬಿಜೆಪಿ ರಾಜಕಾರಣ ಮಾಡುತ್ತಾ ಇದೆ, ಅದು ಮಾಡಲಿ ಎಂದು ಡಿಕೆ ಶಿವಕುಮಾರ್ ಟೀಕಿಸಿದರು.

ಲೋಕಸಭೆ ಚುನಾವಣೆ ಸಂಬಂಧ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೂರು ನಾಲ್ಕು ಹೆಸರುಗಳನ್ನು ಶಾರ್ಟ್ ಲಿಸ್ಟ್ ಮಾಡಿದ್ದೇವೆ. ಟೀಂ ಸರ್ವೇ ಬಳಿಕ ನೋಡೋಣ ಎಂದು ಅವರು ಹೇಳಿದರು.

ಲೋಕಸಭೆ ಚುನಾವಣೆ ಸ್ಪರ್ಧೆ

# ಅಚ್ಚರಿಯ ಹೇಳಿಕೆ ನೀಡಿದ ಜಗದೀಶ್ ಶೆಟ್ಟರ್!

**ನವದೆಹಲಿ:** ಮುಂಬರುವ ಲೋಕಸಭೆ ಚುನಾವಣೆಗೆ ಬೆಳಗಾವಿಯಿಂದ ಸ್ಪರ್ಧಿಸುವ ಬಗ್ಗೆ ಯಾವುದೇ ನಿರ್ಧಾರ ಮಾಡಿಲ್ಲ ಎಂದು ಇತ್ತೀಚೆಗಷ್ಟೇ ಮರಳಿ ಬಿಜೆಪಿ ಸೇರ್ಪಡೆಯಾಗಿರುವ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಹೇಳಿದ್ದಾರೆ. ಬಿಜೆಪಿ ರಾಷ್ಟ್ರೀಯ ಸಮಾವೇಶದಲ್ಲಿ ಭಾಗವಹಿಸಲು ದೆಹಲಿಯಲ್ಲಿರುವ ಅವರು, ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ನನ್ನ ಹೆಸರು ಕೇಳಿ ಬರುತ್ತಿದೆ. ಯಾವ ಉದ್ದೇಶದಿಂದ ನನ್ನ ಹೆಸರು ಕೇಳಿ ಬರ್ತಿದೆ ಎಂಬುದು ಗೊತ್ತಿಲ್ಲ. ಆ ಕುರಿತು ಇಂದಿನ ಸಭೆಯಲ್ಲಿ ಯಾವುದೂ ಚರ್ಚೆ ಆಗಲ್ಲ ಎಂದು ಹೇಳಿದ್ದಾರೆ.



ಲೋಕಸಭೆ ಚುನಾವಣೆ ವಿಚಾರದಲ್ಲಿ ಹೈಕಮಾಂಡ್ ತೆಗೆದುಕೊಳ್ಳುವ ತೀರ್ಮಾನಕ್ಕೆ ಬದ್ಧನಾಗಿದ್ದೇನೆ ಎಂದು ಜಗದೀಶ್ ಶೆಟ್ಟರ್ ಸ್ಪಷ್ಟಪಡಿಸಿದ್ದಾರೆ. ಶೆಟ್ಟರ್ ಅವರು ಇತ್ತೀಚೆಗೆ ಮರಳಿ ಬಿಜೆಪಿ ಸೇರ್ಪಡೆಯಾದ ಬೆನ್ನಲ್ಲೇ, ಅವರು ಬೆಳಗಾವಿ ಕ್ಷೇತ್ರದಿಂದ ಲೋಕಸಭೆ ಅಖಾಡಕ್ಕೆ ಧುಮುಕಲಿದ್ದಾರೆ ಎಂದು ವರದಿಯಾಗಿತ್ತು. ನಂತರ ಆ ಬಗ್ಗೆ ಸಾಕಷ್ಟು ವದಂತಿಗಳೂ ಹಬ್ಬಿದ್ದವು. ಈ ಎಲ್ಲ ಬೆಳವಣಿಗೆಗಳ ಬೆನ್ನಲ್ಲೇ ಇದೀಗ ಸ್ಪರ್ಧಿಸುವ ನಿರ್ಧಾರ ಮಾಡಿಲ್ಲ ಎಂದು ಶೆಟ್ಟರ್ ಹೇಳಿರುವುದು ಕುತೂಹಲಕ್ಕೆ ಕಾರಣವಾಗಿದೆ.

ಈ ಮಧ್ಯೆ, ಬಿಜೆಪಿ ರಾಷ್ಟ್ರೀಯ ಮಂಡಳಿ ಸಭೆ ದೆಹಲಿಯಲ್ಲಿ ಆರಂಭವಾಗಿದೆ. ದೆಹಲಿಯ ಭಾರತ್ ಮಂಟಪದಲ್ಲಿ ಸಭೆ ನಡೆಯುತ್ತಿದ್ದು, ಸಭೆಯಲ್ಲಿ ಲೋಕಸಭಾ ಚುನಾವಣೆ ಸಿದ್ಧತೆ ಬಗ್ಗೆ ಸಮಾಲೋಚನೆ ನಡೆಯಲಿದೆ. ಜತೆಗೆ, ನರೇಂದ್ರ ಮೋದಿ ಸರ್ಕಾರದ 10 ವರ್ಷಗಳ ಸಾಧನೆ ಬಗ್ಗೆಯೂ ಚರ್ಚೆ ನಡೆಯಲಿದೆ. ಸಭೆಯಲ್ಲಿ ಪ್ರಧಾನಿ ಮೋದಿ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ, ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ಸಂಸದರು ಹಾಗೂ ಎಲ್ಲಾ ರಾಜ್ಯಗಳ ಪಕ್ಷದ ಶಾಸಕರು ಭಾಗಿಯಾಗಿದ್ದಾರೆ.

ಬೆಳಗಾವಿಯಲ್ಲಿ ಬದಲಾಗಿದ್ದ ರಾಜಕೀಯ ಲೆಕ್ಕಾಚಾರ

ಮುಂದಿನ ಲೋಕಸಭಾ ಚುನಾವಣೆಯಲ್ಲಿ ಬೆಳಗಾವಿಯಿಂದ ಮಂಗಳಾ ಅಂಗಡಿಗೆ ಟಿಕೆಟ್ ಸಿಗುವುದು ಅನುಮಾನ ಎಂಬ ಬಗ್ಗೆ ಶೆಟ್ಟರ್ ಬಿಜೆಪಿಗೆ ಮರು ಸೇರ್ಪಡೆಯಾಗುವುದಕ್ಕೂ ಮುನ್ನ ಚರ್ಚೆಯಾಗಿತ್ತು. ಆದರೆ, ಶೆಟ್ಟರ್ ಬಿಜೆಪಿ ಸೇರ್ಪಡೆಯಾಗುತ್ತಿದ್ದಂತೆಯೇ ಬೆಳಗಾವಿ ಜಿಲ್ಲೆಯ ರಾಜಕಾರಣದಲ್ಲಿ ಲೆಕ್ಕಾಚಾರಗಳು ಬದಲಾಗಿದ್ದವು. ಶೆಟ್ಟರ್, ಅಂಗಡಿ ಇಬ್ಬರೂ ಬೀಗರಾಗಿರುವ ಹಿನ್ನೆಲೆ ಅವರಿಗೆ ರಾಜಕೀಯ ಲಾಭ ದೊರೆಯುವ ಮಾತುಗಳು ಮುನ್ನೆಲೆಗೆ ಬಂದಿದ್ದವು.

ಈ ಎಲ್ಲ ಬೆಳವಣಿಗೆಗಳ ಮಧ್ಯೆ, ಜಗದೀಶ್ ಶೆಟ್ಟರ್ ಅವರೇ ಬೆಳಗಾವಿಯಿಂದ ಲೋಕಸಭೆ ಚುನಾವಣೆಗೆ ಸ್ಪರ್ಧೆ ಮಾಡಲಿದ್ದಾರೆ. ಈ ವಿಚಾರವಾಗಿ ಬೇಡಿಕೆಯನ್ನೂ ಮುಂದಿಟ್ಟಿದ್ದಾರೆ ಎಂಬೆಲ್ಲ ಊಹಾಪೋಹಗಳೂ ಹರಡಿದ್ದವು. ಇದೀಗ ಶೆಟ್ಟರ್ ನೀಡಿರುವ ಹೇಳಿಕೆ ಮತ್ತಷ್ಟು ಅಚ್ಚರಿಗೆ ಕಾರಣವಾಗಿದೆ.

# ಆಸ್ತಿಗಾಗಿ ಹೆತ್ತ ತಾಯಿಯನ್ನೇ ದಿಗ್ಬಂದನ ಮಾಡಿದ ಮಕ್ಕಳು

**ತುಮಕೂರು:** ಕೆಲ ಮಕ್ಕಳು ತಮ್ಮ ಹೆತ್ತ ತಾಯಿಯನ್ನು ದೇವರಂತೆ ಕಾಣುತ್ತಾರೆ ಮತ್ತು ಆರಾಧಿಸುತ್ತಾರೆ. ಕೊನೆಗಾಲದವರೆಗೂ ತಮ್ಮ ತಾಯಿಯನ್ನು ಸುಖವಾಗಿ ನೋಡಿಕೊಳ್ಳುತ್ತಾರೆ. ತಾಯಿಯೇ ದೇವರು ಎನ್ನುವವರು ಅನೇಕ ಮಂದಿ ಇದ್ದಾರೆ. ಆದರೆ ಇವರ ನಡುವೆ ತಂದೆ-ತಾಯಿಯನ್ನು ಕಿರುಕುಳ ನೀಡಿ ಖುಷಿ ಪಡುವವರೂ ಇದ್ದಾರೆ. ಹಣ-ಆಸ್ತಿಗಾಗಿ ಹೆತ್ತ ತಾಯಿ ಎನ್ನುವುದನ್ನೂ ನೋಡದೆ ಅಮಾನವೀಯವಾಗಿ ನಡೆಸಿಕೊಳ್ಳುತ್ತಾರೆ. ಇಂತಹದ್ದೇ ಘಟನೆ ಕಲ್ಪತರು ನಾಡು ತುಮಕೂರಿನಲ್ಲಿ ನಡೆದಿದೆ.



ಹೌದು, ಆಸ್ತಿಗಾಗಿ ಹೆತ್ತ ತಾಯಿಯನ್ನು ದಿಗ್ಬಂದನ ಮಾಡಿರುವ ಘಟನೆ ತುಮಕೂರಿನ ಶಿರಾ ಗೇಟ್ ಸಾಡೆಪುರದಲ್ಲಿ ನಡೆದಿದೆ. ಕಳೆದ 11 ತಿಂಗಳಿನಿಂದ ಮಗ-ಸೊಸೆ ಇಬ್ಬರೂ ಸೇರಿ ತಾಯಿಯನ್ನು ಬಂಧನದಲ್ಲಿಟ್ಟಿದ್ದಾರೆ. ಪಂಚಾಕ್ಷರಮ್ಮ 80 ವರ್ಷದ ವಯೋ ವೃದ್ದೆ ತಾಯಿ. ಇವರು ನಿವೃತ್ತ ಸಿಡಿಪಿಓ ಆಗಿದ್ದಾರೆ. 12 ಮನೆಗಳು ಸೇರಿದಂತೆ ಒಟ್ಟು ಆಸ್ತಿಗೆ ಹಕ್ಕುದಾರಾಗಿದ್ದಾರೆ ಈ ಪಂಚಾಕ್ಷರಮ್ಮ. ಈಗಾಗಲೇ ವೃದ್ದೆಯ ಬಳಿ ಇದ್ದ ಒಡವೆಗಳನ್ನು ಮಕ್ಕಳು ಕಸಿದುಕೊಂಡಿದ್ದಾರೆ.

ಸದ್ಯ ಇರುವ ಮನೆಗಳನ್ನು ಮಕ್ಕಳ ಹೆಸರಿಗೆ ಮಾಡಿಸಿಕೊಳ್ಳಲು ಕಿರುಕುಳ ನೀಡುತ್ತಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಮಗ ಜೇಮ್ ಸುರೇಶ್ ಹಾಗೂ ಸೊಸೆ ಆಶಾ ಇಬ್ಬರೂ ಸೇರಿ ಪಂಚಾಕ್ಷರಮ್ಮನನ್ನು ಮನೆಯಲ್ಲೆ ಬೀಗ ಜಡಿದು ದಿಗ್ಬಂದನ ಮಾಡಿದ್ದಾರೆ ಎನ್ನಲಾಗಿದೆ. ಸ್ಥಳೀಯರ ಮೂಲಕ ಸಾಂತ್ವಾನ ಕೇಂದ್ರ, ಸಖಿ ಕೇಂದ್ರ ಹಾಗೂ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಕ್ಕೆ ಮಾಹಿತಿ ರವಾನೆಯಾಗಿದೆ. ಬಳಿಕ ಅವರ ಮನೆಗೆ ತುಮಕೂರು ನಗರ ಪೊಲೀಸರು ಹಾಗೂ ಸಾಂತ್ವಾನ ಕೇಂದ್ರದ ಅಧಿಕಾರಿಗಳು ಭೇಟಿ ನೀಡಿದ್ದಾರೆ.

ವೃದ್ದೆಯನ್ನು ರಕ್ಷಿಸಿ ಸಾಂತ್ವಾನ ಕೇಂದ್ರಕ್ಕೆ ಕರೆದುಕೊಂಡು ಹೋಗಿ ರಕ್ಷಣೆ ಮಾಡಿದ್ದಾರೆ. ಸಖಿ ಕೇಂದ್ರದಲ್ಲಿಆಕೆಗೆ ಎರಡು ದಿನ ಚಿಕಿತ್ಸೆ ನೀಡಲಾಗಿದೆ. ಬಳಿಕ ಅಧಿಕಾರಿಗಳು ಮಕ್ಕಳಿಗೆ ಮಾಹಿತಿ ನೀಡಿದ್ದಾರೆ. ಆದರೆ ಮಕ್ಕಳು ಮಾತ್ರ ಆ ಕಡೆ ತಲೆ ಹಾಕಿ ನೋಡಿಲ್ಲ. ಹೀಗಾಗಿ ಮಕ್ಕಳು ಬಾರದ ಹಿನ್ನೆಲೆ, ಅಧಿಕಾರಿಗಳು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಮೊರೆ ಹೋಗಿದ್ದಾರೆ. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ನೂರುನ್ನೀಸರಿಗೆ ದೂರು ನೀಡಿದ್ದಾರೆ.

ಬಳಿಕ ನ್ಯಾಯಾಧೀಶರು ಹಾಗೂ ಸಾಂತ್ವಾನ ಕೇಂದ್ರದ ಸಿಬ್ಬಂದಿ ವೃದ್ದೆಯನ್ನ ಮನೆಗೆ ಕರೆದುಕೊಂಡು ಹೋಗಿ ವಾಪಸ್ ಬಿಟ್ಟಿದ್ದಾರೆ. ಮಕ್ಕಳಿಗೆ ವಾರ್ನ್ ಮಾಡಿ ತಾಯಿಯನ್ನು ಸರಿಯಾಗಿ ನೋಡಿಕೊಳ್ಳುವಂತೆ ನ್ಯಾಯಾಧೀಶರು ಎಚ್ಚರಿಕೆ ನೀಡಿದ್ದಾರೆ. ನ್ಯಾಯಾಧೀಶರ ಮುಂದೆ ಸರಿಯಾಗಿ ನೋಡಿಕೊಳ್ಳುತ್ತೇವೆ ಎಂದು ಮಕ್ಕಳು ಹೇಳಿದ್ದಾರೆ.

ಪಂಚಾಕ್ಷರಮ್ಮನಿಗೆ ಒಟ್ಟು ನಾಲ್ಕು ಜನ ಮಕ್ಕಳಿದ್ದಾರೆ. ಈಕೆಗೆ 50 ಸಾವಿರ ಪೆನ್ಶನ್ ಕೂಡ ಬರುತ್ತಿದ್ದು, ಈ ಹಣವನ್ನೂ ಕೂಡ ಮಕ್ಕಳೇ ಬಳಸಿಕೊಳ್ಳುತ್ತಿದ್ದರು. ಇಷ್ಟಾದರೂ ನೋಡಿಕೊಳ್ಳದೇ ಆಸ್ತಿಗಾಗಿ ಹೆತ್ತ ತಾಯಿಯನ್ನು ಬಂಧನದಲ್ಲಿಟ್ಟಿದ್ದರು. ನ್ಯಾಯಾಧೀಶರ ಮಧ್ಯಪ್ರವೇಶದಿಂದ ಪ್ರಕರಣ ಇತ್ಯರ್ಥವಾಗಿದೆ. ತುಮಕೂರು ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಇನ್ನಾದರೂ ನಾಲ್ವರು ಮಕ್ಕಳು ತಮ್ಮ ಹೆತ್ತ ತಾಯಿಗೆ ಯಾವುದೇ ಕಿರುಕುಳ ನೀಡದೇ ಚೆನ್ನಾಗಿ ನೋಡಿಕೊಳ್ಳುತ್ತಾರಾ ಎಂದು ಕಾದು ನೋಡಬೇಕಿದೆ.

# ರಂಭಾಪುರಿ ಶ್ರೀಗಳ ಕಾರಿಗೆ ಚಪ್ಪಲಿ ಎಸೆತ

**ಬಾಗಲಕೋಟೆ:** ರಂಭಾಪುರಿ ಶ್ರೀಗಳ ಕಾರಿಗೆ ಮಹಿಳೆಯೊಬ್ಬರು ಚಪ್ಪಲಿ ಎಸೆದ ಘಟನೆ ಬಾಗಲಕೋಟೆ ಜಿಲ್ಲೆಯ ಕಲಾದಗಿಯಲ್ಲಿ ನಡೆದಿದೆ.




ಬಾಗಲಕೋಟೆ ಯಿಂದ ಕಲಾದಗಿ ಮಾರ್ಗವಾಗಿ ಉದಗಟ್ಟಿ ಗ್ರಾಮಕ್ಕೆ ಅಡ್ಡಪಲ್ಲಕ್ಕಿ ಕಾರ್ಯಕ್ರಮಕ್ಕೆ ತೆರಳುತ್ತಿದ್ದಾಗ ರಂಭಾಪುರಿ ಶ್ರೀ ವಿರುದ್ಧ ಜನರು ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಂಭಾಪುರಿ ಶ್ರೀಗಳು ತೆರಳುವ ವಾಹನವನ್ನು ಅಡ್ಡಗಟ್ಟಲು ಪ್ರಯತ್ನ ನಡೆದಿದೆ. ಚಪ್ಪಲಿ ಎಸೆತದ ಬಳಿಕ ತಳ್ಳಾಟ, ನೂಕಾಟ ನಡೆದ ಪರಿಣಾಮ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣಗೊಂಡಿದೆ.

# ಮಲ್ಲಿಕಾರ್ಜುನ ಖರ್ಗೆಗೆ ಝಡ್ ಪ್ಲಸ್ ಸೆಕ್ಯೂರಿಟಿ

**ನವದೆಹಲಿ:** ಏಕಾಏಕಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭದ್ರತೆ ಹೆಚ್ಚಳವಾಗಿದ್ದು, ಕಳೆದ ಮೂರು ದಿನದಿಂದ ಖರ್ಗೆಗೆ ಝಡ್ ಪ್ಲಸ್ ಸೆಕ್ಯುರಿಟಿ ನೀಡಲಾಗಿದೆ.



ಸ್ಟೇಟ್ ಸೆಕ್ಯುರಿಟಿ ಜೊತೆಗೆ ಸಿಆರ್ ಪಿಎಫ್ ಝಡ್ ಪ್ಲಸ್ ಸೆಕ್ಯೂರಿಟಿ ಸಹ ನಿಯೋಜನೆ ಮಾಡಲಾಗಿದೆ. ಹೆಚ್ಚುವರಿಯಾಗಿ 8 ಜನ ಸಿಆರ್‌ಪಿಎಫ್ ಗನ್ ಮ್ಯಾನ್ ಗಳ ನಿಯೋಜಿಸಲಾಗಿದೆ.

ಇತ್ತೀಚೆಗೆ ಮಲ್ಲಿಕಾರ್ಜುನ ಖರ್ಗೆಗೆ ಬೆದರಿಕೆ ಕರೆ ಬಂದಿದೆ ಎನ್ನಲಾಗಿದೆ. ಆ ಕಾರಣಕ್ಕೆ ಕಳೆದ ಮೂರು ದಿನದಿಂದ ಝಡ್+ ಸೆಕ್ಯುರಿಟಿ ನೀಡಲಾಗಿದೆ. ಬೆಂಗಳೂರು ನಿವಾಸಕ್ಕೂ ಝಡ್ ಪ್ಲಸ್ ಸೆಕ್ಯುರಿಟಿ ನಿಯೋಜಿಸಲಾಗಿದೆ.

# ಪೀಠ, ಮಠಗಳಿಗೆ ಹೆಚ್ಚಿನ ಅನುದಾನ ನೀಡಿದರೆ ಸಮಾಜಕ್ಕೆ ಉತ್ತಮ ಮಾರ್ಗದರ್ಶನ

**ಬಾಗಲಕೋಟೆ:** ಹಿಂದು ಸಂಸ್ಕೃತಿ ಪ್ರತಿಬಿಂಬಿಸುವ ಪೀಠ, ಮಠಗಳಿಗಾಗಲಿ ಅಥವಾ ಧಾರ್ಮಿಕ ಕೇಂದ್ರಗಳಿಗೆ ಹೆಚ್ಚಿನ ಅವಕಾಶ ಕೊಟ್ಟರೆ ಸಮಾಜಕ್ಕೆ ಉತ್ತಮ ಮಾರ್ಗದರ್ಶನ ನೀಡಲಿಕ್ಕೆ ಸಾಧ್ಯವಿದೆ ಎಂಬುದು ನಮ್ಮ ಭಾವನೆ ಎಂದು ಬಾಳೆಹೊನ್ನೂರು ಮಠದ ಜಗದ್ಗುರು ರಂಭಾಪುರಿ ಶ್ರೀ ಹೇಳಿದ್ದಾರೆ.



ನಿನ್ನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ ಬಜೆಟ್ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿ ತನ್ನ ಅಭಿಪ್ರಾಯ ತಿಳಿಸಿದ ಬಾಳೆಹೊಣ್ಣೂರು ಮಠದ ರಂಭಾಪುರಿ ಶ್ರೀ, ರಾಜ್ಯ ಸರಕಾರ ಬಜೆಟ್ ಮಂಡನೆ ಮಾಡಿರುವಂತದ್ದು ಎಲ್ಲರಿಗೂ ಗೊತ್ತಿರುವಂತಹದ್ದು. ಮುಂದಿನ ಲೋಕಸಭಾ ಚುನಾವಣೆ ದೃಷ್ಟಿಯಲ್ಲಿಟ್ಟುಕೊಂಡು ಮಂಡಿಸಿದ್ದಾರೆ. ಅದರಲ್ಲಿ ಕೆಲ ಅಂಶಗಳು ಅಡಕವಾಗಿರಬಹುದು. ಬಜೆಟ್ ನಲ್ಲಿ ಸಮಗ್ರತೆ ಕಾಣುವಂತ ನೋಟ ಅಪರೂಪ. ಕೆಲವು ವರ್ಗಗಳನ್ನು ತುಷ್ಟೀಕರಣ ಮಾಡೋಕೆ ಬಹಳಷ್ಟು ಅವಕಾಶ ಕೊಟ್ಟಿದ್ದಾರೆ ಎಂದರು.

ಸನಾತನ ಮೂಲ ಧರ್ಮಪೀಠಗಳಿಗೆ ಹೆಚ್ಚಿನ ಒತ್ತು, ಸಹಕಾರ, ಸಿಗುವಷ್ಟು ಮಟ್ಟಿಗೆ ಸಿಗುತ್ತಿಲ್ಲ ಎಂಬ ಕೊರಗು ನಮ್ಮದಿದೆ ಎಂದ ರಂಭಾಪುರಿ ಶ್ರೀ, ಇದನ್ನು ಜವಾಬ್ದಾರಿ ಸ್ಥಾನದಲ್ಲಿರುವವರು ಸರಿಪಡಿಲಿಕ್ಕೆ ಒಂದು ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ಇಚ್ಚೆ ಪಡುತ್ತೇವೆ. ಹಿಂದುಳಿದ ಮಠ ಮಾನ್ಯಗಳಿಗಾಗಲಿ ಧಾರ್ಮಿಕ ಕೇಂದ್ರಗಳಿಗಾಗಲಿ ಅನುದಾನ ನೀಡಬೇಕು. ಕೆಲವು ಧರ್ಮದವರಿಗೆ ವಿಶೇಷವಾದ ಸೌಕರ್ಯಗಳನ್ನು ಕೊಟ್ಟಿರೋದನ್ನು ನೋಡುತ್ತೀರಿ ಎಂದು ಅಲ್ಪ ಸಂಖ್ಯಾತ ಸಮುದಾಯಗಳಿಗೆ ಅನುದಾನ ನೀಡಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು.

ಹಜ್ ಭವನಕ್ಕೆ ಹತ್ತು ಕೋಟಿ ಅನುದಾನ ನೀಡಿರುವ ವಿಚಾರದ ಬಗ್ಗೆಯೂ ಮಾತನಾಡಿದ ರಂಭಾಪುರಿ ಶ್ರೀ, ಕೆಲವು ಧಾರ್ಮಿಕ ವ್ಯವಸ್ಥೆ ಸಮುದಾಯಕ್ಕೆ ಕೊಟ್ಟಿರುವಾಗ ಬೇರೆ ಸಮುದಾಯದವರಿಗೆ ಅಷ್ಟು ಕೊಡದಿದ್ದರೂ ಸ್ವಲ್ಪ ಆದರೂ ಕೊಟ್ಟರೆ ಅದರಲ್ಲಿ ತಾರತಮ್ಯ ಎನ್ನುವಂತಹ ಭಾವನೆ ಬರೋದಿಲ್ಲ. ಆದರೆ ಇಲ್ಲಿ ನೋಡುವವರಿಗೆ ಸ್ಪಷ್ಟವಾಗಿ ಗೊತ್ತಾಗುತ್ತದೆ. ಹಿಂದು ಸಂಸ್ಕೃತಿ ಪ್ರತಿಬಿಂಬಿಸುವ ಪೀಠ ಮಠಗಳಿಗಾಗಲಿ ಧಾರ್ಮಿಕ ಕೇಂದ್ರಗಳಿಗೆ ಹೆಚ್ಚಿನ ಅವಕಾಶ ಕೊಟ್ಟರೆ ಸಮಾಜಕ್ಕೆ ಉತ್ತಮ ಮಾರ್ಗದರ್ಶನ ನೀಡಲಿಕ್ಕೆ ಸಾಧ್ಯವಿದೆ ಎಂಬುದು ನಮ್ಮ ಭಾವನೆ. ಯಾರನ್ನೇ ದೂರಬೇಕೆಂಬ ಪ್ರಶ್ನೆ ಇದಲ್ಲ. ನಮ್ಮನ್ನು ಆಳುವ ಕೇಂದ್ರ, ರಾಜ್ಯ ಸರಕಾರ ಎಲ್ಲ ಜನರನ್ನು ಒಟ್ಟಿಗೆ ಒಯ್ಯುವಂತಹ ಕೆಲಸ ಆಗಬೇಕು. ವರ್ಗೀಕರಣ ಮಾಡಿ ಜನರಲ್ಲಿ ದ್ವೇಷ ಅಸೂಯೆಗಳನ್ನು ಹುಟ್ಟು ಹಾಕುವಂತ ಕೆಲಸ ಯಾರು ಮಾಡಬಾರದು ಎಂದರು.

## ನಮ್ಮ ಧರ್ಮಗ್ರಂಥ

ಈ ಸಮಾವೇಶದಲ್ಲಿ ದೇಶದ ಸಮಸ್ಯೆಗಳು ಹಾಗೂ ಸಂವಿಧಾನಕ್ಕಿರುವ ಆತಂಕಗಳ ಬಗ್ಗೆ ಚರ್ಚೆ ಆಗಲಿದೆ ಎಂದು ಅವರು ಹೇಳಿದ್ದಾರೆ.

ಶುಕ್ರವಾರ ಮಂಡನೆಯಾದ ಬಜೆಟ್‌ನ ಮೊದಲ ಪುಟದಲ್ಲೇ ಸಂವಿಧಾನದ ಪೀಠಿಕೆಯಲ್ಲಿ ಹಾಕಿಸಲಾಗಿದೆ. ಇದು ಇತಿಹಾಸಲ್ಲೇ ಮೊದಲ ಬಾರಿಗೆ ಬಜೆಟ್‌ನಲ್ಲಿ ಸಂವಿಧಾನದ ಪೀಠಿಕೆ ಉಲ್ಲೇಖ ಆಗಿರುವುದು. ಜನರಿಗೆ ಸಂವಿಧಾನದ ಮಹತ್ವ ಅರ್ಥ ಆಗಬೇಕು. 75 ವರ್ಷ ಆದರೂ ಇನ್ನೂ ಕೂಡ ಎಲ್ಲರಿಗೂ ಸಂವಿಧಾನದ ಹಕ್ಕುಗಳು ಸಿಕ್ಕಿಲ್ಲ. ಸಂವಿಧಾನಕ್ಕೆ ಯಾರೇ ಧಕ್ಕೆ ತರುವ ಪ್ರಯತ್ನ ಮಾಡಿದ್ರೂ ಜನರು ಅದನ್ನು ವಿಫಲಗೊಳಿಸಬೇಕು ಎಂದಿದ್ದಾರೆ.

ರಾಜಕೀಯ, ಸಾಮಾಜಿಕ ಅಸಮಾನತೆ ಇನ್ನೂ ಹೋಗಿಲ್ಲ, ಎಲ್ಲರೂ ಎಚ್ಚೆತ್ತುಕೊಳ್ಳಬೇಕು. ಜಾಗೃತಿ ಎಲ್ಲರಲ್ಲೂ ಬರಬೇಕು. ಸಂವಿಧಾನ ಏನ್ ಹೇಳುತ್ತೆ ಎಂದು ಎಲ್ಲರಿಗೂ ಗೊತ್ತಾಗಲಿ ಎಂದು ಈ ಜಾಥಾ ಮಾಡುತ್ತಿದ್ದೇವೆ. ಸಬ್ ಕಾ ಸಾತ್ ಸಬ್ ಕಾ ವಿಕಾಸ್ ಆಗ್ತಾ ಇದೆಯಾ ಅದರ ಬಗ್ಗೆ ಎಲ್ಲರೂ ಯೋಚನೆ ಮಾಡಬೇಕು. ಅವಕಾಶ ವಂಚಿತರಿಗೆ ಅವಕಾಶ ಸಿಗಬೇಕು ಎಂದಿದ್ದಾರೆ.

## ವಲಸಿಗ ಅಸ್ತ್ರ

ಸೋಮಣ್ಣಗೆ ಟಿಕೆಟ್ ಕೊಡಬಾರದು!

ಸಿದ್ದಗಂಗಾ ಶ್ರೀಗಳ ಆಶೀರ್ವಾದ ನನಗಿದೆ. ಸಿದ್ದಗಂಗಾ ಶ್ರೀಗಳ ನಿರ್ದೇಶನದಂತೆ ನಾನು ಆಕಾಂಕ್ಷಿಯಾಗಿದ್ದೇನೆ. ವಿ.ಸೋಮಣ್ಣ ವಲಸಿಗರು. ಅವರಿಗೆ ಟಿಕೆಟ್ ಕೊಡಬಾರದು. ಸ್ಥಳೀಯರಿಗೆ ಟಿಕೆಟ್ ಕೊಡಬೇಕು ಎಂದು ಜಿಲ್ಲೆಯ ಮುಖಂಡರು ಹೈಕಮಾಂಡ್‌ಗೆ ತಿಳಿಸಿದ್ದೇವೆ ಎಂದು ಹೇಳಿದರು.

ಲೋಕಸಭೆಯಲ್ಲಿ ಸ್ಪರ್ಧಿಸೋದಕ್ಕೆ ಟಿಕೆಟ್ ಕೇಳಿದ್ದೇನೆ. ಹೈಕಮಾಂಡ್ ಗುರುತಿಸಿ ಟಿಕೆಟ್ ಕೊಟ್ಟರೆ ಸ್ಪರ್ಧಿಸುತ್ತೇನೆ ಅಂತಾ ವಿ.ಸೋಮಣ್ಣ ಹೇಳಿದ್ದಾರೆ. ತುಮಕೂರಿನಿಂದ ಟಿಕೆಟ್ ಕೊಡೋ ಬಗ್ಗೆ ನನಗೆ ಮಾಹಿತಿ ಇಲ್ಲ. ತುಮಕೂರಲ್ಲಿ ಮನೆ ಮಾಡಿಲ್ಲ, ಬೆಂಗಳೂರಿನಿಂದ ಓಡಾಡುತ್ತಿದ್ದೇನೆ. ಮೊದಲಿನಿಂದಲೂ ತುಮಕೂರು ಜೊತೆ ನನ್ನ ಸಂಬಂಧವಿದೆ. ಹೈಕಮಾಂಡ್ ಹೇಳಿದ ಕಡೆ ಸ್ಪರ್ಧಿಸುತ್ತೇನೆ ಎಂದು ವಿ.ಸೋಮಣ್ಣ ಹೇಳಿದ್ದಾರೆ.

**ತಪ್ಪಿದ ರಾಜ್ಯಸಭಾ ಟಿಕೆಟ್:** ಹೈಕಮಾಂಡ್ ನಾಯಕರ ಭೇಟಿ ಬಳಿಕ ಮಾತನಾಡಿದ್ದ ವಿ.ಸೋಮಣ್ಣ, ತಾವು ರಾಜ್ಯಸಭಾ ಸ್ಥಾನದ ಟಿಕೆಟ್ ಆಕಾಂಕ್ಷಿ ಎಂದು ಹೇಳಿಕೊಂಡಿದ್ದರು. ಆದರೆ ಈ ಬಾರಿ ಬಾಗಲಕೋಟೆಯ ಮಾಜಿ ಎಂಎಲ್‌ಸಿ, ನಾರಾಯಣ ಭಾಂಡಗೆ ಅವರಿಗೆ ನೀಡಲಾಗಿದೆ. ಇದಕ್ಕೂ ಮೊದಲು ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದ ಆಕಾಂಕ್ಷಿಯೂ ಆಗಿದ್ದರು.

## ಆನೆಗೊಂದಿ ಉತ್ಸವ

ನಾನು ಕಾಂಗ್ರೆಸ್‌ಗೆ ಹೋಗ್ತೇನೆ ಅಂತಾ ಕನಸು ಬಿದ್ದರೂ ಅದು ಸುಳ್ಳು. ರಾಜ್ಯಸಭೆ ಚುನಾವಣೆ ಬಗ್ಗೆ ನನ್ನ ಜೊತೆ ಯಾರೂ ಮಾತನಾಡಿಲ್ಲ. ಕ್ಷೇತ್ರಕ್ಕೆ ಅನುದಾನ ನೀಡಲು ಸಿಎಂ ಸಿದ್ದರಾಮಯ್ಯ ತಾರತಮ್ಯ ಮಾಡುತ್ತಿಲ್ಲ ಎಂದಿದ್ದಾರೆ.

'ಆನೆಗೊಂದಿ ಉತ್ಸವ'ಕ್ಕೂ ಮುಂಚೆ ಅಂದರೆ ಮಾರ್ಚ್ 02 ಮತ್ತು 03 ರಂದು ಐತಿಹಾಸಿಕ 'ಕನಕಗಿರಿ ಉತ್ಸವ' ನಿಗದಿ ಮಾಡಲಾಗಿದೆ. ಕೊಪ್ಪಳ ಜಿಲ್ಲೆಯ ಕನಕಗಿರಿ ಪಟ್ಟಣದಲ್ಲಿ ಉತ್ಸವ ನಡೆಯಲಿದೆ. ಇಂದು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಪೂರ್ವ ಸಿದ್ದತಾ ಸಭೆ ಮಾಡಲಾಗಿದ್ದು, ಬಳಿಕ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ಉತ್ಸವದ ಲೋಗೋ ಹಾಗೂ ಪೋಸ್ಟರ್ ಬಿಡುಗಡೆ ಮಾಡಿದ್ದಾರೆ. ಸಭೆಯಲ್ಲಿ ಉತ್ಸವದ ತಯಾರಿಗಳ ಬಗ್ಗೆ ಮಾಹಿತಿ ಪಡೆದುಕೊಂಡಿದ್ದಾರೆ.

## ನಿಲ್ಲೋದಿಲ್ಲ

ಅನಗತ್ಯ ಗೊಂದಲ ಬೇಡ, ನಾನು ಲೋಕಸಭೆಗೆ ನಿಲ್ಲೋದಿಲ್ಲ. ನಲವತ್ತು ವರ್ಷಗಳಾಯ್ತು ನಾನು ರಾಜಕೀಯಕ್ಕೆ ಬಂದು. ಸರ್ವೆ ಮಾಡಿಸಿಕೊಂಡು ಹೆಸರು ಬರೋ ಹಾಗೆ ಮಾಡ್ಕೋಬೇಕಾ ನಾನು ಚಾಮರಾಜನಗರ ಕಾಂಗ್ರೆಸ್‌ನ ಭದ್ರಕೋಟೆ. ಎದುರಾಳಿಗಳು ಯಾರೇ ನಿಂತರೂ ಕಾಂಗ್ರೆಸ್ ಗೆಲ್ಲುತ್ತೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಚಿವರ ಸ್ಪರ್ಧೆಗೆ ಹೈಕಮಾಂಡ್ ಸೂಚನೆ ವಿಚಾರವಾಗಿ ಮಾತನಾಡಿ, ನಾನು ಲೋಕಸಭೆ ಚುನಾವಣೆಗೆ ನಿಲ್ಲೋದಿಲ್ಲ. ಸಿಎಂ ಎದುರೇ ಈ ಮಾತು ಹೇಳಿದ್ದೀನಿ. ಸಿಎಂ, ಡಿಸಿಎಂ ಬೆಸ್ಟ್ ಅಭ್ಯರ್ಥಿಗಳು ಲೋಕಸಭೆಗೆ. ಅವರಿಗೆ ಯಾವ ಕ್ಷೇತ್ರ ಕೊಡಬೇಕೆಂದು ನೀವೇ ಹುಡುಕಿ, ಸರ್ವೆ ಮಾಡಿಸಿ. ಸಚಿವರು ಸ್ಪರ್ಧೆ ಮಾಡಬೇಕು, ತ್ಯಾಗ ಮಾಡಬೇಕು ಅನ್ನೋ ಹೈಕಮಾಂಡ್ ಸೂಚನೆ ಗೊತ್ತಿಲ್ಲ. ನಾನೂ ಪಕ್ಷಕ್ಕೆ ಬೇಕಾದಷ್ಟು ತ್ಯಾಗ ಮಾಡಿದ್ದೀನಿ. ಒಂದು ಸಿದ್ಧಾಂತ ಇಟ್ಕೊಂಡು ಹೋರಾಟ ಮಾಡೋನು ನಾನು. ನಾನು ಅಧಿಕಾರಕ್ಕಾಗಿ ಇರೋನಲ್ಲ ಎಂದು ತಿಳಿಸಿದರು.

ಸಚಿವರ ಸ್ಪರ್ಧೆ ಕುರಿತ ಪ್ರಶ್ನೆಗಳಿಗೆ ತಾಳ್ಮೆ ಕಳೆದುಕೊಂಡ ಮಹಾದೇವಪ್ಪ, ಸಮಯ ಬಂದಾಗ ಸಚಿವರು ನಿಲ್ಲಬೇಕು ಎಂಬ ಡಿಕೆಶಿ ಹೇಳಿಕೆ ಕುರಿತು ಮಾತನಾಡಿ, ಅಧ್ಯಕ್ಷರಾಗಿ ಅವರು ಹಾಗೆ ಹೇಳಲೇಬೇಕು. ಹೇಳದೇ ಇರಕ್ಕಾಗಲ್ಲ, ಅವರು ಹೇಳ್ತಾರೆ ಎಂದರು. ನಾನು ಮಗನ ಪರ ಬೇಡಿಕೆ ಇಟ್ಟಿಲ್ಲ. ಅದರ ಬಗ್ಗೆ ಹೈಕಮಾಂಡ್ ನಾಯಕರೂ ನನ್ನ ಕೇಳಿಲ್ಲ. ಮೂರು ಸಲದಿಂದ ಸುನೀಲ್ ಬೋಸ್‌ಗೆ ಅಸೆಂಬ್ಲಿ ಟಿಕೆಟ್ ಸಿಕ್ಕಿಲ್ಲ. ಆದರೂ ಬೇಸರ ಮಾಡಿಕೊಳ್ಳದೇ ಕೆಲಸ ಮಾಡ್ತಿದ್ದಾನೆ. ಸುನೀಲ್ ನನ್ನ ಮಗ

## ಮೊದಲ ಪುಟದಿಂದ...

ಅನ್ನೋದಕ್ಕಿಂತ ಕಾಂಗ್ರೆಸ್ ಕಾರ್ಯಕರ್ತ ಎಂದು ಹೇಳಿದರಲ್ಲದೇ, ನಾವು ಲೋಕಸಭಾ ಚುನಾವಣೆಯಲ್ಲಿ ಕನಿಷ್ಠ 20 ಸ್ಥಾನ ಗೆಲ್ತೇವೆ. ಎಲ್ಲ ಒಗ್ಗಟ್ಟಿನಲ್ಲಿ ಕೆಲಸ ಮಾಡ್ತೇವೆ ಎಂದು ತಿಳಿಸಿದರು.

ಸಂವಿಧಾನದ ಮಹತ್ವ ಬಗ್ಗೆ ಜಾಗೃತಿ ಮೂಡಿಸಲು ಸಮಾವೇಶ ಮಾಡಲಾಗ್ತಿದೆ. ಎಲ್ಲ ಜಿಲ್ಲೆಗಳಲ್ಲಿ ಸಂವಿಧಾನ ಮತ್ತು ಐಕ್ಯತಾ ಸಮಾವೇಶ ಆಯೋಜನೆ ಮಾಡಲಾಗುವುದು. ಇದೇ ತಿಂಗಳು 24, 25 ರಂದು ಬೆಂಗಳೂರಿನ ಅರಮನೆಯ ಮೈದಾನದಲ್ಲಿ ಸಮಾವೇಶ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಸಚಿವ ಮಹದೇವಪ್ಪ ಅವರು, ಭಾರತ ಸಂವಿಧಾನ ಹಾಗೂ ಐಕ್ಯತಾ ಸಮವೇಶದ ಲೋಗೋ ಅನಾವರಣಗೊಳಿಸಿದರು.

## ಸನ್ನಿ ಲಿಯೋನ್ ಫೋಟೊ

ಈ ಅಡ್ಮಿಟ್ ಕಾರ್ಡ್ ಬಗ್ಗೆ ಅಧಿಕಾರಿಗಳು ತಲೆ ಕೆಡಿಸಿಕೊಂಡಿರುವಾಗಲೇ ಈ ಅಡ್ಮಿಟ್ ಕಾರ್ಡ್ ಇಡೀ ದೇಶದಲ್ಲಿ ಚರ್ಚೆಗೆ ಗ್ರಾಸವಾಯಿತು.

ಈ ಘಟನೆಯು ಕನೌಜ್ ಜಿಲ್ಲೆಯ ತಿರ್ವಾ ಪಟ್ಟಣ ಪ್ರದೇಶದಲ್ಲಿರುವ ಸೋನಶ್ರೀ ಬಾಲಕಿಯರ ಕಾಲೇಜಿನಲ್ಲಿ ನಡೆದಿದೆ, ಅಲ್ಲಿ ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ ಪರೀಕ್ಷೆ ನಡೆಯುತ್ತಿತ್ತು, ಅದೇ ಪರೀಕ್ಷಾ ಕೇಂದ್ರದಲ್ಲಿ, ಅಭ್ಯರ್ಥಿ ಅಂಕಿತ್ ನ ಪ್ರವೇಶ ಪತ್ರದಲ್ಲಿ ಸಿನಿ ತಾರೆ ಸನ್ನಿ ಲಿಯೋನ್ ಚಿತ್ರವನ್ನು ಅಂಟಿಸಲಾಗಿತ್ತು. ಮಹೋಬಾ ಜಿಲ್ಲೆಯ ನಿವಾಸಿ, ಅಂಕಿತ್ ಚಿತ್ರದ ಜಾಗದಲ್ಲಿ ಈ ಫೋಟೋವಿತ್ತು. ಈ ಅಡ್ಮಿಟ್ ಕಾರ್ಡ್ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ತಕ್ಷಣ ಸುದ್ದಿ ರಾಜ್ಯಾದ್ಯಂತ ಹಬ್ಬಿತ್ತು.

ಅಡ್ಮಿಟ್ ಕಾರ್ಡ್‌ನಲ್ಲಿ ಬರೆದಿರುವ ನಂಬರ್‌ನಲ್ಲಿ ಫೋನ್ ನಲ್ಲಿ ಮಾಹಿತಿ ತೆಗೆದುಕೊಂಡಾಗ, ವಿದ್ಯಾರ್ಥಿ ಅಂಕಿತ್ ಅವರು ಸಾರ್ವಜನಿಕ ಸೇವಾ ಕೇಂದ್ರದಿಂದ ಅರ್ಜಿಯನ್ನು ಭರ್ತಿ ಮಾಡಿರುವುದಾಗಿ ಹೇಳಿದರು. ಆದರೆ ಫೋಟೋವನ್ನು ಹೇಗೆ ಬದಲಾಯಿಸಲಾಗಿದೆ ಎಂಬುದು ತಿಳಿದಿಲ್ಲ.

ಈ ಫೋಟೋವನ್ನು ಬದಲಾಯಿಸಿದ್ದರಿಂದ, ಅವರು ಪರೀಕ್ಷೆಗೆ ಹಾಜರಾಗಲು ಸಾಧ್ಯವಾಗಲಿಲ್ಲ. ಈ ಪ್ರವೇಶ ಪತ್ರದಲ್ಲಿ ನಮೂದಿಸಿರುವ ವಿಳಾಸ ಮುಂಬೈ. ಆದರೆ ನೋಂದಣಿ ಸಮಯದಲ್ಲಿ ತವರು ಜಿಲ್ಲೆಯನ್ನು ಕನ್ನೌಜ್ ಎಂದು ಉಲ್ಲೇಖಿಸಲಾಗಿದೆ. ಕಾಲೇಜು ಆಡಳಿತ ಮಂಡಳಿ ಪ್ರಕಾರ, ಈ ಪ್ರವೇಶ ಪತ್ರದಲ್ಲಿ ಯಾವುದೇ ಅಭ್ಯರ್ಥಿ ಪರೀಕ್ಷೆಗೆ ಹಾಜರಾಗಲಿಲ್ಲ.

ವಿಷಯ ಸ್ಥಳೀಯ ಅಧಿಕಾರಿಗಳಿಗೆ ತಲುಪಿದಾಗ ಅವರು ಪ್ರವೇಶ ಪತ್ರದಲ್ಲಿ ತಿದ್ದುಪಡಿ ಮಾಡಲಾಗಿದೆ ಎಂದು ಹೇಳಿದರು. ಉಳಿದ ವಿಷಯಗಳ ಬಗ್ಗೆ ಗಂಭೀರವಾಗಿ ತನಿಖೆ ನಡೆಸಲಾಗುತ್ತಿದೆ. ಅಂತಹ ಕೃತ್ಯಗಳನ್ನು ಎಸಗಿರುವ ಯಾರನ್ನೂ ಬಿಡುವುದಿಲ್ಲ ಎಂದು ಹೇಳಿದ್ದಾರೆ. ಕನೌಜ್ ಜಿಲ್ಲೆಯಲ್ಲಿ ಫೆಬ್ರವರಿ 17 ಮತ್ತು 18 ರಂದು ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ ಪರೀಕ್ಷೆ ನಡೆಯಲಿದೆ. ಮೊದಲ ದಿನ 9464 ಅಭ್ಯರ್ಥಿಗಳು 10 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆದಿದ್ದಾರೆ.

## ಮೀಸಲಿಟ್ಟ ಜಿಲ್ಲಾಡಳಿತ

**ಕುಡಿಯುವ ನೀರು ಸರಬರಾಜಿಗೆ ಪ್ರತಿ ತಾಲ್ಲೂಕಿಗೆ ರೂ. 50 ಲಕ್ಷ ಅನುದಾನ:** ಕೊಪ್ಪಳ ಜಿಲ್ಲೆಯ ಏಳು ತಾಲೂಕಿನ ತಹಶೀಲ್ದಾರರ ಪಿ.ಡಿ ಖಾತೆಯಲ್ಲಿ ಸಹ ತುರ್ತು ಕುಡಿಯುವ ನೀರಿನ ಸರಬರಾಜು ಸಲುವಾಗಿ ತಲಾ ರೂ. 50 ಲಕ್ಷಗಳನ್ನು ಕಾಯ್ದಿರಿಸಲಾಗಿದೆ. ಸದ್ಯಕ್ಕೆ ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ ಹಾಗೂ ನಗರ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ ಎಂದು ಸ್ಥಳೀಯ ಸಂಸ್ಥೆಯ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ. ಹೀಗಾಗಿ ಕುಡಿಯುವ ನೀರು ಸಲುವಾಗಿ ಜಿಲ್ಲಾಡಳಿತದಿಂದ ಎಲ್ಲಾ ರೀತಿಯಿಂದ ಕ್ರಮ ಕೈಗೊಳ್ಳಲಾಗಿದೆ ಎಂದರು.

**38 ವಾರಗಳ ಮೇವು ಲಭ್ಯ:** ಜಿಲ್ಲೆಯಲ್ಲಿ ಇನ್ನೂ 5,71,66,5.11 ಮೆಟ್ರಿಕ್ ಟನ್ ಮೇವು ಲಭ್ಯವಿದ್ದು, ಇನ್ನೂ 38 ವಾರಕ್ಕೆ ಸಾಕಾಗುವಷ್ಟು ಮೇವು ಲಭ್ಯವಿರುತ್ತದೆ. ಜಿಲ್ಲೆಯಲ್ಲಿ ಮುಂದಿನ ದಿನಗಳಲ್ಲಿ ಮೇವಿನ ಸಮಸ್ಯೆ ಉಂಟಾದರೆ ಮೇವಿನ ಬ್ಯಾಂಕ್ ತೆರೆಯಲು ಕ್ರಮ ಕೈಗೊಳ್ಳಲಾಗಿದೆ. ರೈತರಿಗೆ ಮೇವಿನ ಕಿಟ್ ನೀಡಲು ಜಿಲ್ಲೆಯ ಪಶು ಸಂಗೋಪನಾ ಇಲಾಖೆಗೆ ಸರ್ಕಾರದಿಂದ 17,783 ಮಿನಿ ಕಿಟ್‌ಗಳು ಸರಬರಾಜು ಆಗಿದ್ದು, ಇದರಲ್ಲಿ 17,133 ಕಿಟ್‌ಗಳನ್ನು ಅವಶ್ಯವಿರುವ ರೈತರಿಗೆ ನೀಡಲಾಗಿದೆ. ಜಿಲ್ಲೆಯಲ್ಲಿ ಸದ್ಯಕ್ಕೆ ಮೇವಿನ ಸಮಸ್ಯೆ ಇರುವುದಿಲ್ಲ ಎಂದು ಹೇಳಿದ್ದಾರೆ.

## ಹತ್ಯೆ

ಹತ್ಯೆಗೆ ಮೀಸೆ ಚಿಗುರದ ಬಿಸಿ ರಕ್ತದ ಹುಡುಗರನ್ನೇ ಶಿವಕುಮಾರ್ ರೆಡಿ ಮಾಡಿದ್ದ. ಆಡುಗೋಡಿ, ವಿಲ್ಸನ್ ಗಾರ್ಡನ್‌ನ ಮೂವರು ಯುವಕರನ್ನು ಗುರುತಿಸಿದ್ದ. ಜೈಲಲ್ಲಿ ಇದ್ದುಕೊಂಡೇ ಶಾರ್ಪ್ ಇರುವ ಹುಡುಗರನ್ನು ಗುರುತಿಸಿ ಮೂರು ಲಕ್ಷ ರೂ. ಅಡ್ವಾನ್ಸ್ ನೀಡಿ, ಮೂರು ತಿಂಗಳು ತರಬೇತಿ ಮಾಡಿಸಿದ್ದ.

ಸೋಮಶೇಖರ್, ವಿಘ್ನೇಶ್ ಹಾಗೂ ಪ್ರವೀಣ್ ಎಂಬ ಹುಡುಗರಿಗೆ ಟ್ರೈನಿಂಗ್ ನೀಡಿದ್ದು, ಮೂವರು ಕೂಡ ಏರಿಯಾದಲ್ಲಿ ಹವಾ ಇಡೋಕೆ ಶುರು ಮಾಡಿದ್ದರು. ಏರಿಯಾದಲ್ಲಿ ಆಗೋ ಗಲಾಟೆಯಲ್ಲಿ ಮೂವರು ಇದ್ದೇ ಇರುತ್ತಿದ್ದರು. ಮೂವರ ಮೇಲೂ ಸುಮಾರು 7-8 ಗಲಾಟೆ ಕೇಸ್‌ಗಳು ದಾಖಲಾಗಿವೆ. ಹೀಗಾಗಿ ಒಬ್ಬೊಬ್ಬರಿಗೆ 10 ಲಕ್ಷದಂತೆ 30 ಲಕ್ಷಕ್ಕೆ ಸುಪಾರಿ ನೀಡಲಾಗಿತ್ತು. ಜೊತೆಗೆ ಜಾಮೀನಿಂದ ಹಿಡಿದು ಕುಟುಂಬದ ನಿರ್ವಹಣೆಗೂ ಹಣ ಸಹಾಯ ಮಾಡುತ್ತೇವೆ ಅಂದಿದ್ದರು. ಅದರಂತೆ ಮನೆಯಲ್ಲಿ ಮಲಗಿದ್ದಾಗ ಸತೀಶನನ್ನು ಮನಸೋಇಚ್ಛೆ ಕೊಚ್ಚಿ ಕೊಲೆ ಮಾಡಿದ್ದರು.

ಆರೋಪಿಗಳ ಹೇಳಿಕೆ ಹಿನ್ನಲೆ ಜೈಲಿನಲ್ಲಿದ್ದ ಶಿವಕುಮಾರ್ ನ ಬಾಡಿವಾರೆಂಟನ್ನು ಸಿಸಿಬಿ ವಶಕ್ಕೆ ಪಡೆದಿದೆ. ವಿಚಾರಣೆ ವೇಳೆ ಜೈಲಿನಿಂದಲೇ ಕರೆ ಮಾಡಿ ಸುಫಾರಿ ನೀಡಿದ್ದೇ ಎಂದು ಒಪ್ಪಿಕೊಂಡಿದ್ದಾನೆ. ಸಿಸಿಬಿ ವಾರೆಂಟ್ ತಗೊಂಡು ಜೈಲಿಗೆ ಹೋಗಿ ಬ್ಯಾಂಕ್ ಪರಿಶೀಲನೆ ಮಾಡಿದ್ದು, ಆದರೆ ಯಾವುದೇ ಮೊಬೈಲ್ ಪತ್ತೆಯಾಗಿಲ್ಲ. ಸದ್ಯ ಜೈಲಾಧಿಕಾರಿಗಳಿಗೆ ಸಿಸಿಬಿ ಪತ್ರ ಬರೆಯಲು ಮುಂದಾಗಿದೆ. ಹೇಗೆ ಜೈಲಿನಲ್ಲಿ ಮೊಬೈಲ್ ಬಂತು, ದಾಳಿ ವೇಳೆ ಮೊಬೈಲ್ ಪತ್ತೆಯಾಗಿಲ್ಲ. ಹೀಗಾಗಿ ಇದರ ಬಗ್ಗೆ ಮಾಹಿತಿ ನೀಡುವಂತೆ ಪತ್ರ ಬರೆಯಲು ಸಿಸಿಬಿ ಮುಂದಾಗಿದೆ.

ಸತೀಶ್ ಒಬ್ಬ ರೌಡಿ ಶೀಟರ್ ಆಗಿದ್ದು, ಆತನ ವಿರುದ್ಧ ಹಲವು ಪ್ರಕರಣಗಳು ದಾಖಲಾಗಿವೆ. ಸತೀಶ್‌ನನ್ನು ಕೊಲೆ ಮಾಡಿದ ಆರೋಪಿಗಳು ಇತರ ಅಪರಾಧಗಳಲ್ಲಿ ಭಾಗಿಯಾಗಿದ್ದರು ಎಂದು ಬೆಂಗಳೂರು ಕೇಂದ್ರ ವಿಭಾಗದ ಉಪ ಪೊಲೀಸ್ ಆಯುಕ್ತ ಶೇಖರ್ ಹೆಚ್ ತೆಕ್ಕನವರ್ ಈ ಹಿಂದೆ ಹೇಳಿದ್ದರು.

## ಕೊಲೆ

ಭಗತ್ ಸಿಂಗ್ ಎಂಬುವವರು ರೋಹನ್ ಬಳಿ ಎರಡ್ಮೂರು ಸಾವಿರ ರೂಪಾಯಿ ಹಣವನ್ನ ಸಾಲದ ರೂಪದಲ್ಲಿ ಪಡೆದುಕೊಂಡಿದ್ದರು.

ಸಾಲವಾಗಿ ಕೊಟ್ಟ ಹಣವನ್ನ ತಿಂಗಳುಗಳು ಕಳೆದರೂ ಕೂಡ ವಾಪಸ್ ನೀಡಿರಲಿಲ್ಲ. ಹಾಗಾಗಿ ಕಳೆದ ಮಂಗಳವಾರ ರೋಹನ್ ತನ್ನ ಸ್ನೇಹಿತರಿಗೆ ದುಡ್ಡು ಕೊಡುವಂತೆ ತಾಕೀತು ಮಾಡಿದ್ದಾನೆ. ಆಗ ಈ ಸುನೀಲ್ ಸಿಂಗ್ ಮತ್ತು ಭಗತ್ ಸಿಂಗ್ ಗ್ಯಾಂಗ್ ಮಂಗಳವಾರ ರಾತ್ರಿ ರೋಹನ್ ಕರೆ ಮಾಡಿ ಮನೆಯಿಂದ ಕರೆಯಿಸಿಕೊಂಡು ಸೈಯದ್ ಚಿಂಚೋಳಿ ಕ್ರಾಸ್ ಬಳಿ ಕರೆದುಕೊಂಡು ಚಾಕುವಿನಿಂದ ಇರಿದು ಕೊಲೆ ಮಾಡಿದ್ದರು.

ಸದ್ಯ ಕೊಲೆ ಮಾಡಿದ ಮೂರು ಜನ ಆರೋಪಿಗಳನ್ನ ಪೊಲೀಸರು ಬಂಧಿಸಿದ್ದಾರೆ. ತಲೆ ಮರೆಸಿಕೊಂಡ ಮತ್ತೊಬ್ಬ ಆರೋಪಿ ಮೋಹನ್‌ಗಾಗಿ ಚೌಕ್ ಪೊಲೀಸರು ಹುಡುಕಾಟ ನಡೆಸಿದ್ದಾರೆ. ಅದೇನೆ ಇರಲಿ ಕಷ್ಟ ಎಂದಾಗ ಸ್ನೇಹಿತ ಬೇಕು, ಅದೇ ಸ್ನೇಹಿತನಿಗೆ ಕಷ್ಟ ಬಂದಿದೆ ಎಂದಾಗ ಕೊಟ್ಟ ದುಡ್ಡು ವಾಪಸ್ ಕೇಳಿರೋದಕ್ಕೆ ಕೊಲೆ ಮಾಡಿರುವುದು ನಿಜಕ್ಕೂ ದುರಂತವೇ ಸರಿ.

# ಬಸವಣ್ಣನವರ ವಚನಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು

**ಮೈಸೂರು:** ಮಾನವ ಸಮಾಜದ ಬಗ್ಗೆ ಕ್ರಾಂತಿ ಮಾಡಿದ ಏಕೈಕ ವ್ಯಕ್ತಿ ಬಸವಣ್ಣನವರು. ಅವರ ವಚನಗಳ ಮೂಲಕವೇ ಸಮ ಸಮಾಜವನ್ನು ನಿರ್ಮಾಣ ಮಾಡಲು ಮುಂದಾದವರು. ಇಂತಹವರ ವಚನಗಳನ್ನು ಯುವಕರು ಹಾಗೂ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಅನುಸರಿಸಬೇಕು ಎಂದು ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ಹರೀಶ್ ಗೌಡ ಅವರು ಹೇಳಿದರು.

ಇಂದು ಕರ್ನಾಟಕ ಕಲಾಮಂದಿರದಲ್ಲಿ ನಡೆದ ವಿಶ್ವಗುರು ಬಸವಣ್ಣನವರ ಭಾವಚಿತ್ರ ಅನಾವರಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬಸವಣ್ಣನವರು ಯಾವುದೇ ಜಾತಿ - ಧರ್ಮಕ್ಕೆ ಸೀಮಿಯವಾಗಿರದೆ ಎಲ್ಲಾ ಸಮಾನ ಸ್ಥಾನಮಾನಕ್ಕಾಗಿ ಕನಸು ಕಂಡು ಅದಕ್ಕಾಗಿ ಹೋರಾಡಿದವರು. ಅಂತಹ ಮಹಾನುಭಾವರಿಗೆ ವಿಶ್ವಗುರು ಎಂಬ ಬಿರುದನ್ನು ನಮ್ಮ ಮೈಸೂರಿನವರಾದ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರದಲ್ಲಿ ಅನುಷ್ಠಾನಗೊಳಿಸಿರುವುದು ಮೈಸೂರಿನವರಾದ ನಮಗೆ ಹೆಮ್ಮೆ ಎಂದರು.

ಇಂದಿನಿಂದ ಮೈಸೂರಿನಾದ್ಯಂತ ಎಲ್ಲಾ ಸರ್ಕಾರಿ ಕಚೇರಿಗಳಲ್ಲೂ ವಿಶ್ವಗುರು ಬರಹವಿರುವ ಭಾವಚಿತ್ರಗಳು ಇರಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ವಿಧಾನ ಪರಿಷತ್ತಿನ ಶಾಸಕರಾದ ಮರೀತಿಬ್ಬೆಗೌಡ ಅವರು ಮಾತನಾಡಿ ಬಸವಣ್ಣನವರನ್ನು ವಿಶ್ವಗುರು ಎಂದು ಕರ್ನಾಟಕ ಸರ್ಕಾರ ಘೋಷಣೆ ಮಾಡಿರುವುದು ಎಲ್ಲರಲ್ಲೂ ಸಂಚಲನ ಮೂಡಿಸಿದೆ. 12 ನೇ ಶತಮಾನದಲ್ಲಿಯೇ ಅನುಭವ ಮಂಟಪವನ್ನು ಸ್ಥಾಪಿಸಿ ಎಲ್ಲಾ ಸಮಾಜದವರನ್ನು ಒಂದುಗೂಡಿಸುವ ಮೂಲಕ ಸಮ ಸಮಾಜದ ನಿರ್ಮಾಣಕ್ಕಾಗಿ ತಮ್ಮ ಬದುಕನ್ನೇ ಮುಡಿಪಾಗಿಟ್ಟಿದ್ದಾರೆ. ಆದರೆ ಆ ಯೋಚನೆಗಳು, ಅವರ ವ್ಯಕ್ತಿತ್ವವನ್ನು ಅಳವಡಿಸಿಕೊಂಡು ಅನುಸರಿಸುತ್ತಿರುವವರ ಸಂಖ್ಯೆ ಬೆರಳೆಣಿಕೆಯಷ್ಟು. ಅದರ ಬದಲಾಗಿ ಮೌಢ್ಯತೆ, ಕಂಡಚಾರಗಳಿಗೆ ಒಳಗಾಗಿ ಪ್ರೀತಿ - ಸಹಬಾಳ್ವೆಯನ್ನು ಮರೆತಿದ್ದೇವೆ ಎಂದರು.

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ನೀಡಿರುವ ಸಂವಿಧಾನದ ಆಶಯದಲ್ಲಿ ಬಸವಣ್ಣನವರ ಸಂದೇಶಗಳು ಅಡಗಿವೆ. ಅವುಗಳನ್ನೇ ಕಾನೂನಿನ ರೂಪದಲ್ಲಿ ಅನುಸರಿಸುತ್ತಿದ್ದೇವೆ. ಬಸವಣ್ಣನವರ ವಚನಗಳಲ್ಲಿ ಎಲ್ಲಾ ಸಮಸ್ಯೆಗಳಿಗೂ ನಿವಾರಣೆ ಸೂತ್ರವನ್ನು ನೀಡಿದ್ದಾರೆ. ಹಾಗಾಗಿ ಅವುಗಳನ್ನು ಅಳವಡಿಸಿಕೊಳ್ಳುವುದು ಬಹಳ ಮುಖ್ಯ ಎಂದರು.

ಇಂದು ಸರ್ಕಾರ ಕೊಟ್ಟಿರುವ 5 ಗ್ಯಾರಂಟಿಗಳೂ ಸಹ ಬಸವಣ್ಣನವರ ಚಿಂತನೆಗಳೇ ಆಗಿವೆ. ಅವರ ಫೋಟೋ ಇಟ್ಟು ಪೂಜೆ ಮಾಡುವುದಷ್ಟೇ ಅಲ್ಲದೆ ಅವರ ಚಿಂತನೆಗಳನ್ನು ಅಳವಡಿಸಿಕೊಂಡು ಅದರ ಬಗ್ಗೆ ಅರಿವು ಮೂಡಿಸಿಕೊಳ್ಳಲು ಜನರು ಮುಂದಾಗಬೇಕು ಎಂದು ತಿಳಿಸಿದರು.



ಜಿಲ್ಲಾಧಿಕಾರಿಗಳಾದ ಡಾ. ಕೆ. ವಿ ರಾಜೇಂದ್ರ ಅವರು ಮಾತನಾಡಿ ವಿಶ್ವಗುರು ಎಂಬ ಬಿರುದನ್ನು ಅಧಿಕೃತವಾಗಿ ಸರ್ಕಾರ ಘೋಷಿಸಿದ ನಂತರ ಮೈಸೂರಿನಲ್ಲಿ ಕಾರ್ಯಕ್ರಮ ಆಯೋಜಿಸಿರುವ ಉದ್ದೇಶ ಅವರು ಸಮಾಜಕ್ಕಾಗಿ ಕೊಟ್ಟಿರುವ ಕೊಡುಗೆಗಳು, ಅವರ ಹೋರಾಟಗಳ ಬಗ್ಗೆ ಯುವಜನರಲ್ಲಿ ಅರಿವು ಮೂಡಿಸುವುದಾಗಿದೆ. ಸಮಾಜದ ಅಂಕು - ಡೊಂಕುಗಳನ್ನು ಅವರ ವಚನಗಳ ಮೂಲಕ ತಿದ್ದಿ ಹೇಳಿದ್ದಾರೆ. ಅವರ 12 ನೇ ಶತಮಾನದ ವಚನಗಳು ಇಂದಿಗೂ ಪ್ರಸ್ತುತ ಎಂದರು.

ಪ್ರತಿಯೊಬ್ಬ ವ್ಯಕ್ತಿಯು ಅವರ ಆದರ್ಶಗಳನ್ನು ಅಳವಡಿಸಿಕೊಂಡು ಮಾದರಿ ಜೀವನ ನಡೆಸಲು ಮುಂದಾಗಬೇಕು. ಇಂತಹ ಮಹಾನ್ ವ್ಯಕ್ತಿಯ ಭಾವಚಿತ್ರ ಪ್ರತಿಯೊಂದು ಸರ್ಕಾರಿ ಕಚೇರಿಗಳಲ್ಲಿ ಮೊಳಗಲಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಶಾಸಕರಾದ ಸಿ.ಎನ್.ಮಂಜೇಗೌಡ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ಕೆ. ಎಂ ಗಾಯಿತ್ರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ವಿ.ಎನ್ ಮಲ್ಲಿಕಾರ್ಜುನ ಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಎಂ. ಡಿ ಸುದರ್ಶನ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ರಾಜ್ಯ ಮಟ್ಟದ ಪ್ರಚಾರ ಆಂದೋಲನ

**ಬೆಂಗಳೂರು:** ರಾಜ್ಯ ಯುವಚೇತನ ಯುವಜನ ಕೇಂದ್ರ ಕಳೆದ ನಾಲ್ಕು ದಶಕಗಳಿಂದ ಜಾಗೃತಿ, ಶಿಕ್ಷಣ, ಚಿಂತನೆ, ಪ್ರಗತಿ, ಹೋರಾಟಮಯ ಹಾದಿಯಲ್ಲಿ ಸೇವೆ ಸಲ್ಲಿಸುತ್ತಾ ಇಡಿ ದೇಶದೆಲ್ಲೆಡೆ ಸೈಕಲ್ ಜಾಥಾ, ಬೈಕ್ ರ್ಯಾಲಿ, ಕಾರ್ ರ್ಯಾಲಿ, ಬೀದಿ ನಾಟಕ, ಮಾನವ ಸರಪಳಿ ಸಾಂಸ್ಕೃತಿಕ ಕಾರ್ಯಕ್ರಮಗಳು, ವಿಚಾರಗೋಷ್ಠಿಗಳು, ಸಾಕ್ಷ್ಯಾಚಿತ್ರಗಳು, ಸ್ವಂತ ನಿರ್ಮಾಣ ಮಾಡುತ್ತಾ ಯುವಜನರಲ್ಲಿ ವೈಜ್ಞಾನಿಕವಾದ ಜನಜಾಗೃತಿ ಪ್ರಜ್ಞೆಯನ್ನು ಮೂಡಿಸುತ್ತಿದೆ. ಸದರಿ ಸಂಸ್ಥೆಯು ರಾಜ್ಯ ಮಟ್ಟದಲ್ಲಿ 31 ಜಿಲ್ಲೆಗಳಲ್ಲಿ ವರ್ಷಂಪೂರ್ತಿ ವಾಹನದ ಮುಖಾಂತರ ಸಂಚರಿಸಿ ಅರಣ್ಯ, ಪರಿಸರ, ವನ್ಯಜೀವಿ ಸಂರಕ್ಷಣೆ,ಸಿವಿಲ್ ಡಿಫೆನ್ಸ್ ತರಬೇತಿಯನ್ನು ನೀಡಲು ವಿಶೇಷಾವಾದ ಜಾಗೃತಿ ಆಂದೋಲನವನ್ನು 2024-25 ನೇ ಸಾಲಿನಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಜಾಗೃತಿ ಆಂದೋಲನ ಉದ್ಘಾಟನೆಯನ್ನು ಶೇಷಾದ್ರಿಪುರಂ ಶಿಕ?ಷಣ ದತ್ತಿ ಗೌರವ ಕಾರ್ಯದರ್ಶಿಗಳು ಹಾಗೂ ರಾಜ್ಯ ಯುವಚೇತನ ಯುವಜನ ಕೇಂದ್ರ, ಗೌರವ ರಾಜ್ಯಾಧ್ಯಕ್ಷರಾದ ನಾಡೋಜ ಡಾ:: ವೂಡೇ ಪಿ. ಕೃಷ್ಣ ರವರು ಉದ್ಘಾಟಿಸಿ ರಾಷ್ಟ್ರಪ್ರಶಸ್ತಿ ಪುರಸ್ಕೃತ ಡಾ:: ನಂದಿದುರ್ಗ ಬಾಲುಗೌಡ ರವರು ನಡೆಸುವ ಕಾರ್ಯಕ್ರಮಗಳಲ್ಲಿ 1984 ರಿಂದಲೂ ನಾನು ಅತಿ ಸನಿಹದಿಂದ ಪಾಲ್ಗೊಳ್ಳುತ್ತಿದ್ದು, ಅರಣ್ಯ ಪರಿಸರ ಸಂರಕ್ಷಣೆಗೆ ಒಂಟಿ ಸಲಗವಾಗಿ ಕಾರ್ಯಕ್ರಮಗಳನ್ನು ಸಂಘಟಿಸುತ್ತಿರುವುದು ಅಭಿನಂದನಿಯ ಎಂದರು. ಐ.ಎಸ್.ಡಿ. ವೃತ್ತ ನಿರೀಕ್ಷಕರಾದ ಬಸವರಾಜ್ .ಎಂ.ಪಿ., ನೆಹರು ಯುವ ಕೇಂದ್ರ ಸಂಘಟನ್ ರಾಜ್ಯ ನಿರ್ದೇಶಕರಾದ ಎಂ.ಎನ್. ನಟರಾಜ್, ವೇದ ಬ್ರಹ್ಮಶ್ರೀ. ಡಾ:: ರಾಘವೇಂದ್ರ, ಮೋಕ್ಷಗುಂಡಂ ಗುರೂಜಿ, ಡಾ:: ಸೌಜನ್ಯ ಶರತ್ ಚಂದ್ರ, ವ್ಯವಸ್ಥಾಪಕ ನಿರ್ದೇಶಕರು, ಸ್ಯಾನೋವಿಸ್ ಲೈಫ್ ಸೈನ್ಸ್ ಸಂಸ್ಥೆ, ಬೆಂಗಳೂರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಈ ಆಂದೋಲನದ ನೇತೃತ್ವವನ್ನು ರಾಜ್ಯ ಯುವಚೇತನ ಯುವಕೇಂದ್ರದ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಡಾ:: ನಂದಿದುರ್ಗ ಬಾಲುಗೌಡ ರವರು ವಹಿಸಿದ್ದಾರೆ. ಸಂಚಾಲಕತ್ವವನ್ನು ಕಾರ್ಯಾಧ್ಯಕ್ಷರಾದ ಬೇಸಗರಹಳ್ಳಿ ಶಿವಲಿಂಗಯ್ಯ, ಸತೀಶ್, ಮಂಡ್ಯ ಮತ್ತು ರಾಜ್ಯ ಪ್ರಧಾನ ಕಾರ್ಯದರ್ಶಿ ಕಾಡಿನ ಮಿತ್ರ ನಿಸರ್ಗ, ರಾಜ್ಯ ಸಂಚಾಲಕಿ ಕಾಡಿನ ಮಿತ್ರ ಅನಿತ ಈ ಕಾರ್ಯಕ್ರಮದ ರುವಾರಿಗಳಾಗಿ ರಾಜ್ಯದ ಎಲ್ಲಾ ಜಿಲ್ಲೆಗಳು, ತಾಲ್ಲೂಕುಗಳು, ಹೋಬಳಿಗಳಲ್ಲಿ ಪ್ರವಾಸ ಮಾಡಿ ಜನಜಾಗೃತಿ ಮೂಡಿಸಲಾಗುತ್ತಿದ್ದು, ನೆಹರು ಯುವಕೇಂದ್ರ ಸಂಘಟನ್ ಕರ್ನಾಟಕ ಕಾಡಿನ ಮಿತ್ರ ಬೆಂಗಳೂರು, ಶೇಷಾದ್ರಿಪುರಂ ಶಿಕ್ಷಣ ದತ್ತಿ ಬೆಂಗಳೂರು, ಪಟೇಲ್ ಗ್ರೂಪ್ ಆಫ್ ಇನ್ಸಿಟ್ಯೂಷನ್ಸ್ ಬೆಂಗಳೂರು ಜಂಟಿ ಸಹಕಾರದಲ್ಲಿ ನಡೆಸಲಾಗುತ್ತಿದೆ.

## ಅರ್ಜಿ ಆಹ್ವಾನ

**ರಾಮನಗರ:** ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2024-25ನೇ ಸಾಲಿನ 6ನೇ ತರಗತಿಗೆ ಉಚಿತ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇದೇ ಮಾರ್ಚ್ 15 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ: 308, 2ನೇ ಮಹಡಿ, ಕಂದಾಯ ಭವನ, ಬಿ.ಎಂ. ರಸ್ತೆ, ರಾಮನಗರ-562159. ದೂ.ಸಂಖ್ಯೆ: 080-27271104 ಅಥವಾ ಆಸಕ್ತಿಯುಳ್ಳ ವಿದ್ಯಾರ್ಥಿಗಳು ಹಾಗೂ ಪೋಷಕರು ಸೇವಾ ಸಿಂಧು ಪೋರ್ಟಲ್ ಲಿಂಕ್ https://sevasindhuservices.karnataka.gov.in ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಲು ಉಚಿತ ಸೇವೆ ಪಡೆಯಲು ರಾಮನಗರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸುವಂತೆ ರಾಮನಗರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂವಿಧಾನ ಜಾಗೃತಿ ಜಾಥಾ

**ರಾಮನಗರ:** ಕನಕಪುರ ತಾಲೂಕಿನ ಉಯ್ಯಂಬಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಫೆ. 17ರ ಶನಿವಾರ ಸಂವಿಧಾನ ಜಾಗೃತಿ ಜಾಥಾವನ್ನು ಅದ್ದೂರಿಯಾಗಿ ಸ್ವಾಗತಿಸಲಾಯಿತು. ತಾಲ್ಲೂಕು ಮಟ್ಟದ ಅಧಿಕಾರಿಗಳು, ಜಿಲ್ಲಾ ಜಾಗೃತಿ ಸಮಿತಿಯ ಸದಸ್ಯರುಗಳು ಹಾಗೂ ಸಮುದಾಯದ ಮುಖಂಡರು, ಸಂಘ-ಸಂಸ್ಥೆಯ ಪದಾಧಿಕಾರಿಗಳಿದ್ದರು. ಸಂವಿಧಾನ ಜಾಗೃತಿ ಜಾಥಾವು ಮರಳೆಬೇಕುಪ್ಪೆ ಹಾಗೂ ನಲ್ಲಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಸಂಚರಿಸಿ, ಜಾಗೃತಿ ಮೂಡಿಸಿತು.

# ಬೃಹತ್ ಸೈಕಲ್ ಜಾಥಾ ಮೂಲಕ ಸಂವಿಧಾನ ಜಾಗೃತಿ

**ಮೈಸೂರು:** ಭಾರತವು ತನ್ನ ಸಂವಿಧಾನವನ್ನು ಅಂಗೀಕರಿಸಿಕೊಂಡು 75 ವರ್ಷದ ಆಚರಣೆಯ ಪ್ರಯುಕ್ತ ಸಂವಿಧಾನ ಜಾಗೃತಿ ಜಾಥಾ ಅಂಗವಾಗಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ,ಮೈಸೂರು ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಹಾಗೂ ಮೈಸೂರು ಸೈಕ್ಲಿಸ್ಟ್ ಅಸೋಸಿಯೇಷನ್ ಅವರ ಸಂಯುಕ್ತ ಆಶ್ರಯದಲ್ಲಿ ಬೃಹತ್ ಸೈಕಲ್ ಜಾಥಾ ಇಂದು ಹಳೇ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹಾನಗರ ಪಾಲಿಕೆ ಆಯುಕ್ತರಾದ ಅಶಾದ್ ಉರ್ ರೆಹಮಾನ್ ಶರೀಫ್ ಅವರು ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್‌ನ ಭಾಗವಾದ ಸಮಾಜ ಕಲ್ಯಾಣ ಇಲಾಖೆ ಪ್ರಾಯೋಜತ್ವದ ಈ ಜಾಥಾ ಗೆ ನಗರದ ಸೈಕ್ಲಿಂಗ್ ಹಾಗು ಕ್ರೀಡಾ ಸಂಘಗಳಾದ ಮೈಸೂರು ಅಥ್ಲೀಟ್ಸ್ ಕ್ಲಬ್, ಸೈಕ್ಲೋಪೀಡಿಯಾ, ಮೈಸೂರು ಸೈಕ್ಲಿಂಗ್ ತರಬೇತಿ ಅಕಾಡೆಮಿ, ರಾಯಲ್ ರೈಡರ್ಸ್ ಹಾಗು ಯುವಜನ ಮತ್ತು ಸೇವಾ ಕ್ರೀಡಾ ಇಲಾಖೆ ಕೈ ಜೋಡಿಸಿದ್ದು 18 ಮಹಿಳೆಯರನ್ನು ಒಳಗೊಂಡ 75 ಸೈಕಲ್ ಸವಾರರ ತಂಡ ಅಂದು ಹಳೆ ಡಿಸಿ ಆಫೀಸ್ ಕಚೇರಿಯ ಮುಂಭಾಗದಿಂದ ಹೊರಟು ಹುಣಸೂರ್ ರಸ್ತೆ ಮೂಲಕ, ಮೆಟ್ರೊಪಾಲ್ ಸರ್ಕಲ್,ರೈಲ್ವೆ ಸ್ಟೇಷನ್ ಸರ್ಕಲ್ ನಿಂದ ಎಲ್.ಐ.ಸಿ ವೃತ್ತ ತಲುಪುತ್ತದೆ. ಅಲ್ಲಿಂದ ಗಾಂಧಿನಗರ ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಸರ್ಕಾರಿ ಅತಿಥಿ ಗೃಹ ಸರ್ಕಲ್ ಇಂದ ಬೆಂಗಳೂರು ರಸ್ತೆಯ,ಮೂಲಕ ಅಶೋಕ ರಸ್ತೆ ತಲುಪಿ ಕೊನೆಗೆ ಟೌನ್ ಹಾಲ್ ವೃತ್ತದಲ್ಲಿ ಸಮಾಪ್ತಿ ಮಾಡಲಾಯಿತು.

ಸೈಕ್ಲಿಂಗ್ ಪಟುಗಳು ಜಾಥಾದಲ್ಲಿ ಸುಮಾರು 10 ಕಿಲೋಮೀಟರ್ ದೂರವನ್ನು (ಠಟಿಜ ತಿಚಿಥಿ) ಕ್ರಮಿಸಿ ಮೈಸೂರು ನಗರ ಪ್ರದೇಶದಲ್ಲಿ ಸಂಚರಿಸಿ ಸಂವಿಧಾನ ಮಹತ್ವದ ಅರಿವನ್ನು ಮೂಡಿಸುವುದರ ವಿವಿಧ ಘೋಷಣೆಗಳನ್ನು ಕೂಗುವುದರ ಮೂಲಕ ಸಾರ್ವಜನಿಕರಲ್ಲಿ ಸಂವಿಧಾನದ ಬಗ್ಗೆ ಜಾಗೃತಿ ಉಂಟು ಮಾಡಿದರು. ಸಂವಿಧಾನದ ಮಹತ್ವ ಸಾರುವ ಅರಿವು ಮೂಡಿಸುವ ಸಂದೇಶವನ್ನು ಸಾರಿದರು.

ಈ ಸಂದರ್ಭದಲ್ಲಿ ಮೈಸೂರು ಮಹಾನಗರ ಪಾಲಿಕೆ ಉಪ ಆಯುಕ್ತರು (ಆಡಳಿತ) ಜಿ.ಎಸ್.ಸೋಮಶೇಖರ್ ರವರು, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರಾದ ರಂಗೇಗೌಡರವರು, 2021 ನೇ ಸಾಲಿನ ಮಿಸ್ ಗ್ಲಾಮರಸ್ ಕ್ವೀನ್ ಆಫ್ ಇಂಡಿಯಾ' ಗೌರವಕ್ಕೆ ಭಾಜನರಾದ ಕುಮಾರಿ ತನಿಷ್ಕಾ ಮೂರ್ತಿ, ಮೈಸೂರಿನ ವಾಣಿಜ್ಯ ತೆರಿಗೆ ನಿವೃತ್ತ ಉಪ ಆಯುಕ್ತರಾದ ಹಿರಿಯ ಸೈಕಲ್ ಪಟು ರಮೇಶ್ ನರಸಯ್ಯ ಹಾಗೂ ವೀಣಾ ಅಶೋಕ್ ಉಪಸ್ಥಿತರಿದ್ದರು.



### ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ. ಹರೀಶ್ ಗೌಡ ಹೇಳಿಕೆ

# ಪ್ರತೀವರ್ಷ ಏಕೀಕರಣ ಕಾರ್ಯಕ್ರಮ

**ಮೈಸೂರು:** ರಾಜ್ಯ ಪತ್ರಾಗಾರ ಇಲಾಖೆಯ ಏಕೀಕರಣ ಕಾರ್ಯಕ್ರಮವು ಇಂದಿಗೆ ಸೀಮಿತವಾಗಿರದೆ, ಪ್ರತೀ ವರ್ಷವು ಆಯೋಜಿಸಿ ವಿದ್ಯಾರ್ಥಿಗಳಿಗೆ ವಿಷಯಗಳ ಬಗ್ಗೆ ಅರಿವು ಮೂಡುವಂತೆ ಮಾಡಬೇಕು ಎಂದು ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ಹರೀಶ್ ಗೌಡ ಅವರು ಸಲಹೆ ನೀಡಿದರು.

ಇಂದು ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ-50 ಹಾಗೂ ಕರ್ನಾಟಕ ನಾಮಕರಣ 50 ರ ಸಂಭ್ರಮಾಚರಣೆ ಮಹೋತ್ಸವ ಅಂಗವಾಗಿ ನಡೆದ 'ಕರ್ನಾಟಕ ಏಕೀಕರಣ ಮತ್ತು ಕನ್ನಡ ಅಸ್ಮಿತೆ? ಕುರಿತ ಎರಡು ದಿನಗಳ ವಿಚಾರ ಸಂಕಿರಣ ಮತ್ತು ಚಾರಿತ್ರಿಕ ದಾಖಲೆಗಳ ಹಾಗೂ ಛಾಯಾಚಿತ್ರ ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ರಾಜ್ಯ ಪತ್ರಾಗಾರ ಇಲಾಖೆಯು ಇತಿಹಾಸ ತಿಳಿಸುವುದರ ಜೊತೆಗೆ ಎಲ್ಲಾ ರೀತಿಯ ದೇಶದ, ರಾಜ್ಯದ, ನಗರದ, ಭೂಮಿ, ಜಲ ಇತ್ಯಾದಿಗಳಿಗೆ ಸಂಬಂಧಿಸಿದ ಎಲ್ಲಾ ರೀತಿಯ ದಾಖಲೆಗಳನ್ನು ಸಂರಕ್ಷಣೆ ಮಾಡುವುದರ ಮೂಲಕ ಮುಖ್ಯವಾಗಿ ಬೇಕಾಗಿರುವ ಮಾಹಿತಿಗಳು ಸುಲಭವಾಗಿ ದೊರಕುವಂತೆ ಮಾಡಿದೆ ಎಂದರು.

ವಿಧಾನಪರಿಷತ್ ಸದಸ್ಯರಾದ ಮರಿತಿಬ್ಬೇಗೌಡ ರವರು ಮಾತನಾಡಿ ಈ ರೀತಿಯ ವಿಚಾರ ಸಂಕಿರಣಗಳಿಂದ ಹಲವಾರು ದಾಖಲೆಗಳ ಬಗ್ಗೆ ಮಾಹಿತಿ ಪಡೆಯಲು ವಿದ್ಯಾರ್ಥಿಗಳಿಗೆ ಉತ್ತಮ ವೇದಿಕೆಯಾಗಿದೆ. ನಮ್ಮ ನಾಡಿನ ವಿವಿಧ ಸಂಸ್ಕೃತಿ, ಭಾಷೆ, ವಿಷಯಗಳು, ಬರವಣಿಗೆ ಒಟ್ಟಾರೆಯಾಗಿ ನಮ್ಮ ಇತಿಹಾಸದ ಬಗ್ಗೆ ತಿಳಿದುಕೊಳ್ಳಲು, ಕಾಲ ಕಾಲಕ್ಕೆ ಬಿಡುಗಡೆಯಾದ ದಾಖಲೆಗಳನ್ನು ಸಂಗ್ರಹಿಸುವ ಮೂಲಕ ಇಲಾಖೆಯು ಮಹತ್ವದ ಕೆಲಸವನ್ನು ಮಾಡುತ್ತಿದೆ ಎಂದರು.

ಯಾವುದೇ ಒಬ್ಬ ಸಂಶೋಧಕನು ಸಂಶೋಧನೆ ಮಾಡಲು ಪತ್ರಾಗಾರ ಇಲಾಖೆ ಕಲೆ ಹಾಕಿರುವ ಮಾಹಿತಿಗಳು ಬಹಳ ಪೂರಕವಾಗಿ ಸಹಕಾರ ನೀಡುತ್ತವೆ. ಇದರಲ್ಲಿ ನಾವು ಎಂದೂ ಓದದ, ನೋಡದ ದಾಖಲೆಗಳನ್ನು ಕಾಣಬಹುದು. ಪ್ರತಿಯೊಬ್ಬ ವ್ಯಕ್ತಿಯು ಇಲಾಖೆಯಲ್ಲಿರುವ ದಾಖಲೆ ಮಾಹಿತಿಗಳನ್ನು ಓದಿದಾಗ ನಮ್ಮ ಜ್ಞಾನದಲ್ಲಿ ವಿಕಾಸವಾಗುತ್ತದೆ. ಇದರ ಸದುಪಯೋಗವನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು ಎಂದರು.



ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆಯ ನಿರ್ದೇಶಕರಾದ ಡಾ.ಗವಿಸಿದ್ದಯ್ಯ ರವರು ಮಾತನಾಡಿ ನಾಡಿನ ಸಂಸ್ಕೃತಿ, ಪರಂಪರೆ ಬಿಂಬಿಸುವ ಚಾರಿತ್ರಿಕ ದಾಖಲೆಗಳನ್ನು ಸಂಸ್ಕರಿಸಿ ಅದನ್ನು ಜನರಿಗೆ ತಲುಪಿಸುವುದೇ ಪತ್ರಾಗಾರ ಇಲಾಖೆಯ ಮುಖ್ಯ ಉದ್ದೇಶ. ಇಲಾಖೆಯಲ್ಲಿ ಇತಿಹಾಸಕ್ಕೆ ಸಂಬಂಧಿಸಿದ ಹಲವಾರು ದಾಖಲೆಗಳನ್ನು ವಿಶೇಶವಾಗಿ ಮೈಸೂರಿನ ಇತಿಹಾಸದ ಬಗ್ಗೆ ತಿಳಿಸುವ ದಾಖಲೆಗಳನ್ನು ಸಂಗ್ರಹಿಸಲಾಗಿದ್ದು, ಸಾರ್ವಜನಿಕರು ಅದರಲ್ಲೂ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿಗಳಾದ ಡಾ.ಕೆ.ವಿ ರಾಜೇಂದ್ರ ಅವರು ಮಾತನಾಡಿ ಕನ್ನಡದ ಅಸ್ಮಿತೆಯನ್ನು ಉಳಿಸಿಕೊಳ್ಳಲು ಏನು ಮಾಡಬೇಕು ಎಂಬುದನ್ನು ಅರಿಯಲು ಇದು ಉತ್ತಮ ಸಮಯ. ನಮ್ಮ ಹಿರಿಯರು, ಹಲವಾರು ದಿಗ್ಗಜರು

ಈಗಾಗಲೇ ಕನ್ನಡ ದೀಪವನ್ನು ಹಚ್ಚುವ ಕೆಲಸ ಮಾಡಿದ್ದಾರೆ. ಅದನ್ನು ದ್ವಿಗುಣಗೊಳಿಸಿ ಉಳಿಸುವುದು ನಮ್ಮ ಕರ್ತವ್ಯ. ಬೇರೆ ಭಾಷೆಯನ್ನು ದ್ವೇಷ ಮಾಡಬಾರದು ಆದರೆ ಭಾಷೆಯ ಮೇಲಿನ ಪ್ರೀತಿಯನ್ನು ಹೆಚ್ಚಿಸಿ ಅದನ್ನು ಉಳಿಸಿ ಬೆಳೆಸಬೇಕು. ನಮ್ಮ ಕನ್ನಡ ಭಾಷೆಯ ಬಗ್ಗೆ ಮೊದಲು ನಮಗೆ ಹೆಮ್ಮೆ ಇರಬೇಕು. ಎಲ್ಲಾ ರೀತಿಯ ಪ್ರಾಕೃತಿಕ ಸೌಂದರ್ಯವನ್ನು ಹೊಂದಿರುವ ಕರ್ನಾಟಕದಲ್ಲಿನ ಸಂಸ್ಕೃತಿಯನ್ನು ಉಳಿಸಲು ಮುಂದಾಗಬೇಕು ಎಂದರು.

ಪ್ರತಿಯೊಬ್ಬರೂ ಸಹ ಇತಿಹಾಸವನ್ನು ತಿಳಿದುಕೊಳ್ಳಬೇಕು ನಮ್ಮ ನೆಲದ ಹಿನ್ನೆಲೆಯ ಬಗ್ಗೆ ನಮಗೆ ಅರಿವಿರಬೇಕು. ಈ ಕೆಲಸವನ್ನು ಪತ್ರಾಗಾರ ಇಲಾಖೆಯು ದಾಖಲೆಗಳನ್ನು ಸಂಸ್ಕರಿಸಿ ಸಂರಕ್ಷಿಸುವ ಮೂಲಕ ಸಾರ್ವಜನಿಕರು ಮಾಹಿತಿ ಪಡೆಯಲು ಸಹಾಯಕಾರಿಯಾಗುತ್ತಿದೆ. ಹಾಗಾಗಿ ಪ್ರತಿಯೊಬ್ಬ ವಿದ್ಯಾರ್ಥಿಗಳೂ ಪತ್ರಾಗಾರ ಇಲಾಖೆಗೆ ಭೇಟಿ ನೀಡಿ ಅಲ್ಲಿರುವ ದಾಖಲೆ ಹಾಗೂ ಮಾಹಿತಿಗಳನ್ನು ತಿಳಿದುಕೊಂಡು ಅದರ ಬಗ್ಗೆ ಜ್ಞಾನ ವೃದ್ಧಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್‌ನ ಸದಸ್ಯರಾದ ಸಿ.ಎನ್.ಮಂಜೇಗೌಡ, ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಗುಂಡಪ್ಪಗೌಡ, ಕಾಲೇಜು ನಿರ್ವಹಣಾ ಮಂಡಳಿ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನ ಅಧ್ಯಕ್ಷರಾದ ಟಿ.ನಾಗರಾಜು, ಕಾಲೇಜಿನ ಪ್ರಾಂಶುಪಾಲರಾದ ಡಾ.ಎಸ್ ಮರಿಗೌಡ ಮತ್ತಿತರರು ಉಪಸ್ಥಿತರಿದ್ದರು.

# ಬೊಮ್ಮಲಾಪುರ, ಶಿಂಡನಪುರದಲ್ಲಿ ಸಂವಿಧಾನ ಜಾಗೃತಿ



**ಚಾಮರಾಜನಗರ:** ಗುಂಡ್ಲುಪೇಟೆ ತಾಲೂಕಿನ ಬೊಮ್ಮಲಾಪುರ ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾವನ್ನು ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಬರಮಾಡಿಕೊಳ್ಳಲಾಯಿತು.

ಡೊಳ್ಳು ಕುಣಿತ, ತಮಟೆ ವಾದ್ಯ, ಜೋಗಿವೇಷ, ಕರಡಿವೇಷ, ಎತ್ತಿನಗಾಡಿ ಮೆರವಣಿಗೆ ಹಾಗೂ ಪೂರ್ಣಕುಂಭದೊಂದಿಗೆ ಜಾಗೃತಿ ಜಾಥಾವನ್ನು ಸ್ವಾಗತಿಸಲಾಯಿತು. ಆಟೋ ಮತ್ತು ಬೈಕ್ ರ್ಯಾಲಿಯೂ ಸಹ ನಡೆಯಿತು. ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅದ್ಯಕ್ಷರಾದ ಪ್ರತಿಭಾ, ಉಪಾಧ್ಯಕ್ಷರಾದ ಗೋವಿಂದರಾಜು, ಇತರೆ ಸದಸ್ಯರು, ನೋಡಲ್ ಅಧಿಕಾರಿ ವಿವೇಕ್. ಎಸ್., ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಮೋಹನ್ ಕುಮಾರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪಾಲ್ಗೊಂಡಿದ್ದರು. ಹೆಚ್.ಎಂ. ರಾಜು ಅವರು ಮುಖ್ಯ ಭಾಷಣ ಮಾಡಿದರು. ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಆಶಾ, ಅಂಗನವಾಡಿ ಕಾರ್ಯಕರ್ತೆಯರು, ವಿದ್ಯಾರ್ಥಿಗಳು, ಗ್ರಾಮಸ್ಥರು ಸಂವಿಧಾನ ಜಾಗೃತಿ ಜಾಥಾದಲ್ಲಿ ಭಾಗವಹಿಸಿದ್ದರು.

ಶಿಂಡನಪುರದಲ್ಲಿಯೂ ಜಾಗೃತಿ ಜಾಥಾ ವಿಶೇಷವಾಗಿ ನಡೆಯಿತು. ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಪುಷ್ಪಾರ್ಚನೆ ನಡೆಸಿ ಸ್ವಾಗತಿಸಲಾಯಿತು. ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಕೀಚಪ್ಪ, ಉಪಾಧ್ಯಕ್ಷರಾದ ಮಲ್ಲಮ್ಮ, ಇತರೆ ಸದಸ್ಯರು, ಸಮಾಜಕಲ್ಯಾಣ ಇಲಖೆ ಸಹಾಯಕ ನಿರ್ದೇಶಕರಾದ ಮೋಹನ್ ಕುಮಾರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ ವಿಜಯ, ವಿವಿಧ ಸಂಘಟನೆಗಳ ಮುಖಂಡರು ಪಾಲ್ಗೊಂಡರು.

# ವಿವಿಧ ಅಂಗನವಾಡಿ ಕೇಂದ್ರಗಳಿಗೆ ನ್ಯಾಯಾಧೀಶರ ಭೇಟಿ

**ಚಾಮರಾಜನಗರ:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ. ಶ್ರೀಧರ ಅವರು ತಾಲೂಕಿನ ಕೋಡಿಮೋಳೆ ಮತ್ತು ಬಸವನಪುರ ಗ್ರಾಮಗಳಲ್ಲಿರುವ ಅಂಗನವಾಡಿ ಕೇಂದ್ರಗಳಿಗೆ ಇತ್ತೀಚೆಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿದರು.

ಕೋಡಿಮೋಳೆ ಗ್ರಾಮದಲ್ಲಿರುವ 1ರಿಂದ 3ನೇ ಕೇಂದ್ರದ ಅಂಗನವಾಡಿಗಳಿಗೆ ಭೇಟಿ ನೀಡಿದ ನ್ಯಾಯಾಧೀಶರು ಅಂಗನವಾಡಿ ಕಟ್ಟಡ ವ್ಯವಸ್ಥೆ, ಮಕ್ಕಳಿಗೆ ನೀಡುವ ಪೌಷ್ಠಿಕ ಆಹಾರ ಹಾಗೂ ಸ್ವಚ್ಚತೆ ಬಗ್ಗೆ ಪರಿಶೀಲನೆ ನಡೆಸಿದರು. ಚಂದಕವಾಡಿ ಹೋಬಳಿಯ ಬಸವನಪುರ ಗ್ರಾಮದಲ್ಲಿರುವ 1 ಮತ್ತು 2ರ ಅಂಗನವಾಡಿಗಳಿಗೆ ಭೇಟಿ ನೀಡಿ ಸರ್ಕಾರದಿಂದ ಮಕ್ಕಳಿಗೆ ನೀಡುವ ಪೌಷ್ಠಿಕ ಆಹಾರ ಹಾಗೂ ಸಿಬ್ಬಂದಿಗಳ ಕರ್ತವ್ಯದ ಬಗ್ಗೆ ಪರಿಶೀಲಿಸಿದರು.

ಕೋಡಿಮೋಳೆ ಗ್ರಾಮದ ಅಂಗನವಾಡಿ ಮುಂಭಾಗದ ಚರಂಡಿಗಳಲ್ಲಿ ಸ್ಲ್ಯಾಬ್ ವ್ಯವಸ್ಥೆ ಇಲ್ಲದಿರುವುದು, ಇದರಿಂದ ಮಕ್ಕಳು ಸುಗಮವಾಗಿ ದಾಟಲು ಗೇಟಿಗೆ ಸಂಪೂರ್ಣ ಚಪ್ಪಡಿ ಹಾಕದೇ ಇರುವುದರಿಂದ ಹಾಗೂ ಚರಂಡಿ ನೀರು ಶೇಖರಣೆ ಆಗುವುದರಿಂದ ದುರ್ವಾಸನೆ ಉಂಟಾಗಿ ಮಕ್ಕಳ ಆರೋಗ್ಯಕ್ಕೆ ತೊಂದರೆ ಉಂಟಾಗದಂತೆ ಕ್ರಮ ತೆಗೆದುಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು



ಅಂಗನವಾಡಿಕೇಂದ್ರಗಳಿಗೆವಿದ್ಯುತ್‌ಸಂಪರ್ಕದ ಕೊರತೆ, ಮೇಲ್ಚಾವಣಿ ಶಿಥಿಲಾವಸ್ಥೆಯನ್ನು ಸಮಸ್ಯೆಗಳನ್ನು ಅದಷ್ಟು ಬೇಗನೆ ಸರಿಪಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಬಸವನಪುರ ಗ್ರಾಮದ ಅಂಗನವಾಡಿ-2ರ ಹತ್ತಿರ ಇರುವ ಕೆರೆಗೆ ಸುತ್ತ ಬೇಲಿ ಇಲ್ಲದಿರುವುದನ್ನು ವೀಕ್ಷಿಸಿದ ನ್ಯಾಯಾಧೀಶರು ಕೆರೆಯ ಸುತ್ತ ಬೇಲಿ ಹಾಕಲು ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ಸೂಚಿಸಿದರು.

ಬಸವನಪುರ ಗ್ರಾಮದ ಅಂಗನವಾಡಿ ಕೇಂದ್ರದ ಆರ್.ಸಿ.ಸಿ. ಮೇಲ್ಚಾವಣಿಯು ದಿನದಿಂದ ದಿನಕ್ಕೆ ಕ್ಷೀಣಿಸುತ್ತಿದ್ದು, ಕುಸಿದು ಬೀಳುವ ಸಂಭವ ಇರುವುದರಿಂದ ಶೀಘ್ರ ಕ್ರಮಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ಪತ್ರ ವ್ಯವಹಾರ ನಡೆಸುವಂತೆ ತಿಳಿಸಿದರು. ವಿದ್ಯುತ್ ಬಿಲ್ ಕಟ್ಟದೇ ಮಕ್ಕಳು ಬಿಸಿಲಿನ ತಾಪದಿಂದ ಉಸಿರುಕಟ್ಟುವ ಪರಿಸ್ಥಿತಿ ಕಂಡು ಬಂದಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಕೂಡಲೇ ಬಾಕಿ ವಿದ್ಯುತ್ ಬಿಲ್ ಪಾವತಿಸಿ, ಮಕ್ಕಳಿಗೆ ವಿದ್ಯುತ್ ಹಾಗೂ ಫ್ಯಾನ್ ಸೌಕರ್ಯ ನೀಡುವಂತೆ ನ್ಯಾಯಾಧೀಶರು ಸೂಚಿಸಿದರು.

ಅಂಗನವಾಡಿ ಕೇಂದ್ರಗಳಿಗೆ ಹೆಚ್ಚು ಬೆಳಕು ಬರುವಂತಹ ವಿದ್ಯುತ್ ಬಲ್ಬನ್ನು ಅಳವಡಿಸಬೇಕು. ಅಲ್ಲದೆ ಕಾನೂನು ನೆರವಿನ ಅಗತ್ಯವಿದ್ದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರವನ್ನು ಸಂಪರ್ಕಿಸುವಂತೆ ಅಂಗನವಾಡಿಯಲ್ಲಿ ಕರ್ತವ್ಯ ನಿರ್ವಹಿಸುವ ನೌಕರರಿಗೆ ನ್ಯಾಯಾಧೀಶರಾದ ಎಂ. ಶ್ರೀಧರ ಅವರು ತಿಳಿಸಿದರು.

# ಕೃಷಿ ಸಚಿವರ ಜಿಲ್ಲಾ ಪ್ರವಾಸ ಕಾರ್ಯಕ್ರಮ ಇಂದು

**ಮಂಡ್ಯ:** ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಫೆಬ್ರವರಿ 18 ರಂದು ಮಂಡ್ಯ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಬೆಳಿಗ್ಗೆ 10.30 ಗಂಟೆಗೆ ಮಳವಳ್ಳಿ ತಾಲೂಕಿನ ಮಂಚನಹಳ್ಳಿಯಲ್ಲಿ ಕನಕದಾಸರ ಪುತ್ತಳಿ ಅನಾವರಣ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. 11:30ಕ್ಕೆ ಮಳವಳ್ಳಿಯ ಶಾಂತಿ ಕಾಲೇಜು ಮುಂಭಾಗದ ಮೈದಾನದಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಮಂಡ್ಯ ಜಿಲ್ಲೆ ಇವರ ವತಿಯಿಂದ ಆಯೋಜಿಸಿರುವ ಮಳವಳ್ಳಿ ತಾಲೂಕಿನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ /ಉದ್ಘಾಟನೆ ಹಾಗೂ ಸರ್ಕಾರದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 3.30 ಗಂಟೆಗೆ ಕುಂಟಾನುಕೊಪ್ಪಲು, ದೇವಲಾಪುರ ಹೋಬಳಿ, ನಾಗಮಂಗಲ ತಾಲೂಕು, ಶ್ರೀ ಮದ್ದೇನಹಟ್ಟಮ್ಮ ದೇವಿಯ ನೂತನ ದೇವಸ್ಥಾನ ಮತ್ತು ವಿಮಾನ ಗೋಪುರದ ಪ್ರಧಾನ ಕಲಶ ಪ್ರತಿಷ್ಠಾಪನಾ ಮಹೋತ್ಸವದ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ ಸಂಜೆ 5:30 ಗಂಟೆಗೆ ಕುಂಟಾನುಕೊಪ್ಪಲು ರಸ್ತೆಯ ಮೂಲಕ ಬೆಳ್ಳೂರು ಕ್ರಾಸ್-ಯಡಿಯೂರು-ಕುಣಿಗಲ್ -ನೆಲಮಂಗಲ ಮಾರ್ಗವಾಗಿ ಕೇಂದ್ರ ಸ್ಥಾನ ಬೆಂಗಳೂರು ತಲುಪಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



### ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ .ಗಾಯಿತ್ರಿ ಸೂಚನೆ

# ಬೇಸಿಗೆಯಲ್ಲಿ ಕುಡಿವ ನೀರಿಗೆ ಸಮಸ್ಯೆ ಆಗದಂತೆ ಕ್ರಮ ವಹಿಸಿ

**ಮೈಸೂರು:** ಅಧಿಕಾರಿಗಳು ಸಮಸ್ಯೆ ಇರುವ ಸ್ಥಳಕ್ಕೆ ಖುದ್ದು ಭೇಟಿ ನೀಡಿ ಅಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಬೇಕು ಹಾಗೂ ಮುಂಬರುವ ಬೇಸಿಗೆಯಲ್ಲಿ ಜನರಿಗೆ ಕುಡಿಯುವ ನೀರು ಸಮಸ್ಯೆ ಆಗದಂತೆ ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ ಎಂ ಗಾಯಿತ್ರಿಯವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಜಿಲ್ಲಾ ಪಂಚಾಯತ್ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ನಡೆದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ ಅವರು ಅಧಿಕಾರಿಗಳು ಜನರ ಕ?ಟವನ್ನು ಆಲಿಸಿ ಅವರ ಸಮಸ್ಯೆಗಳಿಗೆ ಮಾರ್ಗೋಪಾಯಗಳನ್ನು ತಿಳಿಸಿ ಅವರ ಸಮಸ್ಯೆಗಳನ್ನು ಬಗೆಹರಿಸಲು ಮುಂದಾಗಬೇಕು. ಪ್ರತಿಯೊಬ್ಬರಿಗೂ ನೀರು ಅತ್ಯಗತ್ಯ. ಮುಂದೆ ಬರುವ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲು ಮೊದಲು ಗ್ರಾಮಗಳಲ್ಲಿ ಇರುವ ಬಾವಿ, ಕೆರೆ, ಬೋರ್ ವೆಲ್ ಗಳಲ್ಲಿ ನೀರಿನ ಮಟ್ಟವನ್ನು ಪರೀಕ್ಷಿಸಿ ಕಡಿಮೆಯಾಗಿರುವುದು ಕಂಡುಬಂದರೆ ನೀರನ್ನು ತುಂಬಿಸಲು ಅಗತ್ಯ ಕ್ರಣ ವಹಿಸಬೇಕು ಎಂದು ತಿಳಿಸಿದರು.

ನೀರಿನ ಸಮಸ್ಯೆ ಇರುವ ಹಾಡಿಯಲ್ಲಿರವ ಜನರಿಗೆ ಟ್ಯಾಂಕರ್ ಮೂಲಕ ನೀರನ್ನು ಸರಬರಾಜು ಮಾಡಲು ಅಗತ್ಯ ಕ್ರಮವಹಿಸಬೇಕು. ಹಾಡಿಯಲ್ಲಿ ಸ್ಮಶಾಣ, ಗೋಮಾಳ ಇತ್ಯಾದಿ ಕುಂದು-ಕೊರತೆಗಳು ಕಂಡುಬಂದರೆ ತಕ್ಷಣವೇ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು ಎಂದು ತಿಳಿಸಿದರು.



ಇದು ಬೇಸಿಗೆ ಸಮಯವಾದ್ದರಿಂದ ಡೀಹೈಡ್ರೇಟ್, ಸಾಂಕ್ರಾಮಿಕ ರೋಗಗಳು ಹೆಚ್ಚಾಗುವ ಸಾಧ್ಯತೆಗಳಿರುತ್ತವೆ. ಹಾಗಾಗಿ ತಮ್ಮ ತಮ್ಮ ಗ್ರಾಮಪಂಚಾಯಿತಿ ವ್ಯಾಪ್ತಿಗೆ ಬರುವ ಗ್ರಾಮಗಳಲ್ಲಿನ ಜನರಿಗೆ ವೈದ್ಯಕೀಯ ಇಲಾಖೆಯಿಂದ ಬಂದ ಮಾಹಿತಿಯನ್ನು ತಲುಪಿಸಿ, ಅವರಿಗೆ ಸರಿಯಾದ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಬೇಕು. ಚರಂಡಿಗಳು, ರಸ್ತೆ ಬದಿಗಳು, ನೀರಿನ ಟ್ಯಾಂಕರ್ ಗಳನ್ನು, ಬೋರ್ ವೆಲ್ ಗಳನ್ನು ಸ್ವಚ್ಛಗೊಳಿಸಿ ಗ್ರಾಮವನ್ನು ಶುಚಿಯಾಗಿ ಇಟ್ಟುಕೊಳ್ಳಬೇಕು. ಇದನ್ನು ಪ್ರತಿಯೊಬ್ಬ ಅಧಿಕಾರಿಯು ಒಂದು ಅಭಿಯಾನದಂತೆ ಮಾಡಿ ಗ್ರಾಮ-ಗ್ರಾಮಗಳಿಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದರು.

ಇಲಾಖೆಯ ಅಧಿಕಾರಿಗಳು ತಾವು ಮಾಡುವ ಪ್ರತಿಯೊಂದು ಕೆಲಸದ ದಾಖಲೆಗಳನ್ನು ಪ್ರತ್ಯೇಕ ಫೈಲ್ ಮಾಡಬೇಕು. ಇದರಿಂದ ಎಲ್ಲಾ ಕೆಲಸಗಳ ಒಂದು ಚಿತ್ರಣ ಹುಡುಕುವುದು ಸುಲಭವಾಗುತ್ತದೆ. ಮುಖ್ಯಮಂತ್ರಿಗಳ ತವರು ಜಿಲ್ಲೆಯಾದ್ದರಿಂದ ಇಲ್ಲಿ ಯಾವುದೇ ರೀತಿಯ ಕೆಲಸಗಳು ಬಾಕಿ ಉಳಿಯದಂತೆ ನೋಡಿಕೊಳ್ಳಬೇಕು. ಹಾಗೆಯೇ ಜನರಿಗೂ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳುವುದು ಬಹಳ ಮುಖ್ಯ ಹಾಗಾಗಿ ಅಧಿಕಾರಿಗಳು ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದರು.

ಜಿಲ್ಲಾ ಪಂಚಾಯಿತಿಯ ಉಪಕಾರ್ಯದರ್ಶಿ(ಅಭಿವೃದ್ಧಿ)ಗಳಾದ ಕೃ?ಣರಾಜು ಡಿ.ಎಸ್ ಅವರು ಮಾತನಾಡಿ ಸ್ವಚ್ಛ ಭಾರತ್ ಮಿ?ನ್ ಅಡಿಯಲ್ಲಿ ಮನೆ ಮನೆಗೂ ಶೌಚಾಲಯಗಳನ್ನು ನಿರ್ಮಿಸಬೇಕಾಗಿದೆ. ವಸತಿ ಯೋಜನೆಯಡಿಯಲ್ಲಿ ಅರ್ಜಿಗಳನ್ನು ಸ್ವೀಕರಿಸಿ ಜನರಿಗೆ ಯೋಜನೆಗಳ ಬಗ್ಗೆ ಮಾಹಿತಿ ನೀಡಿ ಅವರಿಂದ ಸರಿಯಾದ ದಾಖಲೆಗಳನ್ನು ಪಡೆಯಬೇಕು. ಇದರಿಂದ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ, ತಿರಸ್ಕರಿಸಿದ ಅರ್ಜಿಗಳ ಸಂಖ್ಯೆಯಲ್ಲಿ ಅಂತರ ಕಡಿಮೆಯಾಗಬೇಕು. ಅವಶ್ಯಕತೆ ಇರುವ ಪ್ರತಿಯೊಬ್ಬ ವ್ಯಕ್ತಿಗೂ ಸೌಲಭ್ಯ ದೊರಕುವಂತೆ ಮಾಡಬೇಕು ಎಂದು ಹೇಳಿದರು. ಸಭೆಯಲ್ಲಿ ಮೈಸೂರು ಜಿಲ್ಲೆಯ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಸೇರಿಸಂತೆ ಇತರ ಅಧಿಕಾರಿಗಳು ಉಪಸ್ಮಿತರಿದ್ದರು.

## ಅಪ್ರಾಪ್ತ ವಿಶೇಷಚೇತನ ಬಾಲಕಿ ಮೇಲೆ ಅತ್ಯಾಚಾರವೆಸಗಿದ ಆರೋಪಿಗೆ ಶಿಕ್ಷೆ

**ಮಂಡ್ಯ:** ಅಪ್ರಾಪ್ತ ವಿಶೇಷಚೇತನ ಬಾಲಕಿ ಮೇಲೆ ಅತ್ಯಾಚಾರ ನಡೆಸಿದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಆರೋಪಿಗೆ 13 ವರ್ಷ ಶಿಕ್ಷೆ ಹಾಗೂ 30 ಸಾವಿರ ರೂ. ದಂಡ ವಿಧಿಸಿ ಮಂಡ್ಯ ಅಧಿಕ ಸತ್ರ ಮತ್ತು ತ್ವರಿತಗತಿ ನ್ಯಾಯಾಲಯದ ವಿಶೇಷ ನ್ಯಾಯಾಧೀಶರಾದ ಕೆ.ಎ.ನಾಗಜ್ಯೋತಿ ಅವರು ತೀರ್ಪು ನೀಡಿದ್ದಾರೆ. ಮಂಡ್ಯದ ಸುಭಾಷ್‌ನಗರ (ನೂರಡಿ ರಸ್ತೆ)ದ ಎಂ.ಎಸ್.ಮಹೇಶ್ ಎಂಬಾತನೇ ಶಿಕ್ಷೆಗೊಳಗಾದ ಆರೋಪಿ.

ಕಳೆದ 2022ರಲ್ಲಿ ಆರೋಪಿ ಮಹೇಶನು 16 ವರ್ಷದ ಅಪ್ರಾಪ್ತ ವಿಶೇಷಚೇತನ ಬಾಲಕಿಯನ್ನು ಪುಸಲಾಯಿಸಿ ತನ್ನ ಕಾರಿನಲ್ಲಿ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದ ಹಿಂಭಾಗದ ರಸ್ತೆಗೆ (ಸೆಸ್ಕ್ ಕಚೇರಿಗೆ ಹೋಗುವ ರಸ್ತೆ) ಕರೆದೊಯ್ದು ಆಕೆಯ ಮೇಲೆ ಅತ್ಯಾಚಾರ ನಡೆಸಿದ್ದನು. ಈ ಸಂಬಂಧ ಮಹಿಳಾ ಪೊಲೀಸ್ ಠಾಣೆಯಲ್ಲಿ ಅತ್ಯಾಚಾರಕ್ಕೊಳಗಾದ ಅಪ್ರಾಪ್ತೆ ಹಾಗೂ ಪೋಷಕರು ದೂರು ನೀಡಲಾಗಿ, ವಿಚಾರಣೆ ನಡೆಸಿದ ಅಂದಿನ ಇನ್‌ಸ್ಪೆಕ್ಟರ್ ಎಸ್.ಕೆ.ಕೃಷ್ಣ ಅವರು ಆರೋಪಿ ವಿರುದ್ಧ ನ್ಯಾಯಾಲಯಕ್ಕೆ ಪೋಕ್ಸೋ ಕಾಯ್ದೆಯಡಿ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿದ ಮಂಡ್ಯ ಅಧಿಕ ಸತ್ರ ಮತ್ತು ತ್ವರಿತಗತಿ ನ್ಯಾಯಾಲಯದ ವಿಶೇಷ ನ್ಯಾಯಾಧೀಶರಾದ ಕೆ.ಎ.ನಾಗಜ್ಯೋತಿ ಅವರು ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಆರೋಪಿ ಮಹೇಶ್‌ಗೆ ಭಾದಂಸಂ ಕಲಂ 354(2ಇ) ಅಡಿಯಲ್ಲಿನ ಅಪರಾಧಕ್ಕೆ ಒಂದು ವರ್ಷ ಶಿಕ್ಷೆ, 5 ಸಾವಿರ ರೂ. ದಂಡ, ದಂಡ ಪಾವತಿಸಲು ತಪ್ಪಿದಲ್ಲಿ 2 ತಿಂಗಳ ಸಾದಾ ಶಿಕ್ಷೆ ಹಾಗೂ ಭಾದಂಸಂ ಕಲಂ 376(2)(ಐ) ಅಡಿಯಲ್ಲಿನ ಅಪರಾಧಕ್ಕೆ 12 ವರ್ಷಗಳ ಶಿಕ್ಷೆ, 30 ಸಾವಿರ ದಂಡ, ದಂಡ ಪಾವತಿಸಲು ತಪ್ಪಿದಲ್ಲಿ 3 ತಿಂಗಳು ಸಾದಾ ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ. ಅಭಿಯೋಜನೆಯ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಹೆಬ್ಬಕವಾಡಿ ನಾಗರಾಜು ಅವರು ವಾದ ಮಂಡಿಸಿದ್ದರು ಎಂದು ಮಂಡ್ಯ ಎಫ್.ಟಿ.ಸಿ-2, ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆನ್ ಲೈನ್ ತಂತ್ರಾಂಶದಲಿ ಕಟ್ಟಡ ಪರವಾನಿಗೆ

**ಮಂಡ್ಯ:** ಮಂಡ್ಯ ನಗರಸಭಾ ವ್ಯಾಪ್ತಿಯಲ್ಲಿ ನೂತನ ಕಟ್ಟಡ ನಿರ್ಮಾಣ ಮಾಡಲು ಕಟ್ಟಡ ಪರವಾನಿಗೆಯನ್ನು ನೀಡುವ ಕಾರ್ಯವು ಆನ್ ಲೈನ್ ತಂತ್ರಾಂಶದಲ್ಲಿರುತ್ತದೆ. ದಿನಾಂಕ 24-11-2023ರ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ:137 ಮೈಅಪ್ರಾ, 2020(ಇ) ರಂತೆ 4000 ಚದರ ಅಡಿ ಹೊಂದಿರುವ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡಲು ಯೋಜನಾ ಪ್ರಾಧಿಕಾರದಿಂದ ತಾಂತ್ರಿಕ ಅಭಿಪ್ರಾಯ ಪಡೆಯುವುದನ್ನು ವಿನಾಯಿತಿ ನೀಡಲಾಗಿದೆ. ದಿಮಾಂಕ:10-01-2024ರ ಸರ್ಕಾರದ ಅಧಿಸೂಚನೆ ಸಂಖ್ಯೆ:ನಾಇ:19ಟಿಟಿಪಿ2023(ಇ) ರಲ್ಲಿ ಎಲ್ಲಾ ಮಾದರಿಯ ನಿವೇಶನಗಳಿಗೆ ಕಟ್ಟಡದ ಪ್ರಾರಂಭ ಧೃಢೀಕರಣ ಪತ್ರ ನೀಡಲು ಸ್ಥಳಿಯ ಸಂಸ್ಥೆಗಳಿಗೆ ಅಧಿಕಾರಿ ಪ್ರತ್ಯಾಯೋಜಿಸಲಾಗಿತ್ತು, ದಿನಾಂಕ 05-02-2024 ರ ಸರ್ಕಾರದ ಅಧಿಸೂಚನೆ ಸಂಖ್ಯೆ: ನಾಅಇ:19ಟಿಟಿಪಿ2023(ಇ) ರಲ್ಲಿ ದಿನಾಂಕ: 24-11-2023 ಮತ್ತು ದಿನಾಂಕ: 10-01-2024 ರ ಎರಡು ಸರ್ಕಾರದ ಅಧಿಸೂಚನೆಗಳನ್ನು ಹಿಂಪಡೆಯಲಾದುದರಿಂದ ಈ ವೇಳೆಯಲ್ಲಿ ಆನ್ ಲೈನ್ ತಂತ್ರಾಂಶದಲ್ಲಿ ಮಾರ್ಪಾಡು ಮಾಡಲಾಗಿದ್ದು ಸೂಕ್ತ ದಾಖಲಾತಿಗಳೊಡನೆ ಕಟ್ಟಡ ಪರವಾನಿಗೆ ಕೋರಿ ಸಲ್ಲಿಕೆಯಾಗಿರುವ ಮನವಿಗಳಿಗೆ ನಿಗಧಿತ ಸಮಯದಲ್ಲಿ ಪರವಾನಿಗೆ ನೀಡಲಾಗುತ್ತಿದೆ ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತ ವಿದ್ಯಾನಿಧಿ ವಿದ್ಯಾರ್ಥಿವೇತನ

**ಬೆಂಗಳೂರು:** 2023-24 ನೇ ಸಾಲಿನಲ್ಲಿ ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮ ಹಾಗೂ ಭೂರಹಿತ ಕೃಷಿ ಕಾರ್ಮಿಕರ ವಿದ್ಯಾನಿಧಿ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಪಡೆಯಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳ ಪೋಷಕರ ಆದಾಯವು ರೂ. 2.50 ಲಕ್ಷ ಮೀರಿರಬಾರದು ಎಂಬ ಷರತ್ತನ್ನು ವಿಧಿಸಿರುವುದರಿಂದ ಸಾಮಾನ್ಯ ವರ್ಗದಡಿ ಬರುವ ರೈತರ ಮಕ್ಕಳು ತಮ್ಮ ಪೋಷಕರ ಜಾತಿ ಮತ್ತು ಆದಾಯ ಪ್ರಮಾಣಪತ್ರವನ್ನು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (ಎಸ್‌ಎಸ್‌ಪಿ) ರವರಿಗೆ ಫೆಬ್ರವರಿ 29 ರೊಳಗೆ ಸಲ್ಲಿಸಬೇಕೆಂದು ಕೃಷಿ ಇಲಾಖೆ ಅಧಿಕೃತ ಪ್ರಕಟಣೆ ತಿಳಿಸಿದೆ.

## 19 ರಂದು ಪೂರ್ವಭಾವಿ ಸಭೆ

**ರಾಮನಗರ:** ಚನ್ನಪಟ್ಟಣ ನಗರಸಭೆಯ 2024-25ನೇ ಸಾಲಿನ ಆಯವ್ಯಯ ತಯಾರಿಸಲು ಫೆ. 19ರ ಸೋಮವಾರ ಸಂಜೆ 4 ಗಂಟೆಗೆ ನಗರಸಭೆ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ. ನಗರದ ಸರ್ವತೋಮುಖ ಅಭಿವೃದ್ಧಿಗೆ ಅಗತ್ಯವಾದ ಸಲಹೆ ಮತ್ತು ಸೂಚನೆಗಳನ್ನು ನೀಡಲು ಸಾರ್ವಜನಿಕರು ಹಾಗೂ ಸಂಬಂಧಿಸಿದವರು ಆಗಮಿಸುವಂತೆ ಚನ್ನಪಟ್ಟಣ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೋರಗೆರೆ ಗ್ರಾಪಂ ಸಭಾಂಗಣದ ಕಟ್ಟಡ ಉದ್ಘಾಟನೆ

**ಹುಳಿಯಾರು:** ಹುಳಿಯಾರು ಹೋಬಳಿಯ ಕೋರಗೆರೆ ಗ್ರಾಮ ಪಂಚಾಯ್ತಿಯಿಂದ ಅಮೃತ ಗ್ರಾಮ ಪಂಚಾಯ್ತಿ ಹಾಗೂ 15 ನೇ ಹಣಕಾಸು ಯೋಜನೆಯಡಿ ನಿರ್ಮಿಸಲಾಗಿರುವ ಸಭಾಂಗಣ ಕಟ್ಟಡಡ ಉದ್ಘಾಟನಾ ಕಾರ್ಯಕ್ರಮವನ್ನು ಫೆ.19 ರ ಸೋಮವಾರ ಬೆಳಗ್ಗೆ 11 ಗಂಟೆಗೆ ಏರ್ಪಡಿಸಲಾಗಿದೆ. ಶಾಸಕ ಸಿ.ಬಿ.ಸುರೇಶ್‌ಬಾಬು ಉದ್ಘಾಟಿಸಲಿರುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಪಂ ಅಧ್ಯಕ್ಷ ಬಿ.ಎಸ್.ದಿನೇಶ್ ವಹಿಸುವರು. ಸಚಿವರುಗಳಾದ ಡಾ.ಜಿ.ಪರಮೇಶ್ವರ್, ಕೆ.ಎನ್.ರಾಜಣ್ಣ, ಪ್ರಿಯಾಂಕಖರ್ಗೆ, ನವದೆಹಲಿ ಪ್ರತಿನಿಧಿ ಟಿ.ಬಿ.ಜಯಚಂದ್ರ, ಸಂಸದ ಜಿ.ಎಸ್. ಬಸವರಾಜು ಮತ್ತಿತರರು ಆಗಮಿಸುವರು.

# ಔಷಧೀಯ ಗುಣಗಳಿಂದ ಕೂಡಿದೆ ದಾಳಿಂಬೆ ಹಣ್ಣು



**ವಿಜಯಪುರ:** ಅತ್ಯಂತ ಕಳಪೆ ಮಣ್ಣಿನಲ್ಲಿ, ಕಡಿಮೆ ನೀರು ಬಳಸುವ ಮೂಲಕ, ಒಣ ಪ್ರದೇಶಗಳಲ್ಲಿ ಬೆಳೆಯುವ, ಇದರ ಹಣ್ಣಿನ ಸಿಪ್ಪೆ ಹಾಗೂ ಬೇರುಗಳನ್ನು ಆಯುರ್ವೇದ ಹಾಗೂ ನಾಟಿ ಔಷಧಿಗಳಲ್ಲಿ ಬಳಸುವ ಉಪಯುಕ್ತ ಔಷಧೀಯ ಗುಣಗಳಿಂದ ಕೂಡಿದ ದಾಳಿಂಬೆ ಹಣ್ಣು ದೇಹಕ್ಕೆ ಪುನಶ್ಚೇತನ ನೀಡುವ ಹಣ್ಣಾಗಿದ್ದು, ಈ ಹಣ್ಣನ್ನು ಸ್ವರ್ಗದ ಹಣ್ಣು ಎಂತಲೂ ಕರೆಯುತ್ತಾರೆ ಎಂದು ದಾಳಿಂಬೆ ರತ್ನ ಪ್ರಶಸ್ತಿ ವಿಜೇತ ವಿಜ್ಞಾನಿ ಡಾ. ಗೋರೆ ತಿಳಿಸಿದರು.

ಅವರು ಇಲ್ಲಿನ ಶ್ರೀ ಅನ್ನಪೂರ್ಣೇಶ್ವರಿ ಕನ್ವೆನ್ಷನ್ ಹಾಲ್ ನಲ್ಲಿ ಐಸಿಎಲ್ ಮ್ಯಾನೇಜ್ಮೆಂಟ್ ಮತ್ತು ಟ್ರೇಡಿಂಗ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಹಾಗೂ ಶ್ರೀನಿಧಿ ಆಗ್ರೋಕೆಮಿಕಲ್ಸ್ ರವರುಗಳ ಸಂಯುಕ್ತಾಶ್ರಯದಲ್ಲಿ ರೈತರಿಗಾಗಿ ಏರ್ಪಡಿಸಿದ್ದ ದಾಳಿಂಬೆ ಬೆಳೆ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಭಾರತದಲ್ಲಿ ದಾಳಿಂಬೆ ಉತ್ಪಾದನೆಯು ಪ್ರತಿ ವರ್ಷ, ವರ್ಷ ಹೆಚ್ಚಾಗುತ್ತಿದ್ದು 2020-21 ರಲ್ಲಿ 2.78 ಲಕ್ಷ ಹೆಕ್ಟರ್ಗಳಲ್ಲಿ 31.87 ಲಕ್ಷ ಮೆಟ್ರಿಕ್ ಟನ್ ಬೆಳೆಯಲಾಗಿತ್ತು. ಇದೀಗ ಅದು ಇನ್ನೂ ಹೆಚ್ಚಾಗುತ್ತಿದೆ ಎಂದು ತಿಳಿಸಿದರು ಕೀಟಗಳ ಹತೋಟಿ ಮತ್ತು ಸಮಗ್ರ ಪೋಷಕಾಂಶಗಳ ನಿರ್ವಹಣೆಯ ಮೂಲಕ ಗುಣಮಟ್ಟದ ದಾಳಿಂಬೆ ಹಣ್ಣನ್ನು ಬೆಳೆದರೆ ಹತ್ತಾರು ದೇಶಗಳಿಗೆ ಈಗಾಗಲೇ ಇದು ರಫ್ತಾಗುತ್ತಿದ್ದು, ರೈತರಿಗೆ ಉತ್ತಮ ಆದಾಯ ತರುವ ಬೆಳೆ ಇದಾಗಿದೆ ಎಂದು ತಿಳಿಸಿದರು. ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಹಾರ್ಟಿಕಲ್ಚರ್ ರಿಸರ್ಚ್ ನ ಪ್ರಿನ್ಸಿಪಲ್ ಸೈಂಟಿಸ್ಟ್ ಜಿ ಎಸ್ ಪ್ರಕಾಶ್ ರವರು ಮಾತನಾಡುತ್ತ, ಕೋಟಿ ವಿದ್ಯೆಗಳಲ್ಲಿ ಮೇಟಿ ವಿದ್ಯೆಯೇ ಮೇಲು ಎಂಬಂತ ಸರ್ವಜ್ಞನ ವಾಣಿಯಂತೆ ಬದ್ಧತೆಯಿಂದ ಭೂಮಿತಾಯಿಯ ಸೇವೆ ಮಾಡಿದರೆ ದೇಶದ ಆರ್ಥಿಕತೆ ಕೂಡ ಅಭಿವೃದ್ಧಿ ಹೊಂದುವುದರೊಂದಿಗೆ ರೈತರು ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕೀಟಶಾಸ್ತ್ರ ವಿಭಾಗದ ಪ್ರಿನ್ಸಿಪಲ್ ಸೈಂಟಿಸ್ಟ್ ಡಾಕ್ಟರ್ ಅಬ್ರಹಾಂ ವರ್ಗೀಸ್, ಶ್ರೀನಿಧಿ ಆಗ್ರೋ ಕೆಮಿಕಲ್ಸ್ನ ವ್ಯವಸ್ಥಾಪಕರಾದ ವಿ.ಜಿ. ರಾಘವೇಂದ್ರ, ಐ.ಸಿ.ಎಲ್ ಮ್ಯಾನೇಜ್ಮೆಂಟ್ ಮತ್ತು ಟ್ರೇಡಿಂಗ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ನ ವ್ಯವಸ್ಥಾಪಕರಾದ ಪುರುಷೋತ್ತಮ್, ಐಪಿಎಸ್ ನ ಸಿ.ಇ.ಒ ಡಾ. ರಶ್ಮಿ ಉಪಸ್ಥಿತರಿದ್ದರು. ಎವಿಐಎನ್(ಅಬ್ರಹಾಂ ವರ್ಗೀಸ್ ಇನ್ಸೆಕ್ಟ್ ಅಂಡ್ ನೇಚರ್) ಟ್ರಸ್ಟ್‌ನ ವತಿಯಿಂದ ವಿಜ್ಞಾನಿಗಳಾದ ಡಾ||ಬಿ.ಟಿ.ಗೋರೆರವರಿಗೆ ಪೋಮೊಗ್ರೇನೆಟ್ ಪ್ಲಾಂಟ್ ಹೆಲ್ತ್ ಅವಾರ್ಡ್,(ದಾಳಿಂಬೆ ಸಸ್ಯ ಆರೋಗ್ಯ ಪ್ರಶಸ್ತಿಯನ್ನು ) ಜೆ.ಎಸ್.ಪ್ರಕಾಶ್‌ರವರಿಗೆ ಗ್ರೇಪ್ಸ್ ಪ್ಲಾಂಟ್ ಹೆಲ್ತ್ ಅವಾರ್ಡ್ ಡಾಕ್ಟರ್ ಅಬ್ರಹಾಂ ವರ್ಗೀಸ್ ಮತ್ತು ಡಾಕ್ಟರ್ ಎಂ ಎ ರಶ್ಮಿ ಐಪಿಎಸ್ ರವರುಗಳು ರವರಿಗ ಪ್ರಧಾನ ಮಾಡಿ ಗೌರವಿಸಿದರು.

## ಯಳನಾಡು ಹಾಲಿನ ಡೇರಿ ಅಧ್ಯಕ್ಷರಾಗಿ ಮಲ್ಲಿಕಾರ್ಜುನಯ್ಯ ಆಯ್ಕೆ

**ಹುಳಿಯಾರು:** ಹುಳಿಯಾರು ಹೋಬಳಿಯ ಯಳನಾಡು ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ವೈ.ಆರ್.ಮಲ್ಲಿಕಾರ್ಜುನಯ್ಯ, ಉಪಾಧ್ಯಕ್ಷರಾಗಿ ನಾಗೇಶ್ ಅವರು ಶನಿವಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನಿರ್ದೇಶಕರುಗಳಾದ ಮರಿಯಪ್ಪ, ಸಿದ್ಧರಾಮಯ್ಯ, ಕುಮಾರಯ್ಯ, ನಿಜಾನಂದಮೂರ್ತಿ, ಜಗದೀಶ್, ಪರಮೇಶ್, ಆಶಾ, ಪ್ರೇಮಾ, ರಂಜನಿ, ಮೈಲಾರಣ್ಣ, ಕಿರಣ್ ಅವರು ಚುನಾವಣೆಯಲ್ಲಿ ಭಾಗವಹಿಸಿ ನೂತನ ಅಧ್ಯಕ್ಷ, ಉಪಾಧ್ಯಕ್ಷರಿಗೆ ಶುಭ ಹಾರೈಸಿದ್ದಾರೆ. ಚುನಾವಣಾಧಿಕಾರಿ ಸಿಂಗಾಪುರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮುಖ್ಯಶಿಕ್ಷಕ ಈಶ್ವರಪ್ಪ, ಹಾಲಿ ಡೇರಿ ಕಾರ್ಯದರ್ಶಿ ನಾಗಭೂಷಣ್, ಹಾಲು ಪರೀಕ್ಷಕ ಯತೀಶ್ ಮತ್ತಿತರರು ಇದ್ದರು.



**ಹುಳಿಯಾರು ಹೋಬಳಿಯ ಯಳನಾಡು ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ವೈ.ಆರ್.ಮಲ್ಲಿಕಾರ್ಜುನಯ್ಯ, ಉಪಾಧ್ಯಕ್ಷರಾಗಿ ನಾಗೇಶ್ ಅವರು ಶನಿವಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.**

### ಜಿಲ್ಲಾಧಿಕಾರಿ ಡಾ. ಕುಮಾರ ಮಾರ್ಗದರ್ಶನ

# ಬಸವಣ್ಣನ ಆದರ್ಶ ಅನುಸರಿಸಿ

**ಮಂಡ್ಯ:** ಜಗಜ್ಯೋತಿ ಬಸವಣ್ಣನವರ ಕೊಡುಗೆ ಸಮಾಜಕ್ಕೆ ಅನನ್ಯವಾಗಿದೆ. ಅವರ ಮೌಲ್ಯ ಮತ್ತು ಚಿಂತನೆಗಳು ಸಾರ್ವತ್ರಿಕವಾಗಿ ಒಪ್ಪಿಕೊಳ್ಳುವಂತಹದ್ದಾಗಿದ್ದು, ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಬಸವಣ್ಣನವರ ಚಿಂತನೆ ಹಾಗೂ ಮೌಲ್ಯಾದರ್ಶಗಳನ್ನು ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಕಛೇರಿಯ ಸಭಾಂಗಣದಲ್ಲಿ ಕರ್ನಾಟಕ ಸಾಂಸ್ಕೃತಿಕ ನಾಯಕರಾದ ಶ್ರೀ ಜಗಜ್ಯೋತಿ ಬಸವಣ್ಣನವರ ಭಾವಚಿತ್ರವನ್ನು ಅನಾವರಣಗೊಳಿಸಿ, ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು. ಸರ್ಕಾರದ ಆದೇಶದಂತೆ ಜಿಲ್ಲಾದ್ಯಂತ ಎಲ್ಲಾ ಸರ್ಕಾರಿ ಕಚೇರಿಯಲ್ಲಿ ವಿಶ್ವಗುರು ಹಾಗೂ ಕರ್ನಾಟಕದ ಸಾಂಸ್ಕೃತಿಕ ನಾಯಕರಾದ ಶ್ರೀ ಜಗಜ್ಯೋತಿ ಬಸವಣ್ಣನವರ ಭಾವಚಿತ್ರವನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು ಎಂದರು.

ಕಾಯಕವೇ ಕೈಲಾಸ ಎಂಬ ಬಸವಣ್ಣನವರ ನುಡಿಯಂತೆ ಕಾಯಕದ ಮಹತ್ವವನ್ನು ಅರಿತು ಪ್ರತಿಯೊಬ್ಬರು ಶ್ರಮಜೀವಿಯಾಗಿ ಸಮಾಜದ ಅಭಿವೃದ್ಧಿಗೆ ಕಾರಣಕರ್ತರಾಗಬೇಕು. ಕಾಯಕ ಮಾಡುವಾಗ ಪಾರದರ್ಶಕತೆ ಹಾಗೂ ಪ್ರಾಮಾಣಿಕತೆಯಿಂದಿರಬೇಕು ಎಂಬುದು ಇದರ ಉದ್ದೇಶವಾಗಿದೆ ಎಂದರು. 12 ನೇ ಶತಮಾನದಲ್ಲಿ ಮೂಢನಂಬಿಕೆಗಳನ್ನು ಹೋಗಲಾಡಿಸಲು ಹಾಗೂ ಜಾತಿರಹಿತ ಸಮಾಜವನ್ನು ನಿರ್ಮಾಣ ಮಾಡಲು ಬಸವಣ್ಣನವರು ಶ್ರಮಿಸಿದರು. ಜಾತಿಪದ್ಧತಿಯನ್ನು ಹೋಗಲಾಡಿಸಿ ಸಮಾನ ಸಮಾಜವನ್ನು ನಿರ್ಮಿಸಲು ಅಂತರ್ಜಾತಿ ವಿವಾಹಗಳ ಮೂಲಕ ಕಲ್ಯಾಣ ಕ್ರಾಂತಿಯನ್ನು ಉಂಟು ಮಾಡಿದರು. ಇಂತಹ ಮಹಾನ್ ವ್ಯಕ್ತಿಯ ವಚನಗಳನ್ನು ಸ್ಮರಿಸಬೇಕು ಎಂದು ತಿಳಿಸಿದರು. ವ್ಯಕ್ತಿಯು ಹೇಗಿರಬೇಕು ಹಾಗೂ ವ್ಯಕ್ತಿತ್ವವನ್ನು ಹೇಗೆ ಸರ್ವಾಂಗೀಣವಾಗಿ ರೂಪಿಸಿಕೊಳ್ಳಬೇಕು ಎಂಬ ಬಗೆಯನ್ನು ಬಸವಣ್ಣನವರು ತಮ್ಮ ಪ್ರಮುಖ ವಚನಗಳಲ್ಲಿ ತಿಳಿಸಿದ್ದಾರೆ. ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ, ಮುನಿಯಬೇಡ, ಅನ್ಯರಿಗೆ ಅಸಹ್ಯಪಡಬೇಡ, ತನ್ನ ಬಣ್ಣಿಸಬೇಡ, ಇದಿರ ಹಳಿಯಲು ಬೇಡ, ಇದೇ ಅಂತರಂಗಶುದ್ದಿ, ಇದೇ ಬಹಿರಂಗ ಶುದ್ಧಿ, ಇದೇ ನಮ್ಮ ಕೂಡಲಸಂಗಮದೇವರನೊಲಿಸುವ ಪರಿ ಎಂಬ ವಚನದಲ್ಲಿರುವ ಸಪ್ತಸೂತ್ರವನ್ನು ಜನರು ಅಳವಡಿಸಿಕೊಳ್ಳಬೇಕು ಎಂದರು.



ಸಮಾಜವನ್ನು ಬೇಧ ಭಾವ ಮಾಡದೆ ಯಾವ ರೀತಿ ಕಾಣಬೇಕು ಎಂಬ ವೈಖರಿಯನ್ನು ಬಸವಣ್ಣನವರು ದಯವಿಲ್ಲದ ಧರ್ಮವಾವುದಯ್ಯ? ದಯವೇ ಬೇಕು ಸರ್ವ ಪ್ರಾಣಿಗಳೆಲ್ಲರಲ್ಲಿ! ದಯವೇ ಧರ್ಮದ ಮೂಲವಯ್ಯ. ಕೂಡಲಸಂಗಯ್ಯನಂತಲ್ಲದೊಲ್ಲ ಕಂಡಯ್ಯ ಹಾಗೂ ಇವನಾರವ ಇವನಾರವ ಇವನಾರವನೆಂದೆನಿಸದೆನಯ್ಯ, ಇವನಮ್ಮವ ಇವನಮ್ಮವ ಇವನಮ್ಮವನೆಂದೆನಿಸಯ್ಯ ಎಂಬ ವಚನಗಳ ಮೂಲಕ ಎಲ್ಲರೂ ನಮ್ಮವರೇ ಎಂದು ತಿಳಿಯಬೇಕು ಎಂದಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಡಾ. ಬಿ. ಆರ್. ಅಂಬೇಡ್ಕರ್ ರವರು ರಚಿಸಿರುವ ಹಾಗೂ ಪ್ರಸ್ತುತ ಭಾರತ ಸಂವಿಧಾನದಲ್ಲಿರುವ ಸಾಮಾಜಿಕ ನ್ಯಾಯವನ್ನು ಬಸವಣ್ಣನವರು ಅವರ ಕಾಲದಲ್ಲಿಯೇ ತಮ್ಮ ವಚನಗಳ ಮೂಲಕ ಸಮಾಜಕ್ಕೆ ತಿಳಿಸಿದ್ದಾರೆ ಎಂದು ಹೇಳಿದರು.

ಬಸವಣ್ಣನವರ ಮೌಲ್ಯಗಳು, ಚಿಂತನೆಗಳು ಸೂರ್ಯ ಚಂದ್ರ ಇರುವವರೆಗೂ ಹಾಗೂ ಸರ್ವಕಾಲಕ್ಕೂ ದಾರಿದೀಪವಾಗಿದೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಪಠ್ಯ ಪುಸ್ತಕದ ಹೊರತಾಗಿ, ಪ್ರತಿ ಮನೆಗಳಲ್ಲೂ ಬಸವಣ್ಣನ ವಿಚಾರಧಾರೆಗಳನ್ನು ತಿಳಿಸುವ ಕಾರ್ಯ ಮಾಡಬೇಕು ಎಂದರು.

ನಮ್ಮ ನಾಡಿನ ಕಲೆ, ಸಂಸ್ಕೃತಿಯನ್ನು ಉಳಿಸುವಂತಹ ಕಾರ್ಯವನ್ನು ಬಸವಣ್ಣನವರು ತಮ್ಮ ವಚನಗಳ ಮೂಲಕ ಮಾಡಿದ್ದಾರೆ. ಬಸವಣ್ಣನವರ ಭಾವಚಿತ್ರವನ್ನು ಕೇವಲ ಗೋಡೆಗೆ ಸೀಮಿತವಾಗಿಸದೆ ಪ್ರತಿಯೊಬ್ಬರು ತಮ್ಮ ಆತ್ಮ ಮತ್ತು ಮನಸ್ಸಿನಲ್ಲಿ ಅವರ ವ್ಯಕ್ತಿತ್ವವನ್ನು ಅಳವಡಿಸಿಕೊಳ್ಳೋಣ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಹೆಚ್. ಎಲ್. ನಾಗರಾಜುರವರು ಮಾತನಾಡಿ ರಾಜ್ಯ ಸರ್ಕಾರವು ಜಗಜ್ಯೋತಿ ಬಸವೇಶ್ವರರನ್ನು ಸಾಂಸ್ಕೃತಿಕ ರಾಯಭಾರಿ ಎಂದು ಜಗತ್ತಿಗೆ ಘೋಷಣೆ ಮಾಡುವುದರ ಮುಖಾಂತರ ರಾಜ್ಯಾದ್ಯಂತ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನವರ ಭಾವಚಿತ್ರವನ್ನು ಅಳವಡಿಸಿಕೊಂಡು ಪ್ರಜ್ಞಾಪೂರ್ವಕವಾಗಿ ಕರ್ತವ್ಯ ನಿರ್ವಹಿಸಬೇಕು ಎಂದರು.

ಪ್ರಸ್ತುತ ಸಂವಿಧಾನದಲ್ಲಿರುವ ಮೂಲತತ್ವಗಳನ್ನು ಬಸವಣ್ಣನವರು 12 ನೇ ಶತಮಾನದಲ್ಲಿಯೇ ವೈಜ್ಞಾನಿಕ ಚಿಂತನೆ ನಡೆಸಿ, ಅನುಭವ ಮಂಟಪವನ್ನು ಸ್ಥಾಪಿಸಿ ತಮ್ಮ ವಚನಗಳ ಮೂಲಕ ಇಡೀ ನಾಡಿಗೆ ಪ್ರಕಟ ಮಾಡಿ ದಿಟ್ಟ ಹೋರಾಟ ನಡೆಸಿದ್ದಾರೆ. ಪ್ರತಿನಿತ್ಯವೂ ಅವರ ತತ್ವಗಳನ್ನು ಸ್ಮರಣೆ ಮಾಡಬೇಕು ಎಂದರು. ಜಿಪಂ ಸಿ.ಇ.ಓ. ಶೇಖ್ ತನ್ವಿರ್ ಆಸೀಫ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್. ಯತೀಶ್, ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಂಘ- ಸಂಸ್ಥೆಗಳ ಮುಖ್ಯಸ್ಥರುಗಳು ಉಪಸ್ಥಿತರಿದ್ದರು.

# ವಿಶ್ವ ಗುರು ಬಸವಣ್ಣನವರ ತತ್ವ ಆದರ್ಶಗಳನ್ನು ಪಾಲಿಸಬೇಕು

ರಾಮನಗರ: ವಿಶ್ವಗುರು ಬಸವಣ್ಣನವರ ತತ್ವ ಆದರ್ಶಗಳನ್ನು ನಾವೆಲ್ಲರೂ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಇಕ್ಬಾಲ್ ಹುಸೇನ್ ಅವರು ತಿಳಿಸಿದರು.

ಅವರು ಇಂದು (ಫೆ. 17ರ ಶನಿವಾರ) ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಭಾವಚಿತ್ರ ಅನಾವರಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜಾತಿ, ಮತ, ಲಿಂಗಗಳ ಬೇಧವನ್ನು ತಿರಸ್ಕರಿಸಿದ ಬಸವಣ್ಣನವರು ಸಾಮಾಜಿಕ ಕ್ರಾಂತಿಗೆ ಕಾರಣವಾದರು. ಬಸವಣ್ಣನವರನ್ನು ಜಗಜ್ಯೋತಿ ಬಸವೇಶ್ವರ, ಕ್ರಾಂತಿಯೋಗಿ ಬಸವಣ್ಣ, ಭಕ್ತಿ ಭಂಡಾರಿ ಬಸವಣ್ಣ, ಮಹಾ ಮಾನವತಾ ವಾದಿ ಎಂದೂ ಕರೆಯಲಾಗುತ್ತದೆ. ಮಾನವಿಯತೆ, ಕಾಯಕ ನಿಷ್ಠೆ ಧರ್ಮದ ಬುನಾದಿಯಾಗಬೇಕು ಎಂದು ಬಲವಾಗಿ ನಂಬಿದ್ದರು ಎಂಬ ಬಸವಣ್ಣನವರ ವಿಚಾರಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ವಿದ್ವಾನ್ ಚಂದ್ರಶೇಖರ್ ಮಾತನಾಡಿ, ಬಸವಣ್ಣನವರು ಮಹಾನ್ ಸುಧಾರಕರಾಗಿ ಜನರಿಗೆ ಸೇವೆ ಸಲ್ಲಿಸುವುದರ ಜೊತೆಗೆ, ಅವರು ದಕ್ಷಿಣ ಭಾರತದಲ್ಲಿ ದಕ್ಷಿಣ ಕಲಚೂರಿ ಸಾಮ್ರಾಜ್ಯದ ಪ್ರಧಾನ ಮಂತ್ರಿಯಾಗಿ ಸೇವೆ ಸಲ್ಲಿಸಿದರು ಮತ್ತು ವಚನ ಸಾಹಿತ್ಯವನ್ನು ಪರಿಚಯಿಸುವ ಮೂಲಕ ಸಾಹಿತ್ಯ ಕ್ರಾಂತಿಯನ್ನು ಹುಟ್ಟುಹಾಕಿದರು.

ಎಲ್ಲಾ ಧರ್ಮಗಳಿಗೂ ದಯವೇ ಮೂಲವಾಗಬೇಕು. ಮಾನವನ ಎಲ್ಲಾ ಚಟುವಟಿಕೆಗಳಿಗೆ ದಯವೇ ಆಧಾರವಾಗಬೇಕು. ಎಲ್ಲಾ ಪ್ರಾಣಿಗಳಲ್ಲಿ ದಯೆಯನ್ನು ತೋರಿಸುವುದೇ ಧರ್ಮದ ಮೂಲ ಸೂತ್ರವಾಗಬೇಕು. ಇದು ಬಸವಣ್ಣನವರ ಅಮೃತವಾಣಿ ಮತ್ತು ಹಲವು ವಿಚಾರಗಳನ್ನು ತಿಳಿಸಿದರು. ನಗರಸಭೆಯ ಅಧ್ಯಕ್ಷರಾದ ವಿಜಯಕುಮಾರಿ, ಜಿಲ್ಲಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್, ಅಪರ ಜಿಲ್ಲಾಧಿಕಾರಿ ಶಿವಾನಂದ ಮೂರ್ತಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಚಿಕ್ಕ ಸುಬ್ಬಯ್ಯ, ಉಪವಿಭಾಗಾಧಿಕಾರಿ ಬಿನೋಯ್, ರಾಮನಗರ ತಹಶೀಲ್ದಾರ್ ತೇಜಸ್ವಿನಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರಮೇಶ್ ಬಾಬು ಟಿ.ಜಿ., ವಿವಿಧ ಸಮುದಾಯದ ಮುಖಂಡರುಗಳು, ಸಂಘಸಂಸ್ಥೆಯ ಪದಾಧಿಕಾರಿಗಳು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.



# ಪಲ್ಸ್ ಪೋಲಿಯೋ ಲಸಿಕೆ ಹಾಕಲು ಸಕಲ ಸಿದ್ದತೆ

**ಕೋಲಾರ:** ಪೋಲಿಯೋ ನಿರ್ಮೂಲನೆಗಾಗಿ ಮಾರ್ಚ್ 03 ರಿಂದ ನಾಲ್ಕು ದಿನಗಳು ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಾರಾಯಣಸ್ವಾಮಿ ಅವರು ತಿಳಿಸಿದರು.

ಇಂದು ತಾಲ್ಲೂಕು ಪಂಚಾಯತ್ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಪಲ್ಸ್ ಪೋಲಿಯೋ ಕುರಿತ ಸಭೆಯಲ್ಲಿ ಮಾತನಾಡಿದ ಅವರು, ಮೊದಲನೇ ದಿನ ಪೋಲಿಯೋ ಬೂತ್‌ಗಳಲಿ ಮತ್ತು ಆನಂತರದ ಎರಡು ಮೂರು ದಿನಗಳಲ್ಲಿ ಮನೆಗಳಿಗೆ ಬೇಟಿ ನೀಡಿ 05 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಹನಿ ಹಾಕಲಾಗುವುದು. 250 ರಿಂದ 300 ಮಕ್ಕಳಿಗೆ ಬೂತ್‌ಗಳಲ್ಲಿ ಪಲ್ಸ್ ಪೋಲೀಯೋ ಲಸಿಕೆಯನ್ನು ಹಾಕಲಾಗುವುದು. ತಾಲ್ಲೂಕಿನ ಎಲ್ಲಾ ಮಕ್ಕಳಿಗೆ ಉಳಿದ 3 ರಿಂದ 4 ದಿನಗಳ ಕಾಲ ಮನೆಮನೆಗೆ ಭೇಟಿ ನೀಡಿ ವಿಶೇಷ ತಂಡ ಲಸಿಕೆ ಹಾಕಲಿದೆ. 640 ವಿಶೇಷ ತಂಡಗಳು ಇದ್ದರು ಎಂದು ಹೇಳಿದರು.

ಕೋಲಾರ ತಾಲ್ಲೂಕಿನಲ್ಲಿ ಈ ವರ್ಷ 37374 ಮಕ್ಕಳಿಗೆ 163 ಬೂತ್‌ಗಳಲ್ಲಿ 10 ಸಂಚಾರಿ ಕೇಂದ್ರಗಳಲ್ಲಿ ಮೊದಲನೇ ದಿನ ಪೋಲಿಯೋ ಹನಿ ಹಾಕಲಾಗುವುದು. ಆನಂತರ ಎರಡು ಮೂರು ದಿನಗಳಲ್ಲಿ ತಾಲ್ಲೂಕು ವ್ಯಾಪ್ತಿಯಲ್ಲಿ ಮಕ್ಕಳಿಗೆ ಮನೆಮನೆಗೆ ಬೇಟಿ ನೀಡಿ ಪೋಲಿಯೋ ಹನಿ ಹಾಕಲು ಸಿದ್ದತೆ ನಡೆಸಲಾಗಿದೆ ಎಂದರು. ಪೋಲಿಯೋ ಲಸಿಕೆ ಅಭಿಯಾನದಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ನರ್ಸಿಂಗ್ ವಿದ್ಯಾರ್ಥಿಗಳು ಮತ್ತು ಆರೋಗ್ಯ ಸಿಬ್ಬಂದಿ ಪಾಲ್ಗೊಳ್ಳಲಿದ್ದಾರೆ. ಒಟ್ಟು 37 ಮೇಲ್ವಿಚಾರಕರು ಮೇಲ್ವಿಚಾರಣೆ ನಡೆಸಲಿದ್ದಾರೆ ಎಂದು ತಿಳಿಸಿದರು. ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಪಂಚಾಯತ್ ರಾಜ್ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ನಗರಾಭಿವೃದ್ಧಿ ಇಲಾಖೆ ಹಾಗೂ ಸ್ವಯಂ ಸೇವಾ ಸಂಸ್ಥೆಗಳು ಪಾಲ್ಗೊಳ್ಳಲಿವೆ ಎಂದು ವಿವರಿಸಿದರು.



ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮುನಿಯಪ್ಪ, ತಾಲ್ಲೂಕು ಶಿಶು ಅಭಿವೃದ್ಧಿ ಅಧಿಕಾರಿ ವಿನೋದ್ ರಾಜ್, ಶಿಕ್ಷಣ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ್ ಮತ್ತು ರೋಟರಿ ಸಂಸ್ಥೆಯ ಪದಾಧಿಕಾರಿಗಳು ಸೇರಿದಂತೆ ಮತ್ತಿತರರು ಹಾಜರಿದ್ದರು.

## ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕ ಅಳವಡಿಸಲು ಮೇ 31 ರವರೆಗೆ ಕಾಲಾವಕಾಶ

**ಬೆಂಗಳೂರು:** ರಾಜ್ಯದಲ್ಲಿ 1ನೇ ಏಪ್ರಿಲ್ 2019 ಕ್ಕಿಂತ ಮೊದಲು ನೋಂದಾಯಿಸಲ್ಪಟ್ಟ ಹಳೆಯ ಎಲ್ಲಾ (ಹಳೆಯ / ಅಸ್ತಿತ್ವದಲ್ಲಿರುವ ವಾಹನಗಳು) ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳು, ಲಘು ಮೋಟಾರು ವಾಹನಗಳು, ಪ್ರಯಾಣಿಕ ಕಾರುಗಳು, ಮಧ್ಯಮ ಮತ್ತು ಭಾರೀ ವಾಣಿಜ್ಯ ವಾಹನಗಳು, ಟ್ರೈಲರ್, ಟ್ರ್ಯಾಕ್ಟರ್ ಇತ್ಯಾದಿ ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕಗಳನ್ನು (High Security Registration Plates - HSRP) ಅಳವಡಿಸುವುದು ಕಡ್ಡಾಯವಾಗಿದ್ದು, ಹೆಚ್‌ಎಸ್‌ಆರ್ಪಿ ಅಳವಡಿಕೆಗೆ ಫೆಬ್ರವರಿ 17 ರವರೆಗೆ ನೀಡಲಾಗಿದ್ದ ಕಾಲಾವಕಾಶವನ್ನು ಮೇ 31 ರವರೆಗೆ ಅವಧಿಯನ್ನು ವಿಸ್ತರಿಸಲಾಗಿದೆ. ಸಾರ್ವಜನಿಕರು ಆನ್‌ಲೈನ್ ಮೂಲಕ ಹೆಚ್.ಎಸ್. ಆರ್.ಪಿ. ಪಡೆಯಲು ತೊಂದರೆಗಳಾದಲ್ಲಿ ದೂರವಾಣಿ ಸಂಖ್ಯೆ 94498 63429, 94498 63429 ಮೂಲಕ ಸಹಾಯವಾಣಿಯನ್ನು ಕಛೇರಿ ಕಾರ್ಯದ ಸಮಯ ಬೆಳಿಗ್ಗೆ 10 ರಿಂದ ಸಂಜೆ 5.30 ರವರೆಗೆ ಸಂಪರ್ಕಿಸಬಹುದಾಗಿದೆ. ಸಾರ್ವಜನಿಕರು https://transport.karnataka.gov.in ಅಥವಾ www.siam.in ಗೆ ತಮ್ಮ ವಾಹನಗಳಿಗೆ ನೋಂದಣಿ ಫಲಕಗಳನ್ನು ಅಳವಡಿಸಿಕೊಳ್ಳಲು ಆನ್‌ಲೈನ್ ಮೂಲಕ ವಿವರಗಳನ್ನು ಒದಗಿಸಿ ಹೆಚ್‌ಎಸ್‌ಆರ್ಪಿ ಅಳವಡಿಸುವ ದಿನಾಂಕ, ವಾಹನ ಡೀಲರ್ ಕೇಂದ್ರದ ಹೆಸರು ಮತ್ತು ವಿಳಾಸವನ್ನು ಖಚಿತ ಪಡಿಸಿಕೊಳ್ಳುವಂತೆ ತಿಳಿಸಲಾಗಿದೆ. ಈ ವೆಬ್-ಸೈಟ್ ಮೂಲಕ ಹೆಚ್‌ಎಸ್‌ಆರ್ಪಿ ಅಳವಡಿಸಿದ್ದಲ್ಲಿ ಮಾತ್ರ ಹೆಚ್‌ಎಸ್ ಆರ್ಪಿ ನೋಂದಣಿ ಫಲಕಗಳು ಮಾನ್ಯತೆ ಹೊಂದಿರುತ್ತವೆ. ಇನ್ನಿತರೆ ಯಾವುದೇ ವೆಬ್ ಪೋರ್ಟಲ್ ಉಪಯೋಗಿಸಿ ಬುಕ್ ಮಾಡಿದ್ದಲ್ಲಿ ಅವುಗಳು ಅನಧಿಕೃತ ನೋಂದಣಿ ಫಲಕಗಳಾಗುತ್ತವೆ.

# ಸರ್ಕಾರಿ ನೌಕರ ಸಂಘದ ಜಿಲ್ಲಾ ಮಟ್ಟದ ಕ್ರೀಡಾಕೂಟ

**ಕೋಲಾರ:** ಮಾರ್ಚ್ 1,2 ರಂದು ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಅಪರ ಜಿಲ್ಲಾಧಿಕಾರಿ ಡಾ. ಶಂಕರ ಮಣಿಕ್ಯಾಳ್ ಅವರು ತಿಳಿಸಿದರು.

ಜಿಲ್ಲಾಡಳಿತದ ಸಹಯೋಗದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ಪ್ರತಿ ವರ್ಷದಂತೆ ಪ್ರಸಕ್ತ ಸಾಲಿನ ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸುತ್ತಿದ್ದು, ಬರುವ ಮಾರ್ಚ್ 1 ಮತ್ತು 2ರಂದು ಪವನ್ ಕಾಲೇಜು ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ಕ್ರೀಡಾಕೂಟ ಆಯೋಜಿಸಲು ತೀರ್ಮಾನಿಸಲಾಗಿದೆ. ಜಿಲ್ಲೆಯ ಪ್ರತಿ ಸರ್ಕಾರಿ ನೌಕರರು ಈ ಕ್ರೀಡಾಕೂಟದಲ್ಲಿ ತಪ್ಪದೆ ಭಾಗವಹಿಸಿ, ಯಶಸ್ವಿಗೊಳಿಸಬೇಕೆಂದು ಎಡಿಸಿ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಸಭೆಯಲ್ಲಿ ಎಡಿಸಿ ಯವರು 2023-24ನೇ ಸಾಲಿನ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಜರುಗಿಸುವ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವಿವಿಧ ಇಲಾಖೆಗಳ ಪ್ರಾಯೋಜಕತ್ವದಲ್ಲಿ ಈ ಕ್ರೀಡಾಕೂಟವನ್ನು ಸಂಘಟಿಸಿ ಯಶಸ್ವಿಗೊಳಿಸಲಾಗುವುದು ಎಂದು ತಿಳಿಸಿದರು. ಅಧಿಕಾರಿಗಳು ಕೆಲಸದ ಒತ್ತಡ ಮತ್ತು ಸಮಯ ಅಭಾವದಿಂದ ದೈಹಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಂದ ದೂರ ಉಳಿಯುತ್ತಾರೆ. ಇದರಿಂದ ದೈಹಿಕ ಮತ್ತು ಮಾನಸಿಕ ಸಮಸ್ಯೆಗಳು ಉಂಟಾಗುತ್ತವೆ. ಸರ್ಕಾರಿ ನೌಕರರಲ್ಲಿ ಚೈತನ್ಯ ತುಂಬಲು ರಾಜ್ಯ ಸರ್ಕಾರವು ಪ್ರತಿ ವರ್ಷ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸುತ್ತದೆ. ಜಿಲ್ಲೆಯ ಪ್ರತಿ ನೌಕರ ಈ ಕ್ರೀಡಾಕೂಟದಲ್ಲಿ ತಪ್ಪದೇ ಭಾಗವಹಿಸಬೇಕೆಂದು ಅವರು ಹೇಳಿದರು.



ನೌಕರರು ತಮ್ಮ ಬಾಲ್ಯದ ದಿನಗಳಲ್ಲಿ ಮತ್ತು ಶಾಲಾ ಕಾಲೇಜು ದಿನಗಳಲ್ಲಿ ಅನೇಕ ಪ್ರತಿಭೆಗಳನ್ನು ಪ್ರದರ್ಶಿಸುತ್ತಾರೆ. ಆದರೆ ಸರ್ಕಾರಿ ಸೇವೆಗೆ ಸೇರಿದ ತಕ್ಷಣ ಅವುಗಳನ್ನು ಮರೆತಂತೆ ವರ್ತಿಸುತ್ತಾರೆ. ಇದು ನಿವೃತ್ತಿಯ ನಂತರ ಮತ್ತಷ್ಟು ಅವರನ್ನು ಏಕಾಂಗಿಯಾಗಿ ಮಾಡುತ್ತದೆ. ಆದ್ದರಿಂದ ಪ್ರತಿ ಸರ್ಕಾರಿ ನೌಕರನು ತನ್ನಲ್ಲಿರುವ ಸುಪ್ತ ಪ್ರತಿಭೆಗಳನ್ನು ಪ್ರದರ್ಶಿಸಬೇಕು. ಇದಕ್ಕೆ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ವೇದಿಕೆಯಾಗಿದೆ ಎಂದು ಅವರು ಹೇಳಿದರು.

ಜಿಲ್ಲಾ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಿಗೆ ಅಗತ್ಯವಿರುವ ಸೌಲಭ್ಯಗಳನ್ನು ಸಂಬಂಧಿಸಿದ ಇಲಾಖೆಗಳು ಪೂರೈಸಬೇಕು. ಉತ್ತಮ ರೀತಿಯಲ್ಲಿ ಕಾರ್ಯಕ್ರಮ ಸಂಘಟಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಲೋಕಸಭೆ ಸಾರ್ವತ್ರಿಕ ಚುನಾವಣೆ ಬರುತ್ತಿರುವುದರಿಂದ ಎಲ್ಲ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ವಿವಿಧ ರೀತಿಯ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕಾಗುತ್ತದೆ. ಆದರಿಂದ ಜಿಲ್ಲಾ ಮಟ್ಟದ ಈ ಕ್ರೀಡಾಕೂಟವು ಉತ್ಸಾಹ, ಉತ್ತೇಜನ ನೀಡಲಿ ಎಂದು ಅವರು ತಿಳಿಸಿದರು.

# ದಿನನಿತ್ಯದ ಜೀವನಕ್ಕೆ ಬಸವಣ್ಣನವರ ವಚನಗಳು ದಾರಿದೀಪ

**ಕೋಲಾರ:** ಸಮಾನತೆಯ ಹರಿಕಾರ ಸಹಬಾಳ್ವೆಯ ಸಿದ್ಧಾಂತವನ್ನು ಅನುಸರಿಸಿದ ವಿಶ್ವಕ್ಕೆ ಗುರುವಾದ ಬಸವಣ್ಣನವರ ನಡೆ-ನುಡಿ ವಿಚಾರಧಾರೆ ಅವರ ವಚನಗಳು ಅಂದು-ಇಂದು ಎಂದೆಂದಿಗೂ ಪ್ರಸ್ತುತ ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಕನ್ನಡ ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಸುವರ್ಣ ಕನ್ನಡ ಭವನದಲ್ಲಿ ಆಯೋಜಿಸಿಲಾದ ಬಸವಣ್ಣನವರ ಭಾವಚಿತ್ರವನ್ನು ಉದ್ಘಾಟಿಸಿ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು. ರಾಜ್ಯ ಸರ್ಕಾರವು ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದ್ದು, ಪತ್ರಿಯೊಂದು ಕಛೇರಿಯಲ್ಲಿ ಇಂದಿನಿಂದ ಅಧಿಕೃತವಾಗಿ ಬಸವಣ್ಣನವರ ಭಾವಚಿತ್ರವನ್ನು ಅಳವಡಿಸಬೇಕು. 12ನೇ ಶತಮಾನದ ಜಗಜ್ಯೋತಿ ಕ್ರಾಂತಿಯೋಗಿ ಭಕ್ತಿ ಭಂಡಾರಿ ಬಸವಣ್ಣನವರ ಚಿಂತನೆಗಳು, ವೈಚಾರಿಕತೆ ಇಂದಿಗೂ ಪ್ರಸ್ತುತವಾಗಿದೆ. ಜಾತಿ, ಲಿಂಗತಾರತಮ್ಯ, ಸಾಮಾಜಿಕ ಅಸಮಾನತೆಯನ್ನು ಹೋಗಲಾಡಿಸಿ ಹಾಗೂ ಸಮಾಜದಲ್ಲಿ ಬದಲಾವಣೆಗಳನ್ನು ತಂದು ಬಸವಣ್ಣನವರು ವಿಶ್ವಮಾನ ಸಂದೇಶವನ್ನು ಸಾರಿದ್ದಾರೆ.

ನಮ್ಮ ಜೀವನದಲ್ಲಿ ಅವರ ವಚನಗಳನ್ನು ಅಳವಡಿಸಿಕೊಂಡರೆ ಬದುಕು ಸಾರ್ಥಕವಾಗುತ್ತದೆ ಎಂದರು. ಸಮಾಜಿಕ ರಾಜಕೀಯ, ಆರ್ಥಿಕ ಹಾಗೂ ಧಾರ್ಮಿಕ ಸಮಾನತೆಗಾಗಿ ಹೋರಾಡಿದವರು ಸಹಬಾಳ್ವೆಯ ಸಿದ್ಧಾಂತವನ್ನು ಲೋಕಕ್ಕೆ ಸಾರಿದವರು ವಚನಗುರು ಬಸವಣ್ಣನವರು ಎಂದು ಬಣ್ಣಿಸಿದರು.



ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪದ್ಮ ಬಸವಂತಪ್ಪ, ಅಪರ ಜಿಲ್ಲಾಧಿಕಾರಿ ಡಾ. ಶಂಕರ್ ವಣಿಕ್ಯಾಳ್, ಜಿಲ್ಲಾ ಉಪವಿಭಾಗಧಿಕಾರಿ ವೆಂಕಟಲಕ್ಷ್ಮೀ, ತಹಶೀಲ್ದಾರ್ ಹರ್ಷವರ್ದನ್, ನಗರಸಭೆ ಆಯುಕ್ತರಾದ ಶಿವಾನಂದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಗೀತಾ. ಆರ್, ಕುಮಾರವ್ಯಾಸ ಪ್ರಶಸ್ತಿ ಪುರಸ್ಕೃತರು ಹರಿಕಥಾ ವಿದ್ವಾನ್, ಜಿಲ್ಲಾ ವಚನ ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ಎಲ್. ಆರ್. ಜ್ಞಾನಮೂರ್ತಿ-ಬಸವಣ್ಣನವರು ಕುರಿತು ಉಪನ್ಯಾಸ ನೀಡಿದರು. ಆಕಾಶವಾಣಿ ಮತ್ತು ಕರ್ನಾಟಕ ರಾಜ್ಯ ಜಾನಪದ ಅಕಾಡಮಿ ಪ್ರಶಸ್ತಿ ಪುರಸ್ಕೃತರಾದ ಡಿ.ಆರ್. ರಾಜಪ್ಪ ಮತ್ತು ತಂಡದವರು ಬಸವಣ್ಣನವರ ವಚನಗಳನ್ನು ಪ್ರಸ್ತುತ ಪಡಿಸಿದರು. ಶಾಲಾ ಮಕ್ಕಳು ಭಾಗವಹಿಸಿದ್ದರು.

## ಹಿಂದುಳಿದ ಸಮುದಾಯಗಳ ಮಕ್ಕಳಿಗೆ ಕಣ್ಣಿನ ಚಿಕಿತ್ಸೆ

ಜಾನ್ಸನ್ ಜಾನ್ಸನ್ ಸಂಸ್ಥೆ ಮತ್ತು ಅಂತರಾಷ್ಟ್ರೀಯ ಮಾನವೀಯ ಸ್ವಯಂಸೇವಕ ಸಂಸ್ಥೆಗಳಲ್ಲಿಅಗ್ರಗಣ್ಯವಾಗಿರುವ ಲಯನ್ಸ್ ಕ್ಲಬ್ಸ್ ಇಂಟರ್ ನ್ಯಾಷನಲ್ ಫೌಂಡೇಶನ್ (ಎಲ್ಐಎಫ್) ಸಹಯೋಗದಲ್ಲಿ ಸೈಟ್ ಫಾರ್ ಕಿಡ್ಸ್ ಉಪಕ್ರಮವುಮುಂದುವರಿದಿದ್ದು, ಮುಂದಿನ ಐದು ವರ್ಷಗಳಲ್ಲಿ ಭಾರತದಲ್ಲಿ 7 ದಶಲಕ್ಷಕ್ಕೂ ಹೆಚ್ಚು ಮಕ್ಕಳಿಗೆ ಕಣ್ಣಿನ ಚಿಕಿತ್ಸೆ ಒದಗಿಸುವ ಗುರಿಯನ್ನುಇಟ್ಟುಕೊಂಡಿದೆ. ಸೈಟ್ ಫಾರ್ ಕಿಡ್ಸ್ ಉಪಕ್ರಮವು ಕಡಿಮೆ ಆದಾಯ ಹೊಂದಿರುವ ಮತ್ತು ಹಿಂದುಳಿದ ಸಮುದಾಯದ ಮಕ್ಕಳಿಗೆ ಸಮಗ್ರ ಕಣ್ಣಿನಚಿಕಿತ್ಸೆ ಒದಗಿಸುವ ಉದ್ದೇಶ ಸಾಕಾರಕ್ಕಾಗಿ ದುಡಿಯುತ್ತಿದೆ. 2024ರಲ್ಲಿ 500ಕ್ಕೂ ಹೆಚ್ಚು ಮಕ್ಕಳ ಮೊದಲ ಸ್ಕ್ರೀನಿಂಗ್ ಕೋಲ್ಕತ್ತಾದಲ್ಲಿ ನಡೆಯಿತು. ಆ ಮೂಲಕ ಭಾರತದಲ್ಲಿ ಒಟ್ಟು ದೃಷ್ಟಿ ಪರೀಕ್ಷೆಗಳಸಂಖ್ಯೆ 28 ಮಿಲಿಯನ್ಗೆ ತಲುಪಿದಂತಾಗಿದೆ. ಆರಂಭಿಕ ಪತ್ತೆ ಮತ್ತು ಆರೈಕೆಯನ್ನು ಮಾಡುವ ಸಲುವಾಗಿ 75,000ಕ್ಕೂ ಹೆಚ್ಚು ಶಿಕ್ಷಕರಿಗೆ ಕಣ್ಣಿನ ಆರೋಗ್ಯದ ಬಗ್ಗೆ ತರಬೇತಿ ನೀಡಲಾಗಿದೆ. ಇದರಿಂದ ಈ ಕಾರ್ಯಕ್ರಮದ ಪರಿಣಾಮ ಹೆಚ್ಚುಗೊಳ್ಳಲಿದೆ. ಮಕ್ಕಳು ತಮ್ಮ ಸುತ್ತಲಿರುವ ಪ್ರಪಂಚವನ್ನು ಅರ್ಥಮಾಡಿಕೊಳ್ಳುವಲ್ಲಿ ದೃಷ್ಟಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ. ಸರಿಹೊಂದದ ದೃಷ್ಟಿ ಸಮಸ್ಯೆಯು ಮಗುವಿನ ಕಲಿಯುವ ಮತ್ತು ಅಭಿವೃದ್ಧಿ ಹೊಂದುವ ಸಾಮರ್ಥ್ಯದ ಮೇಲೆ ಪರಿಣಾಮ ಬೀರುತ್ತದೆ. ನಮ್ಮ ಸುದೀರ್ಘ ಕಾಲದ ಕಾರ್ಪೊರೇಟ್ ಪಾಲುದಾರರಾದ ಜಾನ್ಸನ್ ಆಂಡ್ ಜಾನ್ಸನ್ ಜೊತೆಯಲ್ಲಿ, ಮುಂದಿನ ಐದು ವರ್ಷಗಳಲ್ಲಿ ಭಾರತದಲ್ಲಿ 7 ಮಿಲಿಯನ್ ಮಕ್ಕಳ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಸಾಗಲು ನಾವು ಬದ್ಧರಾಗಿದ್ದೇವೆ ಎಂದು ಎಲ್ಐಎಫ್ ಅಧ್ಯಕ್ಷ ಬ್ರಿಯಾನ್ ಶೀಹನ್ ತಿಳಿಸಿದ್ದಾರೆ. ಸೈಟ್ ಫಾರ್ ಕಿಡ್ಸ್ ಉಪಕ್ರಮವು ಕೇವಲ ಮಕ್ಕಳ ಜೀವನವನ್ನು ಪರಿವರ್ತಿಸಲು ಸಹಾಯ ಮಾಡುವುದಷ್ಟೇ ಅಲ್ಲ, ಜೊತೆಗೆ ಇಡೀ ಸಮುದಾಯದ ಪರಿವರ್ತನೆ ಮಾಡುತ್ತದೆ. ಪೋಷಕರು ಸಮಾಧಾನದಿಂದ, ಶಿಕ್ಷಕರು ಮಾಹಿತಿ ಹೊಂದುವ ಮೂಲಕ, ಸಮುದಾಯಗಳು ತಮ್ಮನ್ನುತೊಡಗಿಸಿಕೊಳ್ಳುವ ಮೂಲಕ ಏಕಕಾಲದಲ್ಲಿ ಒಂದು ಮಗುವಿಗೆ ಜಗತ್ತನ್ನು ಸ್ಪಷ್ಟವಾಗಿ ನೋಡಲು ಮತ್ತು ಅವರ ಅತ್ಯುತ್ತಮ ಸಾಮರ್ಥ್ಯವನ್ನುಸಾರ್ಥಕಪಡಿಸಲು ಸಹಾಯ ಮಾತ್ತಿದ್ದಾರೆ'' ಎಂದೂ ಅವರು ಹೇಳಿದ್ದಾರೆ. ಈ ಮಕ್ಕಳ ಜೀವನದಲ್ಲಿ ಬದಲಾವಣೆಯನ್ನು ತರಲು ನಾವು ಹೆಮ್ಮೆಪಡುತ್ತೇವೆ ಮತ್ತುನಮ್ಮ ನಿರಂತರ ಸಹಯೋಗದ ಮೂಲಕ ಭಾರತ ಮತ್ತು ಏಷ್ಯಾ ಪೆಸಿಫಿಕ್ ವಲಯದಲ್ಲಿ ಇನ್ನೂ ಹೆಚ್ಚಿನ ಜನರ ಮೇಲೆ ಸಕಾರಾತ್ಮಕ ಪರಿಣಾಮಬೀರಲು ಬಯಸುತ್ತೇವೆ'' ಎಂದು ಜಾನ್ಸನ್ ಆಂಡ್ ಜಾನ್ಸನ್ ಮೆಡ್ಟೆಕ್ ನ ಏಷ್ಯಾ ಪೆಸಿಫಿಕ್ ವಿಷನ್ ಅಧ್ಯಕ್ಷ ಕ್ರಿಸ್ಟೋಫ್ ವೊನ್ವಿಲ್ಲರ್ ಹೇಳಿದರು.

## ಚೋಕೋ ಚಿಪ್ ಕುಕ್ಕೀಸ್

ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಬೆಣ್ಣೆ- 100 ಗ್ರಾಂ, ಚೋಕೋ ಚಿಪ್ಸ್ - 2 ಕಪ್ , ಬ್ರೌನ್ ಶುಗರ್ - 1 ಕಪ್ , ಸಕ್ಕರೆ - ಅರ್ಧ ಕಪ್, ಮೈದಾ ಹಿಟ್ಟು - 2 ಕಪ್, ಬೇಕಿಂಗ್ ಸೋಡಾ - 1 ಚಮಚ, ವೆನಿಲ್ಲಾ ಎಸೆನ್ಸ್- 2 ಚಮಚ, ಉಪ್ಪು - ಅರ್ಧ ಚಮಚ, ಮೊಟ್ಟೆ - 2

### ಮಾಡುವ ವಿಧಾನ

ಮೊದಲಿಗೆ ಒಂದು ಪಾತ್ರೆಗೆ ಬೆಣ್ಣೆ ಹಾಕಿಕೊಂಡು ಅದಕ್ಕೆ ಬ್ರೌನ್ ಶುಗರ್, ಸಕ್ಕರೆ ಹಾಕಿಕೊಂಡು ಗಂಟಿಲ್ಲದಂತೆ ಚನ್ನಾಗಿ ತಿರುವಿಕೊಳ್ಳಿ. ಬೆಣ್ಣೆ ತುಂಬಾ ಗಟ್ಟಿಯಾಗಿರಬಾರದು. ಈ ಮಿಶ್ರಣಕ್ಕೆ ಎರಡು ಮೊಟ್ಟೆಯನ್ನು ಒಡೆದು ಹಾಕಿಕೊಳ್ಳಿ. ನಂತರ ಇದಕ್ಕೆ ವೆನಿಲ್ಲಾ ಎಸೆನ್ಸ್ ಹಾಕಿಕೊಂಡು ಮತ್ತೊಮ್ಮೆ ಚನ್ನಾಗಿ ತಿರುವಿಕೊಳ್ಳಿ. ಇನ್ನೊಂದು ಬೌಲ್ನಲ್ಲಿ ಮೈದಾ ಹಿಟ್ಟನ್ನು ಹಾಕಿಕೊಂಡು ಅದಕ್ಕೆ ಉಪ್ಪು ಮತ್ತು ಬೇಕಿಂಗ್ ಸೋಡಾ ಹಾಕಿಕೊಂಡು ಚನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ನಂತರ ಮೈದಾ ಮಿಶ್ರಣವನ್ನು ಸ್ವಲ್ಪ ಸ್ವಲ್ಪವೇ ಮೊಟ್ಟೆ ಮಿಶ್ರಣಕ್ಕೆ ಹಾಕಿಕೊಂಡು ಗಂಟಿಲ್ಲದಂತೆ ಮಿಕ್ಸ್ ಮಾಡಿಕೊಳ್ಳಿ. ಬಳಿಕ ಈ ಮಿಶ್ರಣಕ್ಕೆ ಚೋಕೋ ಚಿಪ್ಸ್ ಹಾಕಿಕೊಂಡು ಚಿಪ್ಸ್ ಮಿಶ್ರಣಕ್ಕೆ ಹೊಂದಿಕೊಳ್ಳುವಂತೆ ತಿರುವಿಕೊಳ್ಳಿ. ಈಗ ಒಂದು ಚಮಚದ ಸಹಾಯದಿಂದ ಸ್ವಲ್ಪ ಸ್ವಲ್ಪವೇ ಈ ಮಿಶ್ರಣವನ್ನು ತೆಗೆದುಕೊಂಡು ಅಂಗೈಯಲ್ಲಿ ಬಿಸ್ಕೆಟ್ ಗಾತ್ರ ಮಾಡಿಕೊಂಡು ಒಂದು ಬೇಕಿಂಗ್ ಟ್ರೇಯಲ್ಲಿ ಹಾಕಿಕೊಳ್ಳಿ. ನಂತರ ಓವನ್ 180 ಡಿಗ್ರಿ ಬಿಸಿಗಿಟ್ಟುಕೊಂಡು ಅದರಲ್ಲಿ 15 ನಿಮಿಷ ಬೇಯಿಸಿಕೊಂಡರೆ ಬಿಸಿ ಬಿಸಿ ಚೋಕೋ ಚಿಪ್ ಕುಕ್ಕೀಸ್ ತಿನ್ನಲು ರೆಡಿ.

## ಪುಷ್ಪ-3 ಕೂಡ ಬರುತ್ತಂತೆ



ಪ್ರಸ್ತುತ ಬರ್ಲಿನ್ ಅಂತರರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಪುಷ್ಪಾ: ದಿ ರೈಸ್ ಅಕಾ ಪುಷ್ಪಾ 1 ಚಿತ್ರದ ಪ್ರದರ್ಶನಕ್ಕಾಗಿ ಭಾಗವಹಿಸುತ್ತಿರುವ ತೆಲುಗು ಸೂಪರ್ ಸ್ಟಾರ್ ಅಲ್ಲು ಅರ್ಜುನ್, ಪುಷ್ಪಾ 2 ಅಥವಾ ಪುಷ್ಪ: ದಿ ರೂಲ್ ಈ ಸ್ವಾತಂತ್ರ್ಯ ದಿನದಂದು ಬಿಡುಗಡೆಯಾಗಲಿರುವ ಫ್ರ್ಯಾಂಚೈಸ್ನ ಮೂರನೇ ಕಂತಿನ ಬಗ್ಗೆ ಸುಳಿವು ನೀಡಿದರು. ಅಲ್ಲದೇ ಪುಷ್ಪ-2 ಚಿತ್ರ ಆಗಸ್ಟ್.15, 2024ರ ಸ್ವಾತಂತ್ರ್ಯ ದಿನಾಚರಣೆಯಂದು ಬಿಡುಗಡೆಯಾಗುತ್ತಿದ್ದು, ಈಗ ಪುಷ್ಪ-3 ಬರುವ ಬಗ್ಗೆ ಸುಳಿವು ನೀಡಿದ್ದಾರೆ. ಬರ್ಲಿನೇಲ್ 2024 ಅಥವಾ ಬರ್ಲಿನ್ ಇಂಟರ್ನ್ಯಾಷನಲ್ ಫಿಲ್ಮ್ ಫೆಸ್ಟಿವಲ್ (ಫೆಬ್ರವರಿ 15-25) ನ ಗ್ಲಿಟ್ಜ್ ಮತ್ತು ಗ್ಲಾಮರ್ ನಡುವೆ, ಅಲ್ಲು ಅರ್ಜುನ್ ಪುಷ್ಪಾ ಬ್ರಹ್ಮಾಂಡವನ್ನು ವಿಸ್ತರಿಸುವ ತಮ್ಮ ಯೋಜನೆಗಳನ್ನು ಪ್ರಕಟಣೆಗೆ ತಿಳಿಸಿದರು. ನೀವು ಖಂಡಿತವಾಗಿಯೂ ಮೂರನೇ ಭಾಗವನ್ನು ನಿರೀಕ್ಷಿಸಬಹುದು. ನಾವು ಅದನ್ನು ಫ್ರ್ಯಾಂಚೈಸ್ ಮಾಡಲು ಬಯಸುತ್ತೇವೆ. ನಾವು ಶ್ರೇಣಿಗಾಗಿ ಅತ್ಯಾಕರ್ಷಕ ಆಲೋಚನೆಗಳನ್ನು ಹೊಂದಿದ್ದೇವೆ ಎಂದು ಸೂಪರ್ ಸ್ಟಾರ್ ಅಲ್ಲು ಅರ್ಜುನ್ ಹೇಳಿದರು. ಈ ಮೂಲಕ ಅಭಿಮಾನಿಗಳಲ್ಲಿ ಕುತೂಹಲವನ್ನು ಹುಟ್ಟುಹಾಕಿದರು. ಉತ್ಸವದ ಸಮಯದಲ್ಲಿ ಇಂಡಿಯಾ ಪೆವಿಲಿಯನ್ನಲ್ಲಿ ಗುರುತಿಸಲ್ಪಟ್ಟ ಅಲ್ಲು ಅರ್ಜುನ್ ಭಾರತೀಯ ಸಿನೆಮಾದ ಶ್ರೀಮಂತಿಕೆಯನ್ನು ಶ್ಲಾಘಿಸಲು ಮತ್ತು ಜಾಗತಿಕ ವೇದಿಕೆಯಲ್ಲಿ ಅದನ್ನು ಹೆಚ್ಚಿನ ಎತ್ತರಕ್ಕೆ ಏರಿಸುವ ತಮ್ಮ ದೃಷ್ಟಿಕೋನವನ್ನು ವ್ಯಕ್ತಪಡಿಸಲು ಈ ಕ್ಷಣವನ್ನು ಬಳಸಿಕೊಂಡರು. ಸಮಾನಾಂತರ ಬೆಳವಣಿಗೆಗಳಲ್ಲಿ, ನಿರ್ಮಾಣ ಘಟಕವು ಈ ವರ್ಷದ ಆಗಸ್ಟ್ 15 ರಂದು ಪುಷ್ಪಾ 2: ದಿ ರೂಲ್ ನ ವಿಶ್ವಾದ್ಯಂತ ಬಿಡುಗಡೆಯ ದಿನಾಂಕವನ್ನು ಅಧಿಕೃತವಾಗಿ ದೃಢಪಡಿಸಿದೆ. ಖ್ಯಾತ ಚಲನಚಿತ್ರ ನಿರ್ಮಾಪಕ ಸುಕುಮಾರ್ ನಿರ್ದೇಶನದ ಮೊದಲ ಕಂತು, ಪುಷ್ಪಾ: ದಿ ರೈಸ್, 2021 ರಲ್ಲಿ ಬಿಡುಗಡೆಯಾದ ನಂತರ ಬ್ಲಾಕ್ಬಸ್ಟರ್ ಸ್ಥಾನಮಾನವನ್ನು ಗಳಿಸಿತು.




## ಬಾರ್ಲಿ ನೀರು ಪ್ರಯೋಜನ

ಹೆಲ್ತ್ ಟಿಪ್ಸ್



ನೀವು ಕೊಲೆಸ್ಟ್ರಾಲ್ ಸಮಸ್ಯೆಯಿಂದ ಬಳಲುತ್ತಿದ್ದೀರಾ? ಕೆಲವು ಡಿಟಾಕ್ಸ್ ಪಾನೀಯಗಳು ಈ ಸಮಸ್ಯೆಯನ್ನು ನಿವಾರಿಸಲು ಸಹಾಯ ಮಾಡುತ್ತದೆ ಎಂದು ಕೆಲವರು ಹೇಳುತ್ತಾರೆ. ಕೆಲವು ಆಹಾರಗಳು ಮತ್ತು ಪಾನೀಯಗಳು ದೇಹದಿಂದ ಅನಗತ್ಯ ಕೊಲೆಸ್ಟ್ರಾಲ್ ತೆಗೆದುಹಾಕಲು ಸಹಾಯ ಮಾಡುತ್ತದೆ ಎಂಬುದು ಸುಳ್ಳಲ್ಲ. ಅವುಗಳಲ್ಲಿ ಒಂದು ಬಾರ್ಲಿ ನೀರು. ನೀವು ರಾತ್ರಿಯಿಡೀ ನೀರಿನಲ್ಲಿ ನೆನೆಸಿದ ಬಾರ್ಲಿಯನ್ನು ಸೋಸಿಕೊಂಡು ಬೆಳಗ್ಗೆ ಖಾಲಿ ಹೊಟ್ಟೆಯಲ್ಲಿ ನೀರನ್ನು ಕುಡಿದರೆ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಲು ಸಹಾಯಕವಾಗಿದೆ. ಸರಳವಾಗಿ ಹೇಳುವುದಾದರೆ, ಇದು ರಕ್ತದಲ್ಲಿ ಇರಬಹುದಾದ ಎಣ್ಣೆಯುಕ್ತ ಅಂಶವಾಗಿದೆ. ಕೊಲೆಸ್ಟ್ರಾಲ್ ಹಾರ್ಮೋನ್ ಉತ್ಪಾದನೆ ಮತ್ತು ಜೀವಕೋಶಗಳ ಸಂತಾನೋತ್ಪತ್ತಿಗೆ ಅತ್ಯಗತ್ಯ. ಆದಾಗ್ಯೂ, ಮಿತಿಮೀರಿದ ಸೇವನೆಯು ಸಮಸ್ಯೆಗಳಿಗೆ ಕಾರಣವಾಗಬಹುದು.ಫೈಬರ್ ನಮ್ಮ ದೇಹಕ್ಕೆ ಅಗತ್ಯವಾದ ಅಂಶಗಳಲ್ಲಿ ಒಂದಾಗಿದೆ. ಕರಗದ ಫೈಬರ್ ನಮ್ಮ ಜೀರ್ಣಾಂಗವ್ಯೂಹದ ದಕ್ಷತೆ ಮತ್ತು ಶುಚಿತ್ವವನ್ನು ಸುಧಾರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

ಓಟ್ ಮೀಲ್ ಸಹ ಪ್ರೋಬಯಾಟಿಕ್ ಆಗಿ ಕಾರ್ಯನಿರ್ವಹಿಸುತ್ತದೆ. ಇದು ಫೈಬರ್ ಅನ್ನು ಸಹ ಹೊಂದಿದೆ, ಇದು ನಿಮ್ಮ ಜೀರ್ಣಾಂಗದಲ್ಲಿ ಉತ್ತಮ ಬ್ಯಾಕ್ಟೀರಿಯಾದ ಸಮತೋಲನವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ.

## ಸೌಂದರ್ಯ ಚಿಕಿತ್ಸೆಗೆ ಹೀಗೆ ಮಾಡಿ....

ಬ್ಯೂಟಿ ಟಿಪ್ಸ್



ತ್ವಚೆಯ ಸೌಂದರ್ಯ ಚಿಕಿತ್ಸೆಗೆ ವಾರಾಂತ್ಯವನ್ನು ಮೀಸಲಿಡುತ್ತಿದ್ದೀರಾ. ಅದರಲ್ಲೂ ಸದಾ ಯೌವನ ಕಾಪಾಡಿಕೊಳ್ಳಲು ಏನೇನೋ ಚಿಕಿತ್ಸೆಗಳ ಮೊರೆ ಹೋಗುವ ಬದಲು ಮನೆಯಲ್ಲಿಯೇ ಸೌಂದರ್ಯ ಹಾಗೂ ತ್ವಚೆಯ ಆರೋಗ್ಯ ಕಾಪಾಡಿಕೊಳ್ಳುವತ್ತ ಗಮನಹರಿಸಿ.

- ಮುಖಕ್ಕೆ ಮತ್ತು ದೇಹಕ್ಕೆ ಎಳ್ಳೆಣ್ಣೆ, ಕೊಬ್ಬರಿ ಎಣ್ಣೆ ಅಥವಾ ಆಲಿವ್ ಎಣ್ಣೆಯ ಮರ್ದನ ಮಾಡಿ. ಈ ಎಣ್ಣೆಗಳು ವಿಟಮಿನ್, ಮಿನರಲ್ ಮತ್ತು ಫ್ಯಾಟಿ ಆಸಿಡ್ ನ ಅಂಶಗಳನ್ನು ಹೊಂದಿರುತ್ತದೆ. ಇದರಿಂದ ಸುಕ್ಕು ರಹಿತ ತ್ವಚೆಯನ್ನು ಹೊಂದಲು ಸಾಧ್ಯ.
- ಲೋಳೆರಸವನ್ನು ರಾತ್ರಿ ಮಲಗುವಾಗ ಮುಖಕ್ಕೆ ಹಚ್ಚಿ ಬೆಳಗ್ಗೆ ಮುಖವನ್ನು ತೊಳೆಯುವುದರಿಂದ ಚರ್ಮದ ಸುಕ್ಕು ನಿವಾರಣೆಗೊಂಡು ತ್ವಚೆಯು ಲವಲವಿಕೆಯಿಂದ ಕೂಡಿರುತ್ತದೆ.
- ಬಾಳೆಹಣ್ಣು ಹೇರಳ ಪೋಷಕಾಂಶಗಳನ್ನು ಒದಗಿಸುವ ಹಣ್ಣು. ಪೊಟ್ಯಾಶಿಯಂ, ವಿಟಮಿನ್ ಬಿ, ಸಿ ಮತ್ತು ಇ ಅಂಶಗಳನ್ನು ಒಳಗೊಂಡಿದೆ. ಇದು ಚರ್ಮದ ವಯಸ್ಸಿಗೆ ಕಾರಣವಾಗುವ ಫ್ರೀ ರಾಡಿಕಲ್ಸ್ ವಿರುದ್ಧ ಹೋರಾಡುವುದಲ್ಲದೆ ಚರ್ಮಕ್ಕೆ ತೇವಾಂಶದ ಜೊತೆಗೆ ವಿಟಮಿನ್ ಗಳನ್ನು ಪೂರೈಸಿ ಚರ್ಮದ ವಯಸ್ಸಾಗುವಿಕೆಯನ್ನು ಮುಂದೂಡುತ್ತದೆ. ಬಾಳೆ ಹಣ್ಣು ತಿನ್ನುವುದು ಅಥವಾ ಬಾಳೆಹಣ್ಣನ್ನು ಚೆನ್ನಾಗಿ ಕಿವುಚಿ ಶುದ್ಧ ನೀರಿನಿಂದ ತೊಳೆದ ಮುಖದ ಮೇಲೆ ತೆಳುವಾದ ಪೇಸ್ಟ್ ರೂಪದಲ್ಲಿ ಹಚ್ಚಿ 30 ನಿಮಿಷಗಳ ನಂತರ ತಣ್ಣೀರಿನಿಂದ ತೊಳೆಯಿರಿ.

## ಏಷ್ಯನ್ ಒಳಾಂಗಣ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಚಿನ್ನ ಗೆದ್ದ ರಿಲಯನ್ಸ್ ಫೌಂಡೇಷನ್‌ನ ಜ್ಯೋತಿ ಯರ್ರಾಜಿ

ಇರಾನ್ ರಾಜಧಾನಿ ಟೆಹರಾನ್ ನಲ್ಲಿ ನಡೆಯುತ್ತಿರುವ ಏಷ್ಯನ್ ಒಳಾಂಗಣ ಅಥ್ಲೆಟಿಕ್ಸ್ ಚಾಂಪಿಯನ್‌ಷಿಪ್‌ನಲ್ಲಿ ರಿಲಯನ್ಸ್ ಫೌಂಡೇಷನ್ ನ ಜ್ಯೋತಿ ಯರ್ರಾಜಿ ಅವರು ಭಾರತಕ್ಕೆ ಮೊದಲ ಪದಕವನ್ನು ಗೆದ್ದಿದ್ದಾರೆ. 60 ಮೀಟರ್ ಹರ್ಡಲ್ಸ್ ಸ್ಪರ್ಧೆಯಲ್ಲಿ 8.12 ಸೆಕೆಂಡುಗಳ ಹೊಸ ರಾಷ್ಟ್ರೀಯ ದಾಖಲೆಯೊಂದಿಗೆ ಚಿನ್ನ ಗೆದ್ದರು. ಜ್ಯೋತಿಯವರಿಗೆ ಈ ಪ್ರದರ್ಶನವು 2024ರ ಋತುವಿಗೆ ಅತ್ಯುತ್ತಮ ಆರಂಭವಾಗಿದೆ. ಕಳೆದ ವರ್ಷ ಕಝಕಿಸ್ತಾನ್‌ನಲ್ಲಿ ನಡೆದ ಆವೃತ್ತಿಯಲ್ಲಿ ತಾವೇ ಮಾಡಿದ್ದ ರಾಷ್ಟ್ರೀಯ ದಾಖಲೆಯನ್ನು ಉತ್ತಮಗೊಳಿಸಿದರು. ಅಂದ ಹಾಗೆ ಅಲ್ಲಿ ಅವರು ಬೆಳ್ಳಿ ಗೆದ್ದಿದ್ದರು.

ಈ ಸಾಧನೆ ಕುರಿತು ಮಾತನಾಡಿದ ಜ್ಯೋತಿ ಯರ್ರಾಜಿ, ''ಏಷ್ಯನ್ ಒಳಾಂಗಣ ಅಥ್ಲೆಟಿಕ್ಸ್ ಚಾಂಪಿಯನ್‌ಷಿಪ್ ಉತ್ತಮ ಅನುಭವ ನೀಡಿತು. ಇದು ಋತುವಿನ ಆರಂಭ ಮತ್ತು ಋತುವಿನ ಮೊದಲ ಅಂತಾರಾಷ್ಟ್ರೀಯ ಸ್ಪರ್ಧೆಯಾಗಿದೆ. ಆದ್ದರಿಂದ ನಾನು ಈ ಪ್ರದರ್ಶನದಿಂದ ತುಂಬ ಸಂತೋಷಗೊಂಡಿದ್ದೇನೆ. ಈ ಚಿನ್ನದ ಪದಕ ವಿಶೇಷವಾಗಿದೆ. ಏಕೆಂದರೆ ಕಳೆದ ವಾರ ತೊಡೆಯ ಹಿಂಭಾಗದ ಮಾಂಸಖಂಡದ ನೋವಿನಿಂದ ಬಳಲುತ್ತಿದ್ದುದರಿಂದ ಆ. ಬಗ್ಗೆ ನಾನು ಸ್ವಲ್ಪ ಚಿಂತೆಗೊಳಗಾಗಿದ್ದೆ. ಆದರೆ ರಿಲಯನ್ಸ್ ಫೌಂಡೇಷನ್‌ನ ನನ್ನ ತಂಡ ಮತ್ತು ಫಿಸಿಯೋಥೆರಪಿಸ್ಟ್‌ಗಳು ನನ್ನನ್ನು ಸ್ಪರ್ಧೆಗೆ ಸಿದ್ಧಗೊಳಿಸಲು ಶ್ರಮಿಸಿದರು. ಸ್ಪರ್ಧೆಗೆ ತಯಾರಾಗಲು ನನಗೆ ಸಹಾಯ ಮಾಡಿದ ಒಡಿಶಾ ಸರ್ಕಾರ ಮತ್ತು ರಿಲಯನ್ಸ್ ಫೌಂಡೇಷನ್‌ಗೆ ನಾನು ಕೃತಜ್ಞಳಾಗಿದ್ದೇನೆ. ಈ ಋತುವನ್ನು ಪ್ರಾರಂಭಿಸಿದ ರೀತಿಯಿಂದ ನನಗೆ ಸಂತೋಷವಾಗಿದೆ,'' ಎಂದಿದ್ದಾರೆ.




ಈ ಸ್ಪರ್ಧೆಗಾಗಿ ಜ್ಯೋತಿ ಅವರು ಕಳಿಂಗ ಒಳಾಂಗಣ ಅಥ್ಲೆಟಿಕ್ಸ್ ಕ್ರೀಡಾಂಗಣದಲ್ಲಿ ತರಬೇತಿ ಪಡೆದಿದ್ದರು. ಒಡಿಶಾ ರಿಲಯನ್ಸ್ ಫೌಂಡೇಷನ್ ಅಥ್ಲೆಟಿಕ್ಸ್ ಹೈ ಪರ್ಫಾರ್ಮೆನ್ಸ್ ಸೆಂಟರ್ ಆಯೋಜಿಸಿದ್ದ ಮೊದಲ ಒಳಾಂಗಣ ಅಥ್ಲೆಟಿಕ್ಸ್ ಟೆಸ್ಟ್ ಸ್ಪರ್ಧೆಗಳಲ್ಲಿಯೂ ಅವರು ಭಾಗವಹಿಸಿದ್ದರು. ಜ್ಯೋತಿ ಅವರು 2023ರಿಂದ ತಮ್ಮ ಅತ್ಯುತ್ತಮ ಪ್ರದರ್ಶನವನ್ನು ಮುಂದುವರಿಸಿದ್ದಾರೆ. ಅಲ್ಲಿ ಅವರು ಏಷ್ಯನ್ ಗೇಮ್ಸ್‌ನಲ್ಲಿ 100 ಮೀಟರ್ ಹರ್ಡಲ್ಸ್ ಸ್ಪರ್ಧೆಯಲ್ಲಿ ಬೆಳ್ಳಿ ಗೆದ್ದರು ಮತ್ತು ಏಷ್ಯನ್ ಚಾಂಪಿಯನ್‌ಷಿಪ್‌ನಲ್ಲಿ ಎರಡು ಪದಕಗಳನ್ನು ಗೆದ್ದರು.

ಜ್ಯೋತಿ ಅವರ ಸಾಧನೆ ಬಗ್ಗೆ ರಿಲಯನ್ಸ್ ಫೌಂಡೇಷನ್‌ನ ಅಥ್ಲೆಟಿಕ್ಸ್ ನಿರ್ದೇಶಕ ಜೇಮ್ಸ್ ಹಿಲ್ಲಿಯರ್ ಮಾತನಾಡಿ, ಜ್ಯೋತಿಗೆ ಇದು ನಿಜವಾಗಿಯೂ ಉತ್ತಮ ಫಲಿತಾಂಶವಾಗಿದೆ, ನಾವು ಭುವನೇಶ್ವರದಲ್ಲಿ 3 ವಾರಗಳ ತರಬೇತಿ ಶಿಬಿರವನ್ನು ನಡೆಸಿದ್ದೆವು. ಅದು ತುಂಬಾ ಸಹಾಯಕವಾಗಿದೆ. ಋತುವನ್ನು ಒಳ್ಳೆಯ ರೀತಿಯಲ್ಲಿ ಪ್ರಾರಂಭಿಸಲು ಬಯಸಿದ್ದರು. ಅವರು ತರಬೇತಿಯ ಸಮಯದಲ್ಲಿ ಸಣ್ಣ ಗಾಯಕ್ಕೆ ಒಳಗಾಗಿದ್ದರು. ಅದು ಗಂಭೀರ ಸ್ವರೂಪದ್ದೇನೂ ಆಗಿರಲಿಲ್ಲ. ಆದರೆ ಅವರಿಗೆ ಒಂದು ವಾರದವರೆಗೆ ತರಬೇತಿ ನೀಡಲು ಸಾಧ್ಯವಾಗಲಿಲ್ಲ. ಈಗ ಅವರು ಫಾರ್ಮ್‌ಗೆ ಮರಳಿದ್ದಾರೆ. ಇದು ಅವರ ಉತ್ತಮ ಓಟವಾಗಿತ್ತು,'' ಎಂದಿದ್ದಾರೆ

ಒಟ್ಟು 15 ಅಥ್ಲೀಟ್‌ಗಳ ಪೈಕಿ, ಏಷ್ಯನ್ ಒಳಾಂಗಣ ಚಾಂಪಿಯನ್‌ಶಿಪ್‌ನಲ್ಲಿ ಭಾರತವನ್ನು ಪ್ರತಿನಿಧಿಸುವ 7 ಅಥ್ಲೀಟ್‌ಗಳು ಉಲ್ವೆ (ಸ್ಪ್ರಿಂಟ್ಸ್ ಮತ್ತು ಥ್ರೋಸ್), ಕೂನೂರ್ (ಎಂಡ್ಯುರೆನ್ಸ್) ಮತ್ತು ಭುವನೇಶ್ವರ್ (ಜಂಪ್ಸ್) ನಲ್ಲಿರುವ ರಿಲಯನ್ಸ್ ಫೌಂಡೇಷನ್ ಕೇಂದ್ರಗಳಲ್ಲಿ ತರಬೇತಿ ಪಡೆಯುತ್ತಿದ್ದರು.

## ವಿಶ್ವ ತಿಮಿಂಗಿಲ ದಿನ




ವಿಶ್ವ ತಿಮಿಂಗಿಲ ದಿನವನ್ನು ಪ್ರತಿ ವರ್ಷ ಫೆಬ್ರವರಿಯಲ್ಲಿ ಮೂರನೇ ಭಾನುವಾರದಂದು ಆಚರಿಸಲಾಗುತ್ತದೆ ಮತ್ತು ಈ ವರ್ಷ ಫೆಬ್ರವರಿ 18 ರಂದು ನಡೆಯುತ್ತದೆ. ಈ ದಿನವು ಪರಿಸರ ವ್ಯವಸ್ಥೆಯ ಪ್ರಮುಖ ಭಾಗವಾಗಿರುವ ಈ ಜಲಚರಗಳನ್ನು ಪ್ರಶಂಸಿಸಲು ಪ್ರಯತ್ನಿಸುತ್ತದೆ. ಇದು ಅದನ್ನೂ ಮೀರಿ ಸಾಗರ ಜೀವನವನ್ನು ಕಷ್ಟಕರವಾಗಿಸುವ ಮಾನವ ನಿರ್ಮಿತ ಸವಾಲುಗಳತ್ತ ಗಮನ ಸೆಳೆಯುತ್ತದೆ. ಇದು ನಮ್ಮ ಸಾಗರಗಳಲ್ಲಿ ತ್ಯಾಜ್ಯವನ್ನು ಎಸೆಯುವುದು ಮತ್ತು ಹವಾಮಾನ ಬದಲಾವಣೆ, ಇತ್ಯಾದಿ.

ನಮ್ಮ ದೊಡ್ಡ ನೀಲಿ ಸಾಗರಗಳು ಕೆಲವು ಆಕರ್ಷಕ ಜೀವಿಗಳಿಗೆ ನೆಲೆಯಾಗಿದೆ, ಮತ್ತು ಶತಮಾನಗಳಿಂದ ಅವುಗಳನ್ನು ವಿವಿಧ ಕಾರಣಗಳಿಗಾಗಿ ಬೇಟೆಯಾಡಲಾಗುತ್ತದೆ. ಈಗ ಅವರು ಮತ್ತೊಂದು ಸವಾಲನ್ನು ಎದುರಿಸುತ್ತಾರೆ, ಅದು ಆವಾಸಸ್ಥಾನದ ನಷ್ಟವಾಗಿದೆ.ಈ ಪರಿಣಾಮಕ್ಕಾಗಿ, 1980 ರಲ್ಲಿ, ಉಷ್ಣವಲಯದ ದ್ವೀಪದ ಕರಾವಳಿಯಲ್ಲಿ ಈಜುತ್ತಿದ್ದ ಹಂಪ್ಬ್ಯಾಕ್ ತಿಮಿಂಗಿಲಗಳನ್ನು ಗೌರವಿಸಲು ಹವಾಯಿಯ ಮಾಯಿಯಲ್ಲಿ ವಿಶ್ವ ತಿಮಿಂಗಿಲ ದಿನವನ್ನು ಪ್ರಾರಂಭಿಸಲಾಯಿತು. ಈ ದಿನವು ಪೆಸಿಫಿಕ್ ವೇಲ್ ಫೌಂಡೇಶನ್ನ ಸಂಸ್ಥಾಪಕ ಗ್ರೆಗ್ ಕೌಫ್ಮನ್ ಅವರ ಕಲ್ಪನೆಯಿಂದ ಹುಟ್ಟಿದೆ. ಹಂಪ್ಬ್ಯಾಕ್ ತಿಮಿಂಗಿಲಗಳು ಎದುರಿಸುತ್ತಿರುವ ಅಳಿವಿನ ಅಪಾಯದ ಬಗ್ಗೆ ಜಾಗೃತಿ ಮೂಡಿಸಲು ಅವರು ಬಯಸಿದ್ದರು.

ಅಂದಿನಿಂದ, ತಿಮಿಂಗಿಲಗಳು ಮಾಯಿ ತಿಮಿಂಗಿಲ ಉತ್ಸವದ ಪ್ರಮುಖ ಪ್ರಮುಖ ಅಂಶಗಳಾಗಿವೆ. ಈ ಉಚಿತ ಈವೆಂಟ್ ಫ್ಲೋಟ್ಗಳು ಮತ್ತು ವೇಷಭೂಷಣದ ಪಾತ್ರಗಳನ್ನು ಒಳಗೊಂಡಿರುವ ಮೆರವಣಿಗೆಯನ್ನು ಆನಂದಿಸಲು ಜನಸಮೂಹವು ಅಲ್ಲಿ ಸೇರುವುದನ್ನು ನೋಡುತ್ತದೆ. ಉತ್ಸವವು ಮಕ್ಕಳ ಕಾರ್ಯಕ್ರಮಗಳು ಮತ್ತು ಹವಾಯಿಯನ್ ಮತ್ತು ಅಂತರರಾಷ್ಟ್ರೀಯ ತಾರೆಗಳ ಸಂಗೀತವನ್ನು ಸಹ ನೋಡುತ್ತದೆ.

ಹವಾಯಿಯಲ್ಲಿ ಹಂಪ್ಬ್ಯಾಕ್ ತಿಮಿಂಗಿಲಗಳಿಗೆ ಜಾಗೃತಿ ಮೂಡಿಸುವುದರೊಂದಿಗೆ ಪ್ರಾರಂಭವಾದದ್ದು ಈಗ ಅದನ್ನು ಮೀರಿ ಹೋಗಿದೆ. ಇದು ಹಿಂದಿನಂತೆ ಆರೋಗ್ಯಕರವಲ್ಲದ ಸಾಗರಗಳ ಬಗ್ಗೆ ಜಾಗೃತಿಯನ್ನು ಉತ್ತೇಜಿಸಲು ಪ್ರಯತ್ನಿಸುತ್ತದೆ. ತಿಮಿಂಗಿಲಗಳ ಮನೆಗಳನ್ನು ಅವು ವಾಸಿಸಲು ಸುರಕ್ಷಿತ ಸ್ಥಳವನ್ನಾಗಿ ಮಾಡಲು ಕ್ರಮಕ್ಕೆ ಗಂಭೀರ ಕರೆ ಅಗತ್ಯವಿದೆ.ತಿಮಿಂಗಿಲಗಳು ನಿಜವಾಗಿಯೂ ಸುಂದರವಾಗಿವೆ. ನೀಲಿ ತಿಮಿಂಗಿಲವು 98 ಅಡಿ ಉದ್ದಕ್ಕೆ ಬೆಳೆಯುತ್ತದೆ ಮತ್ತು ಇದು ಭೂಮಿಯ ಮೇಲಿನ ಅತಿ ದೊಡ್ಡ ತಿಮಿಂಗಿಲವಾಗಿದೆ. ಚಿಕ್ಕ ತಿಮಿಂಗಿಲ, ಹಲ್ಲಿನ ಕುಬ್ಜ ಸ್ಪರ್ಮ್ ವೇಲ್, ಆರು ಅಡಿ, ಏಳು ಇಂಚು ಮತ್ತು ಎಂಟು ಅಡಿ, 10 ಇಂಚುಗಳ ನಡುವೆ ಬೆಳೆಯುತ್ತದೆ.

ಆದ್ದರಿಂದ ಈ ದಿನದಂದು, ನಾವೆಲ್ಲರೂ ಈ ಹೆಚ್ಚುತ್ತಿರುವ ಕಾಳಜಿಯನ್ನು ಅರಿತುಕೊಳ್ಳಬೇಕು ಮತ್ತು ಅವುಗಳ ನೈಸರ್ಗಿಕ ಆವಾಸಸ್ಥಾನವನ್ನು ಸಂರಕ್ಷಿಸಲು ಸಂಗ್ರಹಣೆಯ ಕ್ರಮವನ್ನು ತೆಗೆದುಕೊಳ್ಳಬೇಕು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ವಾಹನ ಚಲಾಯಿಸುವಾಗ ಎಚ್ಚರ, ಪಿತ್ರಾರ್ಜಿತ ಆಸ್ತಿಯಲ್ಲಿ ತೊಂದರೆ, ಉದ್ಯೋಗಕಾಂಕ್ಷಿಗಳಿಗೆ ಯಶಸ್ಸು.

**ವೃಷಭ:** ರಾಜಕೀಯ ಕ್ಷೇತ್ರದವರಿಗೆ ಶುಭ, ಮಹಿಳೆಯರಿಗೆ ಯಶಸ್ಸು, ವಿದೇಶಿ ವ್ಯಾಪಾರಸ್ಥರಿಗೆ ಲಾಭ.

**ಮಿಥುನ:** ಉದ್ಯಮದಲ್ಲಿ ಪ್ರಗತಿ, ಸರ್ಕಾರಿ ಉದ್ಯೋಗಸ್ಥರಿಗೆ ಶುಭ, ಅನಗತ್ಯ ಕೆಲಸಗಳನ್ನು ಮುಂದೂಡಿ ಮಕ್ಕಳ ಭವಿಷ್ಯದ ಚಿಂತೆ,

**ಕಟಕ:** ಸಹೋದ್ಯೋಗಿಗಳಿಂದ ತೊಂದರೆ, ಮಿತ್ರರ ಸಹಕಾರ ದೊರೆಯಲಿದೆ, ಹಣಕಾಸಿನ ವ್ಯವಹಾರದಲ್ಲಿ ಎಚ್ಚರಿಕೆ

**ಸಿಂಹ:** ಆರ್ಥಿಕ ಸ್ಥಿತಿ ಸಾಧಾರಣ, ಅಪರಿಚಿತ ವ್ಯಕ್ತಿಗಳಿಂದ ಎಚ್ಚರಿಕೆ, ಹಿನ್ನಡೆ, ಮಹಿಳೆಯರಿಂದ ನೋವು

**ಕನ್ಯಾ:** ನೆರೆಹೊರೆಯವರಿಂದ ತೊಂದರೆ, ಹೊಸ ಮಾರ್ಗಗಳು ದೊರೆಯುತ್ತದೆ, ಮಾತುಗಳ ಮೇಲೆ ಹಿಡಿತವಿರಲಿ.

**ತುಲಾ:** ನೌಕರರಿಗೆ ಶುಭ, ಸಾಲಗಾರರ ತೊಂದರೆ, ಹೂಡಿಕೆ ವ್ಯವಹಾರಗಳಲ್ಲಿ ಎಚ್ಚರಿಕೆ, ಸಂಗಾತಿಯಿಂದ ಸಮಸ್ಯೆ, ಅನಾರೋಗ್ಯ

**ವೃಶ್ಚಿಕ:** ಆಹಾರ ಉತ್ಪನ್ನಗಳಿಗೆ ಹೆಚ್ಚು ಲಾಭ, ಸ್ನೇಹಿತರಿಂದ ಸಹಕಾರ, ನಿರ್ಮಾಣ ಕಾರ್ಯದಲ್ಲಿ ಅಭಿವೃದ್ಧಿ, ಸಂಗಾತಿಯಿಂದ ಅಂತರ, ಪಾಲುದಾರಿಕೆಯಲ್ಲಿ ನಷ್ಟ

**ಧನಸ್ಸು:** ಯಂತ್ರೋಪಕರಣಗಳಿಂದ ಎಚ್ಚರವಿರಲಿ, ಮಹಿಳೆಯರಿಗೆ ಶುಭ, ಆದಾಯ

**ಮಕರ:** ತುರ್ತು ವಿಷಯಗಳಲ್ಲಿ ಗಮನಹರಿಸಿ, ಆರ್ಥಿಕತೆಯಲ್ಲಿ ಚೇತರಿಕೆ, ಹೊಸ ವ್ಯವಹಾರಗಳ ಯೋಚನೆ ಸಹಾಯದ ನಿರೀಕ್ಷೆ, ಬಾಲಗ್ರಹ ದೋಷಗಳು

**ಕುಂಭ:** ಹಿತಶತ್ರುಗಳಿಂದ ಎಚ್ಚರವಿರಲಿ, ಚಿನ್ನದ ವ್ಯಾಪಾರದಲ್ಲಿ ಆದಾಯ, ಹಿರಿಯರಿಗೆ ಗೌರವ,

**ಮೀನ:** ಸಂಬಂಧಗಳಲ್ಲಿ ಭಿನ್ನತೆ, ತಾಯಿಯ ಆರೋಗ್ಯದಲ್ಲಿ ಎಚ್ಚರ, ಉತ್ತಮ ಧನಲಾಭ ಸಂಭವ, ಆಕಸ್ಮಿಕ ಅವಘಡಗಳು, ಆರ್ಥಿಕ ಹಿನ್ನಡೆ, ಕಲಹಗಳು.

## ರಾಜ್ಯ ಬಜೆಟ್ ಚಾಮರಾಜನಗರಕ್ಕೆ ಖಾಲಿ ಡಬ್ಬ ಇದ್ದಂತೆ

**ಚಾಮರಾಜನಗರ:** ರಾಜ್ಯ ಸರ್ಕಾರ ಶುಕ್ರವಾರ ಮಂಡಿಸಿದ ಬಜೆಟ್ ಚಾಮರಾಜನಗರಕ್ಕೆ ಖಾಲಿ ಡಬ್ಬ ಇದ್ದಂತೆ ಎಂದು ಖಾಲಿ ರಟ್ಟಿನ ಡಬ್ಬ ಪ್ರದರ್ಶಿಸಿ ಪ್ರತಿಭಟನೆ ನಡೆಸಿದರು.

ನಗರದ ಭುವನೇಶ್ವರಿ ವೃತ್ತದಲ್ಲಿ ಜಮಾವಣೆಗೊಂಡ ಕಾರ್ಯಕರ್ತರು ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ಇತ್ತೀಚೆಗೆ ನಗರದಲ್ಲಿ ಪ್ರತಿಭಟನೆ ನಡೆಸಿ, ಮುಂಬರುವ ಬಜೆಟ್‌ನಲ್ಲಿ ಮೇಕೆದಾಟು ಅಭಿವೃದ್ಧಿಗೆ ಸಾವಿರಾರು ಕೋಟಿ ರೂ.ಗಳು ಮೀಸಲಿಡಿ, ಚಾಮರಾಜನಗರಕ್ಕೆ 2ನೇ ಹಂತದ ಕುಡಿಯುವ ನೀರು ವ್ಯವಸ್ಥೆ ಕಲ್ಪಿಸಬೇಕು. ಪ್ರವಾಸೋದ್ಯಮಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಹಾಗೂ ವಿಶ್ವವಿದ್ಯಾಲಯ ಪುನಶ್ಚೇತನಕ್ಕೆ 100 ಕೋಟಿ ರೂ. ಅನುದಾನ ನೀಡುವಂತೆ ಬೇಡಿಕೆ ಇಟ್ಟಿದ್ದೆವು. ಆದರೆ ಯಾವ ಬೇಡಿಕೆಗೂ ಸ್ಪಂದಿಸಿಲ್ಲ ಜಿಲ್ಲೆಗೆ ಸಂಪೂರ್ಣ ಅನ್ಯಾಯ ಮಾಡಿದೆ ಎಂದು ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ತಮಿಳುನಾಡಿಗೆ ಕಾವೇರಿ ನೀರನ್ನು ಬಿಟ್ಟಿರುವ ರಾಜ್ಯ ಸರ್ಕಾರದ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ಕಾರ್ಯಕರ್ತರು 167ನೇ ದಿನವಾದ ಇಂದು ಕೂಡಾ ತಮ್ಮ ಹೋರಾಟವನ್ನು ಮುಂದುವರೆಸಿದರು. ಕರ್ನಾಟಕಕ್ಕೆ ಭೀಕರ ಬರಗಾಲ ಆವರಿಸುತ್ತಿದೆ. ಮಳೆ ಇಲ್ಲ, ಜಲಾಶಯಗಳು ಸಂಪೂರ್ಣ ಬತ್ತಿ ಹೋಗಿವೆ ಇಂತಹ ಸಂದರ್ಭದಲ್ಲೂ ನೀರು ಹರಿಸುತ್ತಿರುವುದು ಅತ್ಯಂತ ಖಂಡನೀಯ ಎಂದರು. ಕೇಂದ್ರ ಸರ್ಕಾರಕ್ಕೆ ಒಕ್ಕೂಟದ ವ್ಯವಸ್ಥೆಯ ಮೇಲೆ ಗೌರವ ಇದ್ದರೆ, ಈಗಲಾದರೂ ಮಧ್ಯ ಪ್ರವೇಶ ಮಾಡಿ ಕಾವೇರಿ ನಿರ್ವಹಣಾ ಮಂಡಳಿಯನ್ನು ವಜಾಗೊಳಿಸಬೇಕು. ತಮಿಳುನಾಡಿಗೆ ನೀರು ಬಿಡುವುದನ್ನು ನಿಲ್ಲಿಸುವ ಮೂಲಕ ರಾಜ್ಯದ ಜನತೆಗೆ ನ್ಯಾಯ ದೊರಕಿಸಿಕೊಡಬೇಕು ಎಂದು ಕಿಡಿಕಾರಿದರು.



ಎಲ್ಲಿಯವರೆಗೆ ನೀವು ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸುವುದನ್ನು ನಿಲ್ಲಿಸುವುದಿಲ್ಲವೋ ಅಲ್ಲಿಯವರೆಗೂ ಉಗ್ರವಾದ ಹೋರಾಟವನ್ನು ಮಾಡುತ್ತೇವೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಗು.ಪುರುಷೋತ್ತಮ್, ಪಣ್ಯದಹುಂಡಿ ರಾಜು, ತಾಂಡವಮೂರ್ತಿ, ಲಿಂಗರಾಜು, ನಿಜಧ್ವನಿ ಗೋವಿಂದರಾಜ್, ಚಾ.ವೆಂ. ರಾಜ್‌ಗೋಪಾಲ್, ಚಾ.ರ.ಕುಮಾರ್, ಆಟೋ ನಾಗೇಶ್, ವೀರಭದ್ರ, ಮಹೇಶ್‌ಗೌಡ, ರವಿಚಂದ್ರ, ಪ್ರಸಾದ್ ಇನ್ನಿತರರಿದ್ದರು.

ಸಂಜೆ ಮುಗಿಲು
ಭಾನುವಾರ
18.2.2024



### ಒಂದೇ ಕಲ್ಲಲ್ಲಿ ಮೂರು ಹಕ್ಕಿ ಹೊಡೆದ ಕೇಜ್ರಿವಾಲ್

# 'ವಿಶ್ವಾಸ ಸವಾಲು' ಗೆದ್ದ ದೆಹಲಿ ಮುಖ್ಯಮಂತ್ರಿ

**ಹೊಸದಿಲ್ಲಿ:** ದಿಲ್ಲಿ ವಿಧಾನಸಭೆಯಲ್ಲಿ ವಿಶ್ವಾಸಮತಯಾಚನೆ ನಿಲುವಳಿ ಮಂಡಿಸುವ ಮೂಲಕ ಸಿಎಂ ಅರವಿಂದ್ ಕೇಜ್ರಿವಾಲ್ ಒಂದೇ ಕಲ್ಲಿನಲ್ಲಿ ಮೂರು ಹಕ್ಕಿ ಹೊಡೆಯುವಲ್ಲಿ ಸಫಲವಾಗಿದ್ದಾರೆ.

ಶಾಸನ ಸಭೆಯಲ್ಲಿ ವಿಶ್ವಾಸಮತ ಯಾಚಿಸುವ ಮೂಲಕ ಬಿಜೆಪಿಯ ಆಮಿಷದ ವ್ಯಾಪ್ತಿಯಲ್ಲಿದ್ದ ಆಪ್ ಶಾಸಕರ 'ಪಕ್ಷ ನಿಷ್ಠೆಯ ಪರೀಕ್ಷೆ' ನಡೆಸುವ ಜತೆಜತೆಗೆ ನೇರವಾಗಿ ಕೋರ್ಟ್‌ಗೆ ಹಾಜರಾಗಲು ಒಂದು ತಿಂಗಳ ಕಾಲಾವಕಾಶ ಪಡೆದುಕೊಳ್ಳುವಲ್ಲಿ ಯಶಸ್ವಿಯಾದರು.

ಅಬಕಾರಿ ಹಗರಣ ಸಂಬಂಧ ಇ.ಡಿ ವಿಚಾರಣೆಗೆ ಸತತ ಗೈರು ಹಾಜರಾಗಿದ್ದ ಕೇಜ್ರಿವಾಲ್‌ಗೆ ಫೆ 17 ರಂದು ಕೋರ್ಟ್ ಮುಂದೆ ಹಾಜರಾಗಿ ವಿವರಣೆ ನೀಡುವಂತೆ ದಿಲ್ಲಿ ಹೈಕೋರ್ಟ್ ನಿರ್ದೇಶನ ನೀಡಿತ್ತು.

ಬಿಜೆಪಿಯ ಆಪರೇಷನ್ ಕಮಲದ ಹದ್ದಿನ ಕಣ್ಣಲ್ಲಿದ್ದ ಶಾಸಕರ 'ಪಕ್ಷ ನಿಷ್ಠೆ' ಪರೀಕ್ಷೆ, ಕೋರ್ಟ್‌ಗೆ ಹಾಜರಾಗುವುದನ್ನು ವಿಳಂಬಗೊಳಿಸುವ ಜತೆಗೆ ಇ.ಡಿ ಸಮನ್ಸ್‌ಗೆ ಸಡ್ಡು ಹೊಡೆಯುವ ರಾಜಕಿಯ ತಂತ್ರಗಾರಿಕೆ ಭಾಗವಾಗಿ ಶುಕ್ರವಾರ ವಿಶ್ವಾಸಮತ ಯಾಚನೆ ನಿರ್ಣಯ ಮಂಡಿಸಿದ್ದರು.



### 2029ಕ್ಕೆ ಬಿಜೆಪಿ ಮುಕ್ತ ಭಾರತ!

ಶನಿವಾರ ವಿಶ್ವಾಸಮತ ನಿರ್ಣಯದ ಮೇಲೆ ದಿಲ್ಲಿ ವಿಧಾನಸಭೆಯಲ್ಲಿ ಮಾತನಾಡಿದ ಕೇಜ್ರಿವಾಲ್, ''ನನ್ನನ್ನು ಬಂಧಿಸಿ ಆಪ್ ಶಾಸಕರನ್ನು ಖರೀದಿಸಲು ಬಿಜೆಪಿ ಸಂಚು ಮಾಡಿದೆ. ಭವಿಷ್ಯದಲ್ಲಿ ಬಿಜೆಪಿಗೆ ದೊಡ್ಡ ಸವಾಲಾಗಲಿರುವ ಆಪ್ ಪಕ್ಷವನ್ನು ಮುಗಿಸಲು ಹೊರಟಿದೆ. 2024ರ ಚುನಾವಣೆಯಲ್ಲಿ ಬಿಜೆಪಿ ಸೋಲಿಸಲು ಸಾಧ್ಯವಿವಲ್ಲ. ಆದರೆ, 2029ರಲ್ಲಿ ಆಮ್ ಆದ್ಮಿ ಪಕ್ಷವೇ ಭಾರತವನ್ನು ಬಿಜೆಪಿ ಮುಕ್ತ ದೇಶ ಮಾಡಲಿದೆ,'' ಎಂದು ಗುಡುಗಿದರು. ನಿರ್ಣಯದ ಮೇಲೆ ಮಾತನಾಡಿದ ಆಪ್ ಶಾಸಕರಾದ ಕುಲದೀಪ್ ಕುಮಾರ್, ವಿನಯ್ ಮಿಶ್ರಾ, ಅಖಿಲೇಶ್ ತ್ರಿಪಾಠಿ, ''ಬಿಜೆಪಿ ನಾಯಕರು ಹಲವು ತಿಂಗಳಿಂದ ಆಪ್ ಪಕ್ಷವನ್ನು ಇಬ್ಭಾಗ ಮಾಡಲು ಪ್ರಯತ್ನಿಸುತ್ತಿದ್ದಾರೆ. ಕೇಜ್ರಿವಾಲ್ ಸರಕಾರ ಉರುಳಿಸಲು ಶಾಸಕರ ಖರೀದಿಸಲು ಯತ್ನ ನಡೆಸಿದ್ದಾರೆ. ಆಸೆ, ಆಮಿಷ ಒಡ್ಡುವ ಮೂಲಕ ಆಪ್ ಶಾಸಕರನ್ನು ಸೆಳೆಯಲು ಕುತಂತ್ರ ನಡೆಸಿದ್ದರು,'' ಎಂದು ದೂರಿದರು.

### ವಿಶ್ವಾಸ ಗೆದ್ದ ಕೇಜ್ರಿವಾಲ್

ಚರ್ಚೆಯ ಬಳಿಕ ನಡೆದ ಮತದಾನದಲ್ಲಿ ಕೇಜ್ರಿವಾಲ್ ಮಂಡಿಸಿದ ನಿರ್ಣಯದ ಪರವಾಗಿ 54 ಶಾಸಕರು ಮತಚಲಾಯಿಸಿದರು. 54-0 ಮತಗಳ ಅಂತರದಿಂದ ವಿಶ್ವಾಸಮತ ಪರೀಕ್ಷೆಯಲ್ಲಿ ಕೇಜ್ರಿವಾಲ್ ತೇರ್ಗಡೆಯಾದರು. 70 ಸದಸ್ಯ ಬಲದ ವಿಧಾನಸಭೆಯಲ್ಲಿ 62 ಶಾಸಕರನ್ನು ಹೊಂದಿದ್ದ ಆಪ್, ಇಬ್ಬರು ಶಾಸಕರು ಜೈಲಿನಲ್ಲಿದ್ದಾರೆ. ಮೂವರು ಅನಾರೋಗ್ಯದ ಕಾರಣ ನೀಡಿ ಗೈರಾಗಿದ್ದರು. ಮೂವರು ಶಾಸಕರು ದಿಲ್ಲಿಯಿಂದ ಹೊರಗಡೆ ಇದ್ದಾರೆಂದು ತಿಳಿದು ಬಂದಿದೆ. ಬಿಜೆಪಿಯ ಎಂಟು ಶಾಸಕರ ಪೈಕಿ ಏಳು ಮಂದಿಯನ್ನು ಕಲಾಪದಿಂದ ಅಮಾನತುಗೊಳಿಸಲಾಗಿದೆ.

ಕಳೆದ ಮೂರು ವರ್ಷದಲ್ಲಿ ಕೇಜ್ರಿವಾಲ್ ಮೂರು ಬಾರಿ ವಿಶ್ವಾಸಮತ ಯಾಚಿಸಿದ್ದಾರೆ. ಆಪ್ ಪಕ್ಷವನ್ನು ಇಬ್ಭಾಗಿಸಲು ಬಿಜೆಪಿ ಯತ್ನಿಸುತ್ತಿದೆ ಎಂಬ ಆರೋಪ ಮುಂದಿಟ್ಟ ಮೂರು ಸಲವೂ ವಿಶ್ವಾಸಮತ ಗೆದ್ದಿದ್ದಾರೆ.

ಇ.ಡಿ ವಿಚಾರಣೆಗೆ ಸತತ ಗೈರು ಹಾಜರಾಗಿದ್ದ ಹಿನ್ನೆಲೆಯಲ್ಲಿ ಫೆ 16 ರಂದು ಕೋರ್ಟ್‌ಗೆ ಹಾಜರಾಗುವಂತೆ ದಿಲ್ಲಿ ಹೈಕೋರ್ಟ್ ನಿರ್ದೇಶನದಂತೆ ವರ್ಚುವಲ್ ಮೂಲಕ ಕೇಜ್ರಿವಾಲ್ ವಿಚಾರಣೆಗೆ ಹಾಜರಾದರು.

## ಪಾಕಿಸ್ತಾನ ಚುನಾವಣೆಯಲ್ಲಿ ಅಕ್ರಮ ಹಿನ್ನೆಲೆ: ರಾವಲ್ಪಿಂಡಿ ಕಮಿಷನರ್ ರಾಜೀನಾಮೆ

ಪಾಕಿಸ್ತಾನ ಚುನಾವಣೆಯಲ್ಲಿ ಅಕ್ರಮ ನಡೆದ ಹಿನ್ನೆಲೆಯಲ್ಲಿ ನಾನು ರಾಜೀನಾಮೆ ನೀಡುತ್ತಿದ್ದೇನೆ ಎಂದು ಹೇಳಿ, ರಾವಲ್ಪಿಂಡಿ ಕಮಿಷನರ್, ಲಿಯಾಖತ್ ಅಲಿ ಚಟ್ಟಾ ರಾಜೀನಾಮೆ ನೀಡಿದ್ದಾರೆ.



ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್, ಚುನಾವಣೆಯಲ್ಲಿ ಅಕ್ರಮ ನಡೆದಿದೆ.

ಮತಗಳ ಸಂಖ್ಯೆಯನ್ನು ತಿರುಚಲಾಗಿದೆ ಎಂದು ಆರೋಪಿಸಿದ್ದರು. ಈ ನಡುವೆಯೇ ಚಟ್ಟಾ ರಾಜೀನಾಮೆ ನೀಡಿದ್ದಾರೆ. ಅಲ್ಲದೇ, ಈ ಬಗ್ಗೆ ಮಾತನಾಡಿರುವ ಚಟ್ಟಾ, ನಾವು ಸೋತವರನ್ನು 50 ಸಾವಿರ ಮತಗಳ ಅಂತರದಿಂದ ವಿಜೇತರನ್ನಾಗಿ ಮಾಡಿದ್ದೇವೆ. ರಾವಲ್ಪಿಂಡಿ ಜನರಿಗೆ ನಾವು ಅನ್ಯಾಯ ಮಾಡಿದ್ದೇವೆ. ಆತ್ಮಹತ್ಯೆ ಎಂದು ಪರಿಗಣಿಸುವ ಮಟ್ಟಿಗೆ, ನಾನು ಒತ್ತಡಕ್ಕೆ ಒಳಗಾಗಿ ರಾಜೀನಾಮೆ ನೀಡುತ್ತಿದ್ದೇನೆ ಎಂದು ಚಟ್ಟಾ ಆರೋಪಿಸಿದ್ದಾರೆ.

ಅಂದರೆ, ತಪ್ಪಿಲ್ಲದಿದ್ದರೂ, ನೀನು ನಾವು ಮಾಡುವ ಆರೋಪವನ್ನು ಹೊತ್ತು, ನಿನ್ನ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಇಲ್ಲವಾದಲ್ಲಿ, ಏನು ಬೇಕಾದರೂ ಆಗಬಹುದು ಎಂದು ಬೆದರಿಕೆ ಹಾಕಿದ್ದಾರೆ. ಈ ಕಾರಣಕ್ಕ ಚಟ್ಟಾ ನಮಾಜ್ ಮಾಡಿದ ಬಳಿಕ ಆತ್ಮಹತ್ಯೆ ಮಾಡಿಕೊಳ್ಳುವ ಯೋಚನೆ ಮಾಡಿದ್ದಾರೆ. ಆದರೆ ಚಟ್ಟಾ, ತಮ್ಮ ನಿರ್ಧಾರವನ್ನು ಬದಲಿಸಿ, ಮೀಡಿಯಾದ ಮುಂದೆ ಈ ವಿಷಯ ಹೇಳಲು ನಿರ್ಧರಿಸಿದ್ದಾರೆ.

### ಪರ್ಯಾಯ ಮೈತ್ರಿಕೂಟ ಎಲ್ಲಿದೆ?: , ಮಿತ್ರಪಕ್ಷಗಳಲ್ಲಿಲ್ಲ ಸ್ಪಂದನ

# ಒಡೆದ ಮಡಕೆಯಾದ ಘಟಬಂಧನ

**ನವದೆಹಲಿ:** ನಿತೀಶ್ ಕುಮಾರ್ ಅವರು ಇಂಡಿ ಮೈತ್ರಿ ಒಕ್ಕೂಟದಿಂದ ಹೊರ ನಡೆದದ್ದು ಇದೀಗ ಮಹಾಘಟಬಂಧನ ಇದೀಗ ಒಡೆದ ಘಟದಂದಾಗಿದೆ. ಮಿತ್ರಪಕ್ಷಗಳೆನ್ನಿಸಿಕೊಂಡವರೆಲ್ಲರೂ ತಮ್ಮ ಮನ್ಮಾನಿ ಮಾಡುತ್ತಿದ್ದಾರೆ. ಹೀಗಾಗಿ ಕಾಂಗ್ರೆಸ್ ಗೂ ಇದೀಗ ಎಲ್ಲವನ್ನೂ ತೆಪ್ಪಗೆ ಕೂತು ನೋಡಬೇಕಾದ ಪರಿಸ್ಥಿತಿ. ಮೈತ್ರಿಕೂಟದ ಚುಕ್ಕಾಣಿ ಹಿಡಿವ ಸಾಮರ್ಥ್ಯ ಕೈ ಪಾಳಯದಲ್ಲಿ ಕಾಣಿಸುತ್ತಿಲ್ಲ ಹಾಗೆ ಚುಕ್ಕಾಣಿ ಹಿಡಿಯುವುದು ಮಮತಾ ಬ್ಯಾನರ್ಜಿ ಸೇರಿದಂತೆ ಬಹುತೇಕರಿಗೆ ಇಷ್ಟವಿಲ್ಲ. ಹಾಗೆಂದು ಪ್ರತಿಯೊಬ್ಬರನ್ನು ತೂಗಿ ಅಳೆದರೂ ಮೈತ್ರಿ ತೂಕ ಹೆಚ್ಚಿಸುವ ನಾಯಕತ್ವ ಉಳಿದ ಪಕ್ಷಗಳಲ್ಲೂ ಕಾಣುತ್ತಿಲ್ಲ. ಕಳೆದ ವರ್ಷ ಆಗಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಸರಕಾರದ ವಿರುದ್ಧ ಪ್ರತಿಪಕ್ಷಗಳು ಅವಿಶ್ವಾಸ ಗೊತ್ತುವಳಿ ಮಂಡಿಸಿದ್ದವು. ಐಎನ್‌ಡಿಐಎ ರಚನೆ ಬಳಿಕ ಮೋದಿ ವಿರೋಧಿಗಳು ಸಂಸತ್‌ನಲ್ಲಿ ನಡೆಸಿದ ಮೊದಲ ಹೋರಾಟ ಅದಾಗಿತ್ತು. ಆದರೆ, ಆ ಅವಿಶ್ವಾಸ ಗೊತ್ತುವಳಿಗೆ ಶ್ವಾಸವೇ ಇರಲಿಲ್ಲ. ಹಾಗಾಗಿ ಲೀಲಾಜಾಲವಾಗಿ ಸಂಸತ್‌ನ ವಿಶ್ವಾಸ ಗೆದ್ದ ಮೋದಿ ಸರಕಾರ ಆತ್ಮವಿಶ್ವಾಸ ಹೆಚ್ಚಿಸಿಕೊಂಡಿತ್ತು. ಸರಕಾರಗಳ ವಿರುದ್ಧ ಸಂಸತ್‌ನಲ್ಲೋ ವಿಧಾನಸಭೆಯಲ್ಲೋ ಅವಿಶ್ವಾಸ ಗೊತ್ತುವಳಿ ಮಂಡಿಸುವುದು ಪ್ರತಿಪಕ್ಷಗಳ ಹಕ್ಕು. ಸಂಖ್ಯಾಬಲವಿಲ್ಲದಿದ್ದರೂ ಇಂಥ ಗೊತ್ತುವಳಿ ಮಂಡಿಸಲು ಯಾವ ಅಡ್ಡಿಯೂ ಇಲ್ಲ. ವಿರೋಧ ಪಕ್ಷ ಚುರುಕಾಗಿದ್ದರೆ ಸರಕಾರವೂ ಭ್ರಮಾತ್ಮಕ ಆವರಣದಿಂದ ಹೊರಬರಲು ಸಾಧ್ಯವಾಗುತ್ತದೆ. ಮೋದಿ ಸರಕಾರದ ವಿರುದ್ಧದ ಅವಿಶ್ವಾಸ ಗೊತ್ತುವಳಿ ಬಿದ್ದು ಹೋಗುವುದು ನಿರೀಕ್ಷಿತವೇ ಆಗಿತ್ತು.

ಹಾಗಿದ್ದರೂ ಪ್ರಖರ ಚರ್ಚೆಯ ಅಪೇಕ್ಷೆಯಿತ್ತು. ಮಣಿಪುರದ ಸಂಘರ್ಷದ ವಿಚಾರ ತೆಗೆದುಕೊಂಡಿದ್ದರಿಂದ ಈ ಗೊತ್ತುವಳಿ ಗಮನ ಸೆಳೆದಿತ್ತು. ವಿಪರ್ಯಾಸವೆಂದರೆ, ಸಂಖ್ಯೆಯ ದೃಷ್ಟಿಯಿಂದ ಕೃಶವಾಗಿರುವ ಪ್ರತಿಪಕ್ಷಗಳು ಸೈದ್ಧಾಂತಿಕವಾಗಿಯೂ ಆಳುವ ಪಕ್ಷದ ವಿರುದ್ಧ ಒಗ್ಗಟ್ಟಿನಿಂದ ಮುಗಿ ಬೀಳುವ ಪ್ರಯತ್ನ ಮಾಡಿರಲಿಲ್ಲ. ಕಡೆಗೆ ಮೋದಿ ಅವರೇ ಯಥಾಪ್ರಕಾರ ಪ್ರತಿಪಕ್ಷಗಳನ್ನು ಗೋಳು ಹೊಯ್ದುಕೊಂಡು ವಿಡಂಬಿಸಿ ಚರ್ಚೆಯನ್ನು ಸಮಾಪ್ತಿಗೊಳಿಸಿದ್ದರು.



### ಎಡವಿದ್ದೆಲ್ಲಿ?

ಪ್ರಾದೇಶಿಕ ಪಕ್ಷಗಳ ಸಮರ್ಥ ನಾಯಕರಿಲ್ಲದೆ ಎನ್‌ಡಿಎ ವಿರುದ್ಧ ಪರ್ಯಾಯ ರಂಗ ಕಟ್ಟಲು ಹೊರಡುವುದೇ ತಮಾಷೆಯ ಸಂಗತಿ. ಅಷ್ಟಕ್ಕೂ ಐಎನ್‌ಡಿಐಎ ಮೈತ್ರಿಕೂಟದ ಅಂಕುರಕ್ಕೆ ಕಾರಣರಾದವರೇ ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್. ಮೋದಿ ವಿರೋಧಿ ದಳದ ನಾಯಕರನ್ನೆಲ್ಲಪಾಟ್ನಾಗೆ ಕರೆಸಿ ಸಭೆ ನಡೆಸಿದ್ದ ನಿತೀಶ್ ಈ ಆಶಯಕ್ಕೆ ಅಡಿಗಲ್ಲು ಹಾಕಿದ್ದರು. ಇದಕ್ಕೂ ಮೊದಲು ತೆಲಂಗಾಣದ ಚಂದ್ರಶೇಖರರಾವ್ ಅಂಥವರು ಓಡಾಟ ಮಾಡಿದ್ದರೂ ಅದು ಪ್ರಯೋಜನಕ್ಕೆ ಬಂದಿರಲಿಲ್ಲ. ಪ್ರಮುಖವಾಗಿ ಲೋಕಸಭೆ ಚುನಾವಣೆಯಲ್ಲಿದಕ್ಷಿಣ ಭಾರತದವರನ್ನು ಕೇಂದ್ರಬಿಂದುವಾಗಿ ಇಟ್ಟುಕೊಂಡು ಹೋಗುವುದು ಲಾಭದಾಯಕವೆಂದು ಈವರೆಗೂ ಸಾಬೀತಾಗಿಲ್ಲ. ಈ ವಿಚಾರದಲ್ಲಿಉತ್ತರ ಭಾರತದವರ ಪ್ರಾಬಲ್ಯ ಮುಂದುವರಿದಿದೆ. ಪರ್ಯಾಯ ರಂಗ ಅಸ್ತಿತ್ವಕ್ಕೆ ಬರುವಾಗ ಈ ಕೂಟದ ವರ್ಚಸ್ವಿ ನಾಯಕರಾಗಿದ್ದವರು ನಿತೀಶ್ ಕುಮಾರ್. ಹಿಂದಿ ಭಾಷಾ ಬಾಹುಳ್ಯದ ಪ್ರಾಂತ್ಯದ ನಿತೀಶ್ ಕುಮಾರ್ ಇಡೀ ದೇಶದಲ್ಲಿ ಚಿರಪರಿಚಿತ ಮುಖ. ಹಾಗಾಗಿ ಅವರೇ ನಾಯಕರಾಗಿ ಹೊರಹೊಮ್ಮುವ ನಿರೀಕ್ಷೆಯೂ ಇತ್ತು. ಆದರೆ, ಬಿಹಾರ ಸಭೆಯಲ್ಲಿ ಮಿಂಚಿದ್ದ ನಿತೀಶ್ ಕುಮಾರ್ ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ಮೂಲೆಗುಂಪಾಗಿದ್ದರು. ಪಾಟ್ನಾ ಬೈಠಕ್‌ನ ಆತಿಥ್ಯ ವಹಿಸಿದ್ದ ನಿತೀಶ್ ಅವರಿಗೆ ಮುಜುಗರ ತರುವ ಘಟನೆಗಳು ಬೆಂಗಳೂರಿನ ಸಭೆಯ ಸಂದರ್ಭದಲ್ಲಿ ನಡೆದವು. ನಿತೀಶ್ ಅಭಿಪ್ರಾಯ ಆಲಿಸುವ ವ್ಯವಧಾನವೂ ಈ ಸಭೆಗೆ ಇರಲಿಲ್ಲ. ಯಜಮಾನಿಕೆಯ ಅಹಂಭಾವದೊಂದಿಗೆ ಮೈತ್ರಿಕೂಟವನ್ನು ಕಾಂಗ್ರೆಸ್ ಅತಿಕ್ರಮಿಸಿಕೊಂಡಿದ್ದೇ ಈ ದಿಢೀರ್ ಬದಲಾವಣೆಗೆ ಕಾರಣವಾಗಿತ್ತು. ಆವತ್ತೇ ನಿರಾಶರಾದ ನಿತೀಶ್ ಕುಮಾರ್ ಮೈತ್ರಿಕೂಟದ ನಾಯಕರ ಸುದ್ದಿಗೋಷ್ಠಿಗೆ ಚಕ್ಕರ್ ಹಾಕಿ ಪಾಟ್ನಾ ವಿಮಾನ ಏರಿದ್ದರು! ಆ ಬಳಿಕವೂ ನಿತೀಶ್ ಕುಮಾರ್ ಅವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಮತ್ತು ಅವರ ಜನಪ್ರಿಯತೆಯನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಯತ್ನ ನಡೆಯಲಿಲ್ಲ. ಬದಲಿಗೆ ನಿತೀಶ್ ಹೆಜ್ಜೆಯ ಜಾಡಿನ ಬಗ್ಗೆ ಪತ್ತೇದಾರಿಕೆ ಶುರು ಹಚ್ಚಿಕೊಳ್ಳಲಾಯಿತು. ಬಿಜೆಪಿಯ ಹಳೆ ಪಾರ್ಟನರ್ ಎಂದು ಹಂಗಿಸಿ ಅನುಮಾನದಿಂದ ನೋಡಲಾಯಿತು. ಇದರಿಂದ ನಿತೀಶ್ ತೊಳಲಾಟಕ್ಕೆ ಬಿದ್ದರು. ಮತ್ತೊಂದು ಕಡೆ ಈ ವಿದ್ಯಮಾನಗಳನ್ನು ಎಚ್ಚರಿಕೆಯಿಂದ ಗಮನಿಸುತ್ತಿದ್ದ ಬಿಜೆಪಿ, ತೋಳವನ್ನು ಹಳ್ಳಕ್ಕೆ ಬೀಳಿಸಲು ಕಾಯುತ್ತಿತ್ತು. ಕರ್ಪೂರಿ ಠಾಕೂರ್ ಅವರಿಗೆ ಭಾರತ ರತ್ನ ಘೋಷಣೆಯಾಗುತ್ತಿದ್ದಂತೆ ನಿತೀಶ್ ಕೂಡ ಗಟ್ಟಿ ಮನಸ್ಸು ಮಾಡಿ ಎನ್‌ಡಿಎಗೆ ಮರಳಿದರು. ಅಲ್ಲಿಗೆ ಪರ್ಯಾಯ ರಂಗದ ಆಶಾಗೋಪುರವೂ ಕಳಚಿ ಬಿದ್ದಂತಾಯಿತು!

ಇಷ್ಟಾದರೂ ಲೋಕಸಭೆ ಚುನಾವಣೆಯಲ್ಲಿ ಎನ್‌ಡಿಎಗೆ ಪರ್ಯಾಯವಾಗಿ ಹೊಸ ಮೈತ್ರಿಕೂಟವನ್ನು ನಿಲ್ಲಿಸುವ ಉತ್ಸಾಹ ಕುಂದಿರಲಿಲ್ಲ. ನಿತೀಶ್ ಕುಮಾರ್, ಮಮತಾ ಬ್ಯಾನರ್ಜಿಯಂಥವರು ಹೊಸ ಕೂಟದಲ್ಲಿ ಮುಂಚೂಣಿಯಲ್ಲಿ ನಿಂತಿದ್ದರಿಂದ ಒಂದು ಭರವಸೆ ಮೂಡಿತ್ತು. ಈಗ ಈ ಲೆಕ್ಕಾಚಾರವೇ ತಲೆಕೆಳಗಾಗಿದ್ದು ಪರ್ಯಾಯ ಘಟಬಂಧನ ಎಲ್ಲಿದೆಯೆಂದು ಕೇಳಬೇಕಾದ ಪರಿಸ್ಥಿತಿ ಬಂದಿದೆ.

## ರಷ್ಯಾಗೆ ಶಾಕ್ ಕೊಟ್ಟ ಉಕ್ರೇನ್

ಉಕ್ರೇನ್ ಅಧ್ಯಕ್ಷ ವ್ಲಾದಿಮಿರ್ ಜೆಲೆನ್ಸ್ಕಿ ರಷ್ಯಾವನ್ನು ಎದುರಿಸಲು ಫ್ರಾನ್ಸ್ ಮತ್ತು ಜರ್ಮನಿಯೊಂದಿಗೆ ಪ್ರಮುಖ ಭದ್ರತಾ ಒಪ್ಪಂದಕ್ಕೆ ಸಹಿ ಹಾಕಿದ್ದಾರೆ. ರಷ್ಯಾ-ಉಕ್ರೇನ್ ಯುದ್ಧವು ಫೆಬ್ರವರಿ 28 ರಂದು ಎರಡು ವರ್ಷಗಳನ್ನು ಪೂರ್ಣಗೊಳಿಸುತ್ತದೆ.

ಅದಕ್ಕೂ ಮೊದಲು, ಫ್ರಾನ್ಸ್ ಮತ್ತು ಜರ್ಮನಿಯೊಂದಿಗಿನ ಉಕ್ರೇನ್ ನ ಭದ್ರತಾ ಒಪ್ಪಂದವನ್ನು ಬಹಳ ಮುಖ್ಯವೆಂದು ಪರಿಗಣಿಸಲಾಗಿದೆ.

ಫ್ರಾನ್ಸ್ ಮತ್ತು ಜರ್ಮನಿ ಈಗ ಉಕ್ರೇನ್ ಅನ್ನು ರಷ್ಯಾದ ಕೈಯಲ್ಲಿ ಸೋಲಿನಿಂದ ರಕ್ಷಿಸುವ ಜವಾಬ್ದಾರಿಯನ್ನು ವಹಿಸಿಕೊಂಡಿವೆ. ಫ್ರಾನ್ಸ್ ನೊಂದಿಗೆ 10 ವರ್ಷಗಳ ದ್ವಿಪಕ್ಷೀಯ ಭದ್ರತಾ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಜೆಲೆನ್ಸ್ಕಿ ಕೆಲವು ಗಂಟೆಗಳ ಹಿಂದೆ ಜರ್ಮನಿಯೊಂದಿಗೆ ಇದೇ ರೀತಿಯ ಅಧಿಕೃತ ಒಪ್ಪಂದಕ್ಕೆ ಸಹಿ ಹಾಕಿದ್ದರು. ಉಕ್ರೇನ್-ರಷ್ಯಾ ನಡುವಿನ ಯುದ್ಧ ಎರಡು ವರ್ಷಗಳನ್ನು ಪೂರ್ಣಗೊಳಿಸುತ್ತಿದ್ದಂತೆ, ಉಕ್ರೇನ್ ಪಶ್ಚಿಮದಿಂದ ಹೆಚ್ಚಿನ ಸಹಕಾರವನ್ನು ಪಡೆಯಲು ಪ್ರಯತ್ನಿಸುತ್ತಿದೆ. ಪ್ಯಾರಿಸ್ನ ಎಲಿಸೀ ಪ್ರೆಸಿಡೆನ್ಷಿಯಲ್ ಪ್ಯಾಲೇಸ್ನಲ್ಲಿ ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರೋನ್ ಜೆಲೆನ್ಸ್ಕಿಯನ್ನು ಸ್ವಾಗತಿಸಿದರು. ಒಪ್ಪಂದದ ಅಡಿಯಲ್ಲಿ, ಫ್ರಾನ್ಸ್ ಈ ವರ್ಷ ಉಕ್ರೇನ್ಗೆ ಹೆಚ್ಚುವರಿ 3.2 ಬಿಲಿಯನ್ ಡಾಲರ್ ಮಿಲಿಟರಿ ಸಹಾಯವನ್ನು ಒದಗಿಸುತ್ತದೆ, ಇದು ಯುದ್ಧ ಪ್ರಾರಂಭವಾದಾಗಿನಿಂದ ಫ್ರಾನ್ಸ್ ಉಕ್ರೇನ್ಗೆ ಪಾವತಿಸಿದ ಅತಿದೊಡ್ಡ ವಾರ್ಷಿಕ ಸಹಾಯವಾಗಿದೆ.

## ಫೆ.21ರಂದು ಟ್ರ್ಯಾಕ್ಟರ್ ಜಾಥಾಕ್ಕೆ ಭಾರತೀಯ ಕಿಸಾನ್ ಯೂನಿಯನ್ ಕರೆ

**ಮುಜಾಫರ್ ನಗರ :** ಉತ್ತರ ಪ್ರದೇಶದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಫೆಬ್ರವರಿ 21ರಂದು ಟ್ರ್ಯಾಕ್ಟರ್ ಮೆರವಣಿಗೆ ನಡೆಸಲಾಗುವುದು ಎಂದು ಭಾರತೀಯ ಕಿಸಾನ್ ಯೂನಿಯನ್ (ಬಿಕೆಯು) ಘೋಷಿಸಿದೆ. ಪ್ರತಿಭಟನಾ ನಿರತ ರೈತರಿಗೆ ಬೆಂಬಲ ಮತ್ತು ಕನಿಷ್ಠ ಬೆಂಬಲ ಬೆಲೆ ಸೇರಿದಂತೆ ಅವರ ಬೇಡಿಕೆಗಳನ್ನು ಬೆಂಬಲಿಸಿ ರೈತರು ಫೆಬ್ರವರಿ 26 ಮತ್ತು 27 ರಂದು ದೆಹಲಿಗೆ ಹೋಗುವ ಹೆದ್ದಾರಿಗಳಲ್ಲಿ ತಮ್ಮ ಟ್ರ್ಯಾಕ್ಟರುಗಳನ್ನು ನಿಲ್ಲಿಸಲಿದ್ದಾರೆ. ಮುಜಾಫರ್ ನಗರದ ಸಿಸೌಲಿಯಲ್ಲಿರುವ ತನ್ನ ಪ್ರಧಾನ ಕಚೇರಿಯಲ್ಲಿ ಶನಿವಾರ ನಡೆದ ಮಹಾಪಂಚಾಯತ್ ಅನ್ನುದ್ದೇಶಿಸಿ ಮಾತನಾಡಿದ ಬಿಕೆಯು ನಾಯಕ ರಾಕೇಶ್ ಟಿಕಾಯತ್, ಫೆಬ್ರವರಿ 21 ರಂದು ನಡೆಯಲಿರುವ ಟ್ರ್ಯಾಕ್ಟರ್ ಮೆರವಣಿಗೆಯಲ್ಲಿ ತಮ್ಮ ಸಂಪೂರ್ಣ ಶಕ್ತಿಯನ್ನು ತೋರಿಸುವಂತೆ ರೈತರಿಗೆ ಮನವಿ ಮಾಡಿದರು. ರೈತರ ಬೃಹತ್ ಸಭೆಯನ್ನುದ್ದೇಶಿಸಿ ಮಾತನಾಡಿದ ಟಿಕಾಯತ್, ಆಡಳಿತಾರೂಢ ಬಿಜೆಪಿ ಸರ್ಕಾರದ ವಿರುದ್ಧ ತೀವ್ರ ದಾಳಿ ನಡೆಸಿದರು ಮತ್ತು ''ಇದು 'ಮೂಗು ಮತ್ತು ಫಸಲ್' (ಉತ್ಪಾದನೆ ಮತ್ತು ಬೆಳೆ) ರಕ್ಷಿಸುವ ಯುದ್ಧವಾಗಿದೆ'' ಎಂದು ಹೇಳಿದರು.

## ಬಿಜೆಪಿಯತ್ತ ಕಮಲ್ ನಾಥ್!

ಮಧ್ಯಪ್ರದೇಶ ರಾಜಕೀಯದಲ್ಲಿ ಮಹತ್ವದ ಬೆಳವಣಿಗೆ ಆಗೋ ಸುಳಿವು ಸಿಕ್ಕಿದೆ. ಕಾಂಗ್ರೆಸ್ ಹಿರಿಯ ನಾಯಕ, ಮಧ್ಯ ಪ್ರದೇಶದ ಮಾಜಿ ಸಿಎಂ ಕಮಲ ನಾಥ್ ಕೈ ಗೆ ಗುಡ್ ಬೈ ಹೇಳಿ ಕಮಲ ಹಿಡಿಯಲು ರೆಡಿಯಾಗಿದ್ದಾರೆ ಅಂತ ತಿಳಿದು ಬಂದಿದೆ. ಫೆಬ್ರುವರಿ 22 ರಂದು ರಾಹುಲ್ ಗಾಂಧಿಯ ಭಾರತ ಜೋಡೊ ನ್ಯಾಯ ಯಾತ್ರೆ ಮಧ್ಯ ಪ್ರದೇಶಕ್ಕೆ ಕಾಲಿಡಲಿದೆ. ಇದಕ್ಕೂ ಮುಂಚೆಯೆ ಕಮಲನಾಥ್ ಬಿಜೆಪಿ ಸೇರಲಿದ್ದಾರಂತೆ. ಇನ್ನು ಕಮಲ್ ನಾಥ್ ಪುತ್ರ, ಹಾಲಿ ಸಂಸದ ನಕುಲ್ ನಾಥ್ ತಮ್ಮ ಸೋಶಿಯಲ್ ಮೀಡಿಯಾ ಅಕೌಂಟ್ನಲ್ಲಿ ಕಾಂಗ್ರೆಸ್ ಪಕ್ಷವನ್ನ ಅನ್ ಫಾಲೋವ್ ಬೇರೆ ಮಾಡಿದ್ದಾರೆ. ಅಲ್ದೇ ನಕುಲ್ಗೆ ಬಿಜೆಪಿ ಲೋಕಸಭೆ ಟಿಕೆಟ್ ನೀಡಲಿದೆ ಎನ್ನಲಾಗ್ತಿದೆ.



## ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಜೀವ ಬೆದರಿಕೆ

**ನವದೆಹಲಿ :** ಅಖಿಲ ಭಾರತ ಕಾಂಗ್ರೆಸ್ ಸಮಿತಿ (ಎಐಸಿಸಿ) ಅಧ್ಯಕ್ಷರಾಗಿರುವ ಡಾ. ಮಲ್ಲಿಕಾರ್ಜುನ್ ಖರ್ಗೆಗೆ ಜೀವ ಬೆದರಿಕೆ ಬಂದಿರುವ ಹಿನ್ನೆಲೆಯಲ್ಲಿ ಅವರಿಗೆ ಇದೀಗ ಕೇಂದ್ರ ಸರ್ಕಾರ ಜೆಡ್ ಪ್ಲಸ್ ಸೆಕ್ಯೂರಿಟಿ ಭದ್ರತೆ ಒದಗಿಸಲಾಗಿದೆ ಎಂದು ತಿಳಿದು ಬಂದಿದೆ. ಹೌದು, ಇತ್ತೀಚೆಗೆ ಮಲ್ಲಿಕಾರ್ಜುನ ಖರ್ಗೆಗೆ ಜೀವ ಬೆದರಿಕೆ ಬಂದಿದೆ ಎನ್ನಲಾಗಿದೆ. ಆ ಕಾರಣಕ್ಕೆ ಜ+ ಸೆಕ್ಯುರಿಟಿ ನೀಡಲಾಗಿದೆ ಎಂದು ತಿಳಿದುಬಂದಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಭದ್ರತೆ ಹೆಚ್ಚಳ ಮಾಡಲಾಗಿದೆ. ಕಳೆದ ಮೂರು ದಿನದಿಂದ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಝುಡ್+ ಸೆಕ್ಯುರಿಟಿ ನೀಡಲಾಗುತ್ತಿದೆ ಎಂದು ಹೇಳಲಾಗುತ್ತಿದೆ. ರಾಜ್ಯ ಭದ್ರತಾ ಸಿಬ್ಬಂದಿ ಜೊತೆಗೆ ಸಿಆರ್ ಪಿಎಫ್ ಝುಡ್+ ಸೆಕ್ಯುರಿಟಿ ಸಹ ನಿಯೋಜನೆ ಮಾಡಲಾಗಿದೆ. ಹೆಚ್ಚುವರಿಯಾಗಿ 8 ಜನ ಸಿಆರ್ ಪಿಎಫ್ ಗನ್ ಮ್ಯಾನ್ ಗಳ ನಿಯೋಜನೆ ಮಾಡಲಾಗಿದೆ.



## ಚುನಾವಣಾ ಆಕ್ರಮದ ವಿರುದ್ಧ ಪಿಟಿಐ ವ್ಯಾಪಕ ಪ್ರತಿಭಟನೆ

**ಇಸ್ಲಾಮಾಬಾದ್:** ಪಾಕ್ ಸಾರ್ವತ್ರಿಕ ಚುನಾವಣೆಯಲ್ಲಿ ವ್ಯಾಪಕವಾಗಿ ಚುನಾವಣಾ ಆಕ್ರಮಗಳು ನಡೆದಿವೆಯೆಂದು ಆರೋಪಿಸಿ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ಪಕ್ಷವು ರಾಷ್ಟ್ರವ್ಯಾಪಿ ಪ್ರತಿಭಟನೆಯನ್ನು ಆರಂಭಿಸಿರುವ ಹಿನ್ನೆಲೆಯಲ್ಲಿ ರಾಜಧಾನಿ ಇಸ್ಲಾಮಾಬಾದ್ ನಲ್ಲಿ ನಿಷೇಧಾಜ್ಞೆಯನ್ನು ಹೇರಲಾಗಿದೆ. ಖೈಬರ್ ಪಖ್ತೂನ್ವ್ವಾ ಪ್ರಾಂತದ ದಕ್ಷಿಣ ವಝೀಸ್ತಾನದಲ್ಲಿ ವಾನಾದಲ್ಲಿ ಪಾದಯಾತ್ರೆಯೊಂದಿಗೆ ಪ್ರತಿಭಟನಾ ಯಾಲಿ ಆರಂಭಗೊಂಡಿತು.

''2024ರ ಪಾಕ್ ಸಾರ್ವತ್ರಿಕ ಚುನಾವಣೆಯಲ್ಲಿ ವ್ಯಾಪಕಾಗಿ, ರಾಜಾರೋಷವಾಗಿ ವಂಚನೆಗಳು ನಡೆದಿವೆ. 180 ರಾಷ್ಟ್ರೀಯ ಅಸೆಂಬ್ಲಿ ಸ್ಥಾನಗಳನ್ನು ಗೆದ್ದಿದ್ದರೂ, ಚುನಾವಣಾ ಅಕ್ರಮಗಳಿಂದಾಗಿ ಆ ಸಂಖ್ಯೆಯನ್ನು ಅರ್ಧಕ್ಕೆ ಇಳಿಸಲಾಯಿತು '' ಪಿಟಿಐ ವಕ್ತಾರ ರವೂಫ್ ಹಸನ್ ಹೇಳಿಕೆಯೊಂದರಲ್ಲ ತಿಳಿಸಿದ್ದಾರೆ.

ಚುನಾವಣಾ ಅಕ್ರಮದ ಗಾತ್ರದಿಂದಾಗಿ 2024ರ ಸಾರ್ವತ್ರಿಕ ಚುನಾವಣೆಯು ಪಾಕಿಸ್ತಾನದ ಇತಿಹಾಸದಲ್ಲೇ ಸ್ಮರಿಸಲ್ಪಡಲಿದೆ ಎಂದು ಅವರು ಹೇಳಿದ್ದಾರೆ.

## ಅಮೇರಿಕ ಮಾಜಿ ಅಧ್ಯಕ್ಷ ಟ್ರಂಪ್‌ಗೆ 3ಸಾವಿರ ಕೋಟಿ ರೂಪಾಯಿ ದಂಡ

**ಅಮೇರಿಕ :** ಮಾಜಿ ಅಧ್ಯಕ್ಷ ಡೋನಾಲ್ಡ್ ಟ್ರಂಪ್ಗೆ ಇನ್ನೊಂದು ಶಾಕ್ ಎದುರಾಗಿದೆ. ತಮ್ಮ ಆಸ್ತಿ ಮೌಲ್ಯವನ್ನು ಹೆಚ್ಚಿಸಿದ್ದಕ್ಕಾಗಿ, ಟ್ರಂಪ್ಗೆ 3000 ಸಾವಿರ ಕೋಟಿ ರೂಪಾಯಿ ದಂಡ ಹೆಚ್ಚಿಸಲಾಗಿದೆ. ಇದರಿಂದ ಅವರು ಚುನಾವಣೆಗೆ ಸ್ಪರ್ಧಿಸುವಂತಿಲ್ಲ.

3 ವರ್ಷಗಳ ಕಾಲ ನ್ಯೂಯಾರ್ಕ್ನ ಯಾವುದೇ ಕಾರ್ಪೊರೇಶನ್ ಅಧಿಕಾರಿ, ನಿರ್ದೇಶಕರಾಗಿ ಸೇವೆ ಸಲ್ಲಿಸುವುದನ್ನು ಸಹ ನಿಷೇಧಿಸಲಾಗಿದೆ.

ಮತ್ತೆ ತಮ್ಮ ಅಧಿಕಾರವನ್ನು ಪಡೆದು, ದೊಡ್ಡಣ್ಣನ ಅಧ್ಯಕ್ಷನಾಗಿ ಮೆರೆಯಬೇಕು ಎಂದು ಟ್ರಂಪ್ ಸತತ ಪ್ರಯತ್ನ ಮಾಡುತ್ತಿದ್ದರು. ಆದರೆ ಈ ಶಿಕ್ಷೆಯಿಂದ ಅವರ ಚುನಾವಣೆಯ ಕನಸು ನನಸಾಗುವುದು ಡೌಟ್ ಎನ್ನಲಾಗಿದೆ. ಈ ಬಗ್ಗೆ ಟ್ರಂಪ್ ವಕೀಲರು ಮೇಲ್ಮನವಿ ಸಲ್ಲಿಸುವುದಾಗಿ ಹೇಳಿದ್ದಾರೆ.

ಇನ್ನು ಈ ಬಗ್ಗೆ ಮಾತನಾಡಿರುವ ಟ್ರಂಪ್ ನಾನು ಅನ್ಯಾಯವನ್ನು ಸಹಿಸುವುದಿಲ್ಲವೆಂದು ಹೇಳಿದ್ದಾರೆ. ಟ್ರಂಪ್



ಮೇಲೆ ಬರೀ ಆಸ್ತಿ ಮೌಲ್ಯ ಆರೋಪವಷ್ಟೇ ಅಲ್ಲ, ಇನ್ನೂ ಹಲವು ಆರೋಪಗಳಿವೆ. ಅವುಗಳ ಕೇಸ್ ಎಲ್ಲವೂ ಕೋರ್ಟ್ನಲ್ಲಿದ್ದು, ಇವೆಲ್ಲವೂ ಇತ್ಯರ್ಥವಾಗುವವರೆಗೂ ಟ್ರಂಪ್ ಇನ್ನೊಮ್ಮೆ ಅಧ್ಯಕ್ಷರಾಗುವ ಕನಸು ಕನಸಾಗೇ ಉಳಿಯಲಿದೆ.

## ಇಸ್ರೋ ಹವಾಮಾನ ಉಪಗ್ರಹ ಉಡಾವಣೆ ಯಶಸ್ವಿ

**ಶ್ರೀಹರಿಕೋಟಾ:** ನೂತನ ಹವಾಮಾನ ಉಪಗ್ರಹವಾದ ಇನ್ಸಾಟ್-3ಡಿಎಸ್ ಅನ್ನು ಇಸ್ರೋ ಶ್ರೀಹರಿಕೋಟಾದ ಸತೀಶ್ ಧವನ್ ಸ್ಪೇಸ್ ಸೆಂಟರ್ನಿಂದ ಶನಿವಾರ ಉಡಾವಣೆ ಮಾಡಿದೆ. ಹವಾಮಾನದ ಬಗ್ಗೆ ಮುನ್ಸೂಚನೆ ಒದಗಿಸಬಲ್ಲ ಉಪಗ್ರಹ ಇದಾಗಿದ್ದು, ಹವಾಮಾನ ಸೇವೆಗಳನ್ನು ಇನ್ನಷ್ಟು ಬಲಿಷ್ಠ ಮಾಡಿ, ಹವಾಮಾನ ಸಂಬಂಧಿತ ಸವಾಲುಗಳ ಸಿದ್ಧತೆಗೆ ವೇಗ ಕೊಡಲಿದೆ. ವಾಯುಮಂಡಲದ ಪರಿಸ್ಥಿತಿಗಳ ಬಗ್ಗೆ ಹೆಚ್ಚು ನಿಖರವಾದ ಮತ್ತು ಸಮಯೋಚಿತ ಡೇಟಾವನ್ನು ಒದಗಿಸಲು ವಿನ್ಯಾಸಗೊಳಿಸಲಾದ ಸುಧಾರಿತ ಪೇಲೋಡ್ಗಳನ್ನು ಹೊಂದಿದೆ. ಇದೇ ಮಾದರಿಯ ಇನ್ಸಾಟ್ 3ಡಿ ಮತ್ತು ಇನ್ಸಾಟ್ 3ಡಿಆರ್ ಯಶಸ್ವಿ ನಿಯೋಜನೆ ಮಾಡಲಾಗಿದ್ದು, ಎರಡೂ ಉಪಗ್ರಹಗಳು ದೇಶದ ಹವಾಮಾನ ವೀಕ್ಷಣೆ ಮತ್ತು ವಿಶ್ಲೇಷಣೆಯನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸಿವೆ.



## ನವಾಲ್ನಿ ಶ್ರದ್ಧಾಂಜಲಿ ಸಭೆಗಳಲ್ಲಿ ಪಾಲ್ಗೊಂಡ 100ಕ್ಕೂ ಅಧಿಕ ಮಂದಿಯ ಬಂಧನ

**ಮಾಸ್ಕೊ:** ಬಂಧನದಲ್ಲಿ ಮೃತಪಟ್ಟ ರಶ್ಯದ ಪ್ರತಿಪಕ್ಷ ನಾಯಕ ಅಲೆಕ್ಸಿ ನವಾಲ್ನಿ ಅವರ ಶ್ರದ್ಧಾಂಜಲಿ ಸಭೆಗಳಲ್ಲಿ ಪಾಲ್ಗೊಂಡ 100ಕ್ಕೂ ಅಧಿಕ ಮಂದಿಯನ್ನು ರಶ್ಯನ್ ಪೊಲೀಸರು ವಶಕ್ಕೆ ತೆಗೆದುಕೊಂಡಿದ್ದಾರೆಂದು ಮಾನವಹಕ್ಕು ಸಂಘಟನೆಯೊಂದು ಶನಿವಾರ ತಿಳಿಸಿದೆ.ಪುಟಿನ್ ಆಡಳಿತದ ಕಟ್ಟಾ ವಿರೋಧಿಯಾದ 47 ವರ್ಷ ವಯಸ್ಸಿನ ನವಾಲ್ನಿ ಅವರು ಆರ್ಕ್ ಟಿಕ್ನಲ್ಲಿ 19 ವರ್ಷದ ಜೈಲು ಶಿಕ್ಷೆ ಅನುಭವಿಸುತ್ತಿದ್ದರು. ಅವರ ನಿಧನದ ವಾರ್ತೆಯನ್ನು ರಶ್ಯದ ಅಧಿಕಾರಿಗಳು ಶುಕ್ರವಾರ ಪ್ರಕಟಿಸಿದ್ದರು. ನವಾಲ್ನಿ ಅವರ ಗೌರವಾರ್ಥ ರಶ್ಯದ ವಿವಿಧೆಡೆ ಶುಕ್ರವಾರ ರಾತ್ರಿ ಶ್ರದ್ಧಾಂಜಲಿ ಸಭೆಗಳು ನಡೆದಿದ್ದವು, ತಾತ್ಕಾಲಿಕವಾಗಿ ನಿರ್ಮಿಸಲಾದ ಸ್ಮಾರಕಗಳ ಮುಂದೆ ಪುಷ್ಪಗುಚ್ಛಗಳನ್ನಿರಿಸಿ ನವಾಲ್ನಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದರು.ರಶ್ಯದ ಎರಡನೆ ಅತಿ ದೊಡ್ಡ ನಗರವಾದ ಸೈಂಟ್ ಪೀಟರ್ಸ್‌ಬರ್ಗ್‌ನಲ್ಲಿ 64 ಮಂದಿ ಸೇರಿದಂತೆ 10 ನಗರಗಳಲ್ಲಿ ಶುಕ್ರವಾರ ನಡೆದ ನವಾಲ್ನಿ ಅವರ ಶ್ರದ್ಧಾಂಜಲಿ ಸಭೆಗಳಲ್ಲಿ ಪಾಲ್ಗೊಂಡ 101ಕ್ಕೂ ಅಧಿಕ ಮಂದಿಯನ್ನು ಬಂಧಿಸಲಾಗಿದೆಯೆಂದು ಒವಿಡಿ- ಇನ್ಫೊ ಮಾನವಹಕ್ಕುಗಳ ವೇದಿಕೆ ವರದಿ ಮಾಡಿದೆ. ರಾಜಧಾನಿ ಮಾಸ್ಕೊದಲ್ಲಿ 11 ಮಂದಿಯನ್ನು ಬಂಧಿಸಲಾಗಿದೆ. ನಿಝ್ನಿ ನೊವ್ಗೊರೊಡ್, ಕ್ರಾಸ್ನೊಡರ್, ರೊಸ್ತೊವ್-ಅನ್-ಡೊನ್ ಹಾಗೂ ಟ್ವೆರ್ ಸೇರಿದಂತೆ ವಿವಿಧ ನಗರಗಳಿಂದ ಹಲವಾರು ಮಂದಿಯನ್ನು ಬಂಧಿಸಲಾಗಿದೆಯೆಂದು ವರದಿ ತಿಳಿಸಿದೆ.

# ಭಾರತಕ್ಕೆ ಹೊರಟಿದ್ದ ತೈಲ ಟ್ಯಾಂಕರ್ ಮೇಲೆ 'ಕ್ಷಿಪಣಿ' ದಾಳಿ

**ನವದೆಹಲಿ:** ಭಾರತಕ್ಕೆ ಕಚ್ಚಾ ತೈಲವನ್ನು ಸಾಗಿಸುತ್ತಿದ್ದ ಪನಾಮ ಧ್ವಜದ ಟ್ಯಾಂಕರ್ ಮೇಲೆ ಕೆಂಪು ಸಮುದ್ರದಲ್ಲಿ ಕ್ಷಿಪಣಿ ದಾಳಿ ನಡೆಸಿದೆ ಎಂದು ಯುಎಸ್ ಸ್ಟೇಟ್ ಡಿಪಾರ್ಟ್ಮೆಂಟ್ ತಿಳಿಸಿದೆ.

ಯೆಮೆನ್ ನಿಂದ ಉಡಾಯಿಸಲಾದ ಕ್ಷಿಪಣಿಯು ಅದರ ಬಂದರು ಬದಿಯಲ್ಲಿರುವ ಎಂ / ಟಿ ಪೊಲೆಕ್ಸ್ ಗೆ ಅಪ್ಪಳಿಸಿದೆ ಎಂದು ವಿದೇಶಾಂಗ ಇಲಾಖೆ ತಿಳಿಸಿದೆ.

ಯೆಮೆನ್ ನ ಮೋಖಾ ಬಂದರಿನ ವಾಯುವ್ಯಕ್ಕೆ 72 ನಾಟಿಕಲ್ ಮೈಲಿ (133 ಕಿ.ಮೀ) ದೂರದಲ್ಲಿ ಪನಾಮ ಧ್ವಜ ಹೊಂದಿರುವ ಟ್ಯಾಂಕರ್ ಗೆ ಡಿಕ್ಕಿ ಹೊಡೆದಿದೆ ಎಂದು ಯುನೈಟೆಡ್ ಕಿಂಗ್ ಡಮ್ ಮೆರಿಟೈಮ್ ಟ್ರೇಡ್ ಆಪರೇಷನ್ಸ್ (ಯುಕೆಎಂಟಿಒ) ಏಜೆನ್ಸಿ ಮತ್ತು ಬ್ರಿಟಿಷ್ ಕಡಲ ಭದ್ರತಾ ಸಂಸ್ಥೆ ಅಂಬ್ರೆ ಮಾಹಿತಿ ನೀಡಿದೆ.

''ಹಡಗು? ಸಣ್ಣಪುಟ್ಟ ಹಾನಿಯಾಗಿದೆ ಎಂದು ವರದಿಯಾಗಿದೆ. ಸಿಬ್ಬಂದಿ ಸುರಕ್ಷಿತವಾಗಿದ್ದಾರೆ ಮತ್ತು ಯಾವುದೇ ಹಾನಿಯಾಗಿಲ್ಲ ಎಂದು ವರದಿಯಾಗಿದೆ'' ಎಂದು ಅಂಬ್ರೆ ಹೇಳಿದೆ.



## ಫಿಲಿಪೈನ್ಸ್‌ನಲ್ಲಿ 'ಭೂಕುಸಿತ': ಸಾವಿನ ಸಂಖ್ಯೆ ಏರಿಕೆ

ಫಿಲಿಪೈನ್ಸ್: ದಕ್ಷಿಣ ಫಿಲಿಪೈನ್ಸ್‌ನಲ್ಲಿ ದವಾವೊ ಡಿ ಒರೊ ಪ್ರಾಂತ್ಯದ ಗಣಿಗಾರಿಕೆ ಪಟ್ಟಣದಲ್ಲಿ ಭೂಕುಸಿತದಿಂದ ಸಾವನ್ನಪ್ಪಿದವರ ಸಂಖ್ಯೆ 98 ಕ್ಕೆ ಏರಿದೆ ಎಂದು ಪ್ರಾದೇಶಿಕ ವಿಪತ್ತು ತಡೆಗಟ್ಟುವ ಕಚೇರಿ ತಿಳಿಸಿದೆ.

ರಕ್ಷಕರು ನಾಪತ್ತೆಯಾಗಿರುವ ಇತರ ಒಂಬತ್ತು ಮಂದಿಗಾಗಿ ಹುಡುಕಾಟ ಮುಂದುವರೆಸಿದ್ದಾರೆ ಎಂದು ಮ್ಯಾಕೋ ಮುನ್ಸಿಪಲ್ ಡಿಸಾಸ್ಟರ್ ರಿಸ್ಕ್ ರಿಡಕ್ಷನ್ ಮತ್ತು ಮ್ಯಾನೇಜ್ಮೆಂಟ್ ಆಫೀಸ್ ಶನಿವಾರ ತಿಳಿಸಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಫೆಬ್ರುವರಿ 6 ರ ಸಂಜೆ ಪರ್ವತದ ಬದಿಯಿಂದ ಕೆಲವು ದಿನಗಳ ಮಳೆಯಿಂದ ಉಂಟಾದ ಕಲ್ಲುಗಳು, ಮಣ್ಣು ಮತ್ತು ಶಿಲಾಖಂಡರಾಶಿಗಳು, ಅದರ ಹಾದಿಯಲ್ಲಿ ಮನೆಗಳು ಮತ್ತು ವಾಹನಗಳನ್ನು ಹೂತುಹಾಕಿದವು, ಮ್ಯಾಕೋ ಪಟ್ಟಣದ ಹತ್ತಿರದ ಗಣಿಗಾರಿಕೆ ಸಂಸ್ಥೆಗೆ ಕಾರ್ಮಿಕರನ್ನು ಸಾಗಿಸಲು ಮತ್ತು ಅಲ್ಲಿಂದ ಹೊರಡಲು ಬಳಸುತ್ತಿದ್ದ ಎರಡು ಬಸ್ಸುಗಳು ಕಾಣೆಯಾಗಿವೆ. ಮೃತರಲ್ಲಿ ಬಸ್ಗಳಲ್ಲಿದ್ದ ಗಣಿ ಕಾರ್ಮಿಕರು ಸೇರಿದ್ದಾರೆ. ಮೂವತ್ತೆರಡು ಜನರಿಗೆ ಗಾಯಗಳಾಗಿವೆ.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಜಗ್ಗೇಶ್-ಗುರುಪ್ರಸಾದ್ ಜುಗಲ್ ಬಂದಿ: ರಂಗನಾಯಕ

ನವರಸ ನಾಯಕ ಜಗ್ಗೇಶ್ ಅಭಿನಯದ, ಮಠ ಗುರುಪ್ರಸಾದ್ ನಿರ್ದೇಶನದ ಬಹು ನಿರೀಕ್ಷಿತ ಚಿತ್ರ, ರಂಗನಾಯಕ ಮಾರ್ಚ್ ರಲ್ಲಿ ರಾಜ್ಯಾದ್ಯಂತ ಅದ್ದೂರಿಯಾಗಿ ತೆರೆಗೆ ಬರಲಿದೆ. ಪುಷ್ಪಕ ವಿಮಾನ ಖ್ಯಾತಿಯ ನಿರ್ಮಾಪಕ ವಿಖ್ಯಾತ್ ಅವರು ಈ ಚಿತ್ರವನ್ನು ಅದ್ದೂರಿಯಾಗಿ ನಿರ್ಮಾಣ ಮಾಡಿದ್ದಾರೆ. ಮಠ, ಎದ್ದೇಳು ಮಂಜುನಾಥ ಚಿತ್ರಗಳ ಮೂಲಕ ಹೊಸ ದಾಖಲೆಯನ್ನೇ ಸೃಷ್ಟಿಸಿದ್ದ ಗುರುಪ್ರಸಾದ್ ಜಗ್ಗೇಶ್ ಜೋಡಿ ನಗುವಿನ ಅಲೆ ಎಬ್ಬಿಸಲು ಮತ್ತೊಮ್ಮೆ ಪ್ರೇಕ್ಷಕರೆದುರು ಬರುತ್ತಿದ್ದಾರೆ.

ಶಿವರಾತ್ರಿಯ ವಿಶೇಷವಾಗಿ ಈ ಚಿತ್ರ, ಮಾರ್ಚ್ 8ರಂದು ಬಿಡುಗಡೆಯಾಗುತ್ತಿದೆ.15 ವರ್ಷಗಳ ನಂತರ ಮತ್ತೆ ಒಂದಾದ ಜಗ್ಗಣ್ಣ ಮತ್ತು ಗುರುಪ್ರಸಾದ್ ಜೋಡಿ ಈ ಸಲ ಪ್ರೇಕ್ಷಕರಿಗೆ ಯಾವರೀತಿ ಮೋಡಿ ಮಾಡುತ್ತಾರೆಂದು ಕಾದು ನೋಡಬೇಕಿದೆ. ಈ ಕುರಿತು ನಡೆದ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದ ಚಿತ್ರತಂಡ ಮಾಹಿತಿ ಹಂಚಿಕೊಂಡಿತು.!



ಜಗ್ಗೇಶ್, ಚೈತ್ರ ಕೊಟ್ಟೂರು ಮುಖ್ಯ ಭೂಮಿಕೆಯಲ್ಲಿ ನಟಿಸಿರುವ ಈ ಚಿತ್ರಕ್ಕೆ ಅನೂಪ್ ಸೀಳಿನ್ ಸಂಗೀತ ನೀಡಿದ್ದಾರೆ. ಕಾರ್ಯಕ್ರಮದಲ್ಲಿ ನಾಯಕನಟ ಜಗ್ಗೇಶ್ ಮಾತನಾಡುತ್ತ ಈ ಸಿನಿಮಾ ಸಂಪೂರ್ಣವಾಗಿ ಗುರುಪ್ರಸಾದ್ ಅವರ ಪ್ರಸಾದ ಎನ್ನುತ್ತ ಮಠ ಹಾಗೂ ಎದ್ದೇಳು ಮಂಜುನಾಥ ಸಿನಿಮಾದ ನೆನಪುಗಳನ್ನ ಮೆಲುಕು ಹಾಕಿದರು. ಗುರುಪ್ರಸಾದ್ ಜಗಮೊಂಡ, ಆತ ಯಾರು ಮಾತನ್ನೂ ಕೇಳೋನಲ್ಲ. ಮದವೇರಿದ ಒಂಟಿ ಸಲಗನಂತೆ ಎಂದು ನಿರ್ದೇಶಕರ ಕಾರ್ಯವೈಖರಿಯನ್ನು ಮೆಚ್ಚುಕೊಂಡರು. ವರ್ಷಕ್ಕೊಂದು ಸಿನಿಮಾ ಮಾಡಿದ್ರೆ ಕಂಡಿತಾ ಒಳ್ಳೆದಾಗತ್ತೆ ಎಂದು ಮಾತನಾಡಿದ ಜಗ್ಗೇಶ್, ಡಬ್ಬಿಂಗ್ ಸ್ಟುಡಿಯೋ ನಂಗೆ ತುಂಬಾ ಇಷ್ಟವಾದ ಜಾಗ ಎಂದರು. ಇಂಡಸ್ಟ್ರಿಯಲ್ಲಿ ಮತ್ತೊಂದು ಹೆಜ್ಜೆ ಮುಂದಿಟ್ಟ ನವರಸನಾಯಕ ಜಗ್ಗೇಶ್ ಫೈನ್ ಓನ್ ಅನ್ನೋ ಡಬ್ಬಿಂಗ್ ಸ್ಟುಡಿಯೋವನ್ನು ಶುರು ಮಾಡ್ತಿದ್ದಾರೆ.

ರಂಗನಾಯಕ ಒಂದು ಎಂಟರ್ ಟೈನಿಂಗ್ ಚಿತ್ರ. ಜನ ಥಿಯೇಟರ್ ಗೆ ಬಂದು ಬಾಯಿ ತುಂಬಾ ನಕ್ಕಿಟ್ರೆ ನಮಗೆ ಖುಷಿಯಾಗತ್ತೆ ಎಂದು ಡೋಲೊ 650 ಡೈಲಾಗ್ ಹೇಳಿದರು.

# ಕ್ರೀಂ ಚಿತ್ರದ ಟ್ರೈಲರ್ ರಿಲೀಸ್



ಕಿರಿಕ್ ಪಾರ್ಟಿ ಚಿತ್ರದ ಖ್ಯಾತಿಯ ನಟಿ ಸಂಯುಕ್ತ ಹೆಗ್ಡೆ ನಾಯಕಿಯಾಗಿ ನಟಿಸಿರುವ ‘ಕ್ರೀಂ’ ಚಿತ್ರದ ಟ್ರೈಲರ್ ಇತ್ತೀಚೆಗೆ ಬಿಡುಗಡೆಯಾಗಿದೆ. ಖ್ಯಾತ ಲೇಖಕ ಅಗ್ನಿ ಶ್ರೀಧರ್ ಅವರಿಂದ ಈ ಚಿತ್ರದ ಟ್ರೇಲರ್ ಅನಾವರಣವಾಯಿತು. ಡಿ.ಕೆ.ದೇವೇಂದ್ರ, ಅವರು ನಿರ್ಮಿಸಿರುವ ಈ ಚಿತ್ರವನ್ನು ಅಭಿಷೇಕ್ ಬಸಂತ್ ನಿರ್ದೇಶಿಸಿದ್ದಾರೆ. ಕಥೆ, ಚಿತ್ರಕಥೆ ಹಾಗೂ ಸಂಭಾಷಣೆಯನ್ನು ಅಗ್ನಿ ಶ್ರೀಧರ್ ಅವರು ಬರೆದಿದ್ದಾರೆ. ಈ ಚಿತ್ರದ ಪ್ರಮುಖಪಾತ್ರದಲ್ಲೂ ಅಗ್ನಿ ಶ್ರೀಧರ್ ನಟಿಸಿದ್ದಾರೆ.

ನನಗೆ ಬರವಣಿಗೆಯಲ್ಲಿ ಹೆಚ್ಚು ಆಸಕ್ತಿ. ನಟನೆಯಲ್ಲಿ ನನಗೆ ಆಸಕ್ತಿ ಇರಲಿಲ್ಲ ಎಂದು ಮಾತು ಆರಂಭಿಸಿದ ಅಗ್ನಿ ಶ್ರೀಧರ್, ನಿರ್ಮಾಪಕ ದೇವೇಂದ್ರ ಅವರು ನನ್ನನ್ನು ಈ ಪಾತ್ರ ನಿರ್ವಹಣೆ ಮಾಡಲು ಹೆಚ್ಚು ಒತ್ತಾಯಿಸಿದರು. ನಾನು ಆಗಲ್ಲ ಎಂದು ಹೇಳಿದೆ. ನಿರ್ಮಾಪಕರು ಹಾಗೂ ನನ್ನ ಹತ್ತಿರದವರ ಒತ್ತಾಯಕ್ಕೆ ನಾನು ನಟಿಸಲು ಒಪ್ಪಿಕೊಂಡೆ. ಈ ವಿಷಯವನ್ನು ಚಿತ್ರ ಬಿಡುಗಡೆಯಾಗುವವರೆಗೂ ಗೌಪ್ಯವಾಗಿಡೋಣ ಅಂತ ಹೇಳಿದ್ದೆ. ಆದರೆ ನಿರ್ಮಾಪಕರು ಟ್ರೇಲರ್ ನಲ್ಲೇ ನನ್ನನ್ನು ತೋರಿಸಿಬಿಟ್ಟಿದ್ದಾರೆ. ಇನ್ನು ‘ಕ್ರೀಂ’ ಎಂದರೆ ಬೀಜಾಕ್ಷರ ಮಂತ್ರ. ಈ ಚಿತ್ರದ ಕಥೆ ಹಣ ಹಾಗೂ ಅಧಿಕಾರಕ್ಕಾಗಿ ನಡೆಯುವ ಹೆಣ್ಣುಮಕ್ಕಳ ಬಲಿಯನ್ನು ಕುರಿತಾದ ಕಥಾಹಂದರ ಹೊಂದಿದೆ. ಈಗಲೂ ಕೂಡ ನಮ್ಮ ಊರು, ನಮ್ಮ ದೇಶ ಹಾಗೂ ವಿದೇಶಗಳಲ್ಲೂ ಈ ಕೃತ್ಯ ನಡೆಯುತ್ತಲೇ ಇದೆ. ಇಂತಹ ಸೂಕ್ಷ್ಮ ವಿಚಾರವನ್ನು ಈ ಚಿತ್ರದ ಮೂಲಕ ತೋರಿಸಲಾಗಿದೆ. ಅಭಿಷೇಕ್ ಬಸಂತ್ ಸೇರಿದಂತೆ ಎಲ್ಲಾ ತಂತ್ರಜ್ಞರ ಕಾರ್ಯವೈಖರಿ ಹಾಗೂ ಸಂಯುಕ್ತ ಹೆಗ್ಡೆ ಸೇರಿದಂತೆ ಎಲ್ಲಾ ಕಲಾವಿದರ ಅಭಿನಯ ಚೆನ್ನಾಗಿದೆ ಎಂದರು.





ನಾನು ಸಮಯಕ್ಕೆ ಹೆಚ್ಚು ಬೆಲೆ ಕೊಡುತ್ತೇನೆ. ಹಾಗಾಗಿ ಎಲ್ಲಾ ಕಲಾವಿದರ ಸಹಕಾರದಿಂದ ಚಿತ್ರೀಕರಣ ನಿಗದಿಯಂತೆ ಮುಕ್ತಾಯವಾಯಿತು. ವಿಭಿನ್ನ ಕಥಾಹಂದರ ಹೊಂದಿರುವ ಚಿತ್ರವನ್ನು ನನ್ನ ಮೊದಲ ನಿರ್ದೇಶನ ಮಾಡಬೇಕೆಂಬ ಆಸೆಯಿತ್ತು. ಅಗ್ನಿ ಶ್ರೀಧರ್ ಅವರ ಈ ಕಥೆ ಬಹಳ ಇಷ್ಟವಾಯಿತು. ನನ್ನ ಮೊದಲ ಚಿತ್ರಕ್ಕೆ ನಿಮ್ಮ ಬೆಂಬಲವಿರಲಿ ಎಂದರು ನಿರ್ದೇಶಕ ಅಭಿಷೇಕ್ ಬಸಂತ್.

ಐದು ವರ್ಷಗಳ ನಂತರ ನಾನು ನಟಿಸಿರುವ ಕನ್ನಡ ಸಿನಿಮಾ ಇದು. ನಾನು ಈವರೆಗೂ ಮಾಡಿರದ ಪಾತ್ರವಿದು. ಆಕ್ಷನ್ ಕೂಡ ಮಾಡಿದ್ದೇನೆ ಎಂದು ಸಂಯುಕ್ತ ಹೆಗ್ಡೆ ತಿಳಿಸಿದರು.

ನಮ್ಮ ಚಿತ್ರದಲ್ಲಿ ನಟಿಸಬೇಕಿದ್ದ ಖಳನಟರೊಬ್ಬರು ಕಾರಣಾಂತರದಿಂದ ನಟಿಸಲು ಆಗಲ್ಲ ಎಂದಾಗ ನಾನು ಹಾಗೂ ನಿರ್ದೇಶಕರು ಬಹಳ ಒತ್ತಡದಲ್ಲಿದ್ದೆವು. ಆಗ ನನಗೆ ಈ ಪಾತ್ರವನ್ನು ಅಗ್ನಿ ಶ್ರೀಧರ್ ಅವರು ಮಾಡಿದರೆ ಚೆನ್ನಾಗಿರುತ್ತದೆ ಎಂದು ಅನಿಸಿತು. ಅವರ ಬಳಿ ನೀವೇ ಈ ಪಾತ್ರ ಮಾಡಬೇಕು ಎಂದು ಹೇಳಿದಾಗ ಅವರು ಒಪ್ಪಲಿಲ್ಲ. ನಂತರ ಬಹಳ ಕಷ್ಟಪಟ್ಟು ಅವರನ್ನು ಒಪ್ಪಿಸಿದ್ದೆವು. ಚಿತ್ರತಂಡದ ಸಹಕಾರದಿಂದ ಕ್ರೀಂ ಚಿತ್ರ ಚೆನ್ನಾಗಿ ಬಂದಿದೆ. ಇದೇ ಮಾರ್ಚ್ ಒಂದರಂದು ಬಿಡುಗಡೆಯಾಗುತ್ತಿದೆ ಎಂದರು ನಿರ್ಮಾಪಕ ದೇವೇಂದ್ರ.

# ಪತ್ನಿಗೆ ಲೋಕಲ್ ಐಸ್ ಕ್ಯಾಂಡಿ ಕೊಡಿಸಿದ ನಟ ಯಶ್

ಟಾಕ್ಸಿಕ್ ಸಿನಿಮಾ ನಡುವೆಯೂ ನಟ ಯಶ್ ಟೆಂಪಲ್ ರನ್ ಮಾಡುತ್ತಿದ್ದಾರೆ. ನಿನ್ನೆಯಷ್ಟೇ ಪತ್ನಿ ರಾಧಿಕಾ ಪಂಡಿತ್ ಜೊತೆ ಭಟ್ಕಳದ ಶಿರಾಲಿಯ ಚಿತ್ರಾಪುರ ಮಠಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದಿದ್ದಾರೆ. ದರ್ಶನದ ನಂತರ ಸ್ಥಳೀಯ ಕಾಂಡಿಮೆಂಟ್ಸ್ ಗೆ ತೆರಳಿ ಪತ್ನಿಗೆ ಐಸ್ ಕ್ಯಾಂಡಿ ಕೊಡಿಸಿದ್ದಾರೆ. ಆ ಫೋಟೋ ಸಖತ್ ಮೆಚ್ಚುಗೆಗೆ ಪಾತ್ರವಾಗುತ್ತಿದೆ.

ಮೊನ್ನೆಯಷ್ಟೇ ಗೆಳೆಯನ ಜಿಮ್ ಉದ್ಘಾಟಿಸಿದ್ದ ಯಶ್, ಆನಂತರ ದೇವಸ್ಥಾನ ಸುತ್ತುತ್ತಿದ್ದಾರೆ. ಹಾಗಾಗಿ ಟಾಕ್ಸಿಕ್ ಸಿನಿಮಾ ಬಗ್ಗೆ ಅಭಿಮಾನಿಗಳು ಅಪ್ ಡೇಟ್ ಕೇಳಿದ್ದಾರೆ. ಅದಕ್ಕೂ ಯಶ್ ಉತ್ತರ ಕೊಟ್ಟಿದ್ದಾರೆ. ‘ಟಾಕ್ಸಿಕ್’ ಶೂಟಿಂಗ್ ಇಷ್ಟರಲ್ಲೇ ಶುರು ಆಗಲಿದೆ. ದೊಡ್ಡ ಮಟ್ಟದ ಪ್ಲಾನ್ ನಡೀತಿದೆ. ‘ಟಾಕ್ಸಿಕ್’ ಚಿತ್ರದ ಬಗ್ಗೆ ಯಾವುದೇ ಕಾಂಪ್ರಮೈಸ್ ಇಲ್ಲದೇ ಮಾಡುತ್ತಿರುವ ಸಿನಿಮಾ ಆಗಿದೆ. ಸದ್ಯದಲ್ಲೇ ಸಿನಿಮಾ ಬಗ್ಗೆ ಹೆಚ್ಚಿನ ಮಾಹಿತಿ ನೀಡುವುದಾಗಿ ಯಶ್ ಹೇಳಿದ್ದಾರೆ.



ಇಂದು ಕನ್ನಡ ಸಿನಿಮಾರಂಗವನ್ನು ಪರಭಾಷಿಗರು ನೋಡುತ್ತಿರುವ ರೀತಿ ಬಗ್ಗೆ ಯಶ್ ಪ್ರತಿಕ್ರಿಯಿಸಿ, ಹೌದು ಇಂದು ಬೇರೇ ಚಿತ್ರರಂಗದವರು ನಮ್ಮನ್ನು ನೋಡುವ ರೀತಿ ಬದಲಾಗಿದೆ.

ನನ್ನಿಂದ ಕನ್ನಡ ಚಿತ್ರರಂಗ ಅಲ್ಲ. ಚಿತ್ರರಂಗಕ್ಕಾಗಿ ನಾನು ಏನು ಮಾಡ್ಬೇಕು ಅಂತಾ ಸದಾ ಯೋಚನೆ ಮಾಡ್ತಿದ್ದೀನಿ. ಹೊಸ ಹೀರೋಗಳಿಗೆ ಬೆಂಬಲಿಸಿ. 4 ಜನ ಹೀರೋಗಳಿಗಷ್ಟೇ ಸಿನಿಮಾ ಮಾಡಿ ಅಂತಾ ಹೇಳೋದಲ್ಲ. ಮಾಡಿರುವ ಸಿನಿಮಾಗಳೆಲ್ಲ ಹಿಟ್ ಆಗಲ್ಲ. ಬರುತ್ತಿರುವ ಸಿನಿಮಾಗಳಿಗೆ ಸಪೋರ್ಟ್ ಮಾಡಿ ಎಂದು ಯಶ್ ಹೇಳಿದ್ದಾರೆ.

ಚಾನಲ್ ಸ್ಯಾಟಲೈಟ್ ರೈಟ್ಸ್ ತಗೋಬೇಕು. ಆಗ ಸಿನಿಮಾಗಳ ಸಂಖ್ಯೆ ಜಾಸ್ತಿ ಆಗುತ್ತದೆ. ಚಿತ್ರರಂಗದವರು ನೆಗೆಟಿವ್ ಆಗಿ ಥಿಂಕ್ ಮಾಡಬೇಡಿ. ಪ್ರಶಾಂತ್ ನೀಲ್ ‘ಉಗ್ರಂ’ ಸಿನಿಮಾ ಮಾಡಿದಾಗ ಯಾರೂ ಸ್ಯಾಟಲೈಟ್ ರೈಟ್ಸ್ ತೆಗೆದುಕೊಂಡಿಲ್ಲ. ರಿಲೀಸ್ ಆದ್ಮೇಲೆ ಎಲ್ಲಾ ಆ ಚಿತ್ರದ ಮಾತನಾಡಿದ್ದರು. ಪ್ರತಿಭೆ ಇರೋರನ್ನು ಬೆಳೆಸಿ, ಹೊಸಬರ ಸಿನಿಮಾಗಳಿಗೂ ಪ್ರೋತ್ಸಾಹ ನೀಡಿ ಎಂದು ಯಶ್ ಮನವಿ ಮಾಡಿದ್ದರು.

**ಮಿಯಾ ಮ್ಯಾಜಿಕ್**

# ವಿಶೇಷ ಮೈಲುಗಲ್ಲು ದಾಟಿದ ಸಿರಾಜ್

ರಾಜ್‌ಕೋಟ್‌ನಲ್ಲಿ ನಡೆಯುತ್ತಿರುವ ಇಂಗ್ಲೆಂಡ್ ವಿರುದ್ಧದ 3ನೇ ಟೆಸ್ಟ್ ಪಂದ್ಯದಲ್ಲಿ ಮೊಹಮ್ಮದ್ ಸಿರಾಜ್ ಭರ್ಜರಿ ಬೌಲಿಂಗ್ ಪ್ರದರ್ಶಿಸಿದ್ದಾರೆ. ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ 445 ರನ್ ಕಲೆಹಾಕಿತು. ಇದಕ್ಕುತ್ತರವಾಗಿ ಇನಿಂಗ್ಸ್ ಆರಂಭಿಸಿದ ಇಂಗ್ಲೆಂಡ್ ತಂಡವು 2ನೇ ದಿನದಾಟದ ಅಂತ್ಯಕ್ಕೆ 2 ವಿಕೆಟ್ ಕಳೆದುಕೊಂಡು 207 ರನ್ ಕಲೆಹಾಕಿತ್ತು.



ಅದರಂತೆ ಮೂರನೇ ದಿನದಾಟ ಶುರು ಮಾಡಿದ ಆಂಗ್ಲರನ್ನು ಕಟ್ಟಿ ಹಾಕುವಲ್ಲಿ ಟೀಮ್ ಇಂಡಿಯಾ ಬೌಲರ್‌ಗಳು ಯಶಸ್ವಿಯಾಗಿದ್ದಾರೆ. ಅದರಲ್ಲೂ ಕರಾರುವಾಕ್ ದಾಳಿ ಸಂಘಟಿಸಿದ ಮೊಹಮ್ಮದ್ ಸಿರಾಜ್ 21.1 ಓವರ್‌ಗಳಲ್ಲಿ 84 ರನ್ ನೀಡಿ 4 ವಿಕೆಟ್ ಕಬಳಿಸಿದರು. ಈ ಮೂಲಕ ಇಂಗ್ಲೆಂಡ್ ತಂಡ 319 ರನ್‌ಗಳಿಗೆ ಆಲೌಟ್ ಆಗುವಲ್ಲಿ ಪ್ರಮುಖ ಪಾತ್ರವಹಿಸಿದರು.

ವಿಶೇಷ ಎಂದರೆ ಈ ನಾಲ್ಕು ವಿಕೆಟ್‌ಗಳೊಂದಿಗೆ ಮೊಹಮ್ಮದ್ ಸಿರಾಜ್ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ 150 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಈ ಮೂಲಕ ಈ ಸಾಧನೆ ಮಾಡಿದ ಭಾರತದ 33ನೇ ಬೌಲರ್ ಎನಿಸಿಕೊಂಡಿದ್ದಾರೆ.

ಇದುವರೆಗೆ ಕೇವಲ 76 ಇನಿಂಗ್ಸ್‌ಗಳಲ್ಲಿ ಬೌಲಿಂಗ್ ಮಾಡಿರುವ ಮೊಹಮ್ಮದ್ ಸಿರಾಜ್ ಏಕದಿನ ಕ್ರಿಕೆಟ್‌ನಲ್ಲಿ 68 ವಿಕೆಟ್, ಟಿ20 ಯಲ್ಲಿ 12 ವಿಕೆಟ್ ಹಾಗೂ ಟೆಸ್ಟ್ ಕ್ರಿಕೆಟ್‌ನಲ್ಲಿ 78 ವಿಕೆಟ್ ಗಳನ್ನು ಕಬಳಿಸಿದ್ದಾರೆ. ಈ ಮೂಲಕ ಒಟ್ಟು 152 ವಿಕೆಟ್‌ಗಳ ಸಾಧನೆ ಮಾಡಿದ್ದಾರೆ.

ಮೊಹಮ್ಮದ್ ಸಿರಾಜ್ ಅವರ ಈ ಭರ್ಜರಿ ಬೌಲಿಂಗ್ ಪ್ರದರ್ಶನದಿಂದಾಗಿ ಇಂಗ್ಲೆಂಡ್ ತಂಡವು ಮೊದಲ ಇನಿಂಗ್ಸ್‌ನಲ್ಲಿ ಕೇವಲ 319 ರನ್ ಗಳಿಗೆ ಆಲೌಟ್ ಆಗಿದೆ. ಇದರೊಂದಿಗೆ ಟೀಮ್ ಇಂಡಿಯಾನ ಪ್ರಥಮ ಇನಿಂಗ್ಸ್‌ನಲ್ಲಿ 126 ರನ್‌ಗಳ ಬೃಹತ್ ಮುನ್ನಡೆ ಪಡೆದುಕೊಂಡಿದೆ.

ಇದೀಗ 126 ರನ್‌ಗಳ ಮುನ್ನಡೆಯೊಂದಿಗೆ ಭಾರತ ತಂಡವು ದ್ವಿತೀಯ ಇನಿಂಗ್ಸ್ ಆರಂಭಿಸಿದೆ. ಈ ಮೂಲಕ 3ನೇ ದಿನದಾಟದಲ್ಲೇ ಬೃಹತ್ ಮೊತ್ತ ಪೇರಿಸುವ ಇರಾದೆಯಲ್ಲಿದೆ. ಸದ್ಯದ ಮಟ್ಟಿಗೆ ಈ ಪಂದ್ಯದಲ್ಲಿ ಭಾರತ ತಂಡವು ಮೇಲುಗೈ ಹೊಂದಿದ್ದು, ನಾಲ್ಕನೇ ದಿನದಾಟದ 2ನೇ ಸೆಷನ್‌ವರೆಗೂ ಟೀಮ್ ಇಂಡಿಯಾ ಬ್ಯಾಟಿಂಗ್ ಮುಂದುವರೆಸುವ ಸಾಧ್ಯತೆ ಹೆಚ್ಚಿದೆ.

# ಭಾರತ ಭರ್ಜರಿ ಬೌಲಿಂಗ್: ಇಂಗ್ಲೆಂಡ್ ಆಲೌಟ್

ರಾಜ್‌ಕೋಟ್‌ನ ನಿರಂಜನ್ ಶಾ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆಯುತ್ತಿರುವ ಭಾರತದ ವಿರುದ್ಧ 3ನೇ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಇಂಗ್ಲೆಂಡ್ ತಂಡ 319 ರನ್‌ಗಳಿಗೆ ಆಲೌಟ್ ಆಗಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಭಾರತ ತಂಡ ಬ್ಯಾಟಿಂಗ್ ಆಯ್ದುಕೊಂಡಿತು. ಅದರಂತೆ ಇನಿಂಗ್ಸ್ ಆರಂಭಿಸಿದ ಟೀಮ್ ಇಂಡಿಯಾ ಉತ್ತಮ ಆರಂಭ ಪಡೆದಿರಲಿಲ್ಲ.



ಆರಂಭಿಕ ಆಟಗಾರ ಯಶಸ್ವಿ ಜೈಸ್ವಾಲ್ (10) ಬೇಗನೆ ಔಟಾದರೆ, ಆ ಬಳಿಕ ಬಂದ ಶುಭ್‌ಮನ್ ಗಿಲ್ (0) ಸೊನ್ನೆ ಸುತ್ತಿದರು. ಇನ್ನು ರಜತ್ ಪಾಟಿದಾರ್ 5 ರನ್‌ಗಳಿಸಿ ನಿರ್ಗಮಿಸಿದರು. ಈ ಹಂತದಲ್ಲಿ ಜೊತೆಗೂಡಿದ ರೋಹಿತ್ ಶರ್ಮಾ ಹಾಗೂ ರವೀಂದ್ರ ಜಡೇಜಾ ಭರ್ಜರಿ ಜೊತೆಯಾಟ ಪ್ರದರ್ಶಿಸಿದರು.

196 ಎಸೆತಗಳನ್ನು ಎದುರಿಸಿದ ರೋಹಿತ್ ಶರ್ಮಾ 3 ಭರ್ಜರಿ ಸಿಕ್ಸರ್ ಹಾಗೂ 14 ಫೋರ್ ಗಳೊಂದಿಗೆ 131 ರನ್ ಬಾರಿಸಿದರು. ಅಲ್ಲದೆ 4ನೇ ವಿಕೆಟ್‌ಗೆ 204 ರನ್‌ಗಳ ಜೊತೆಯಾಟವಾಡಿ ಔಟಾದರು. ಇದಾದ ಬಳಿಕ ಕ್ರೀಸ್‌ಗೆ ಆಗಮಿಸಿದ ಸರ್ಫರಾಝ್ ಖಾನ್ (62) ಬಿರುಸಿನ ಅರ್ಧಶತಕ ಸಿಡಿಸಿ ರನೌಟ್ ಆದರು.

ಹಾಗೆಯೇ ರವೀಂದ್ರ ಜಡೇಜಾ 112 ರನ್ ಗಳ ಕೊಡುಗೆ ನೀಡಿದರು. ಈ ಮೂಲಕ ಟೀಮ್ ಇಂಡಿಯಾ ಮೊದಲ ಇನಿಂಗ್ಸ್‌ನಲ್ಲಿ 445 ರನ್ ಗಳನ್ನು ಕಲೆಹಾಕಿತು. ಇದಕ್ಕುತ್ತರವಾಗಿ ಇನಿಂಗ್ಸ್ ಆರಂಭಿಸಿದ ಇಂಗ್ಲೆಂಡ್ ತಂಡಕ್ಕೆ ಬೆನ್ ಡಕೆಟ್ ಸ್ಪೋಟಕ ಆರಂಭ ಒದಗಿಸಿದ್ದರು. ಬಿರುಸಿನ ಬ್ಯಾಟಿಂಗ್ ಪ್ರದರ್ಶಿಸಿದ ಡಕೆಟ್ ಕೇವಲ 88 ಎಸೆತಗಳಲ್ಲಿ ಭರ್ಜರಿ ಶತಕ ಸಿಡಿಸಿದ್ದರು. ಆದರೆ ಮತ್ತೊಂದೆಡೆ ಝೂಕ್ ಕ್ರಾಲಿ (15) ವಿಕೆಟ್ ಪಡೆಯುವ ಮೂಲಕ ರವಿಚಂದ್ರನ್ ಅಶ್ವಿನ್ ಟೆಸ್ಟ್ ಕ್ರಿಕೆಟ್‌ನಲ್ಲಿ 500 ವಿಕೆಟ್‌ಗಳ ಸಾಧನೆ ಮಾಡಿದರು.

ಇನ್ನು ಒಲೀ ಪೋಪ್ (39), ಜೋ ರೂಟ್ (18) ಒಂದಷ್ಟು ಹೊತ್ತು ಕ್ರೀಸ್‌ನಲ್ಲಿದ್ದು ಔಟಾದರೆ, ಜಾನಿ ಬೈರ್‌ಸ್ಟೋವ್ (0) ಬಂದ ವೇಗದಲ್ಲೇ ಹಿಂತಿರುಗಿದ್ದರು. ಇದಾದ ಬಳಿಕ ಕಣಕ್ಕಿಳಿದ ಬೆನ್ ಸ್ಟೋಕ್ಸ್ 41 ರನ್‌ಗಳೊಂದಿಗೆ ತಂಡಕ್ಕೆ ಆಸರೆಯಾಗಿ ನಿಂತರು. ಆದರೆ ಜಡೇಜಾ ಎಸೆತದಲ್ಲಿ ಸ್ಟೋಕ್ಸ್ ಕ್ಯಾಚಿತ್ತು ನಿರ್ಗಮಿಸಿದರು. ಇದರ ಬೆನ್ನಲ್ಲೇ ಬೆನ್ ಫೋಕ್ಸ್ (13) ಪೆವಿಲಿಯನ್ ಹಾದಿ ತೋರಿಸುವಲ್ಲಿ ಮೊಹಮ್ಮದ್ ಸಿರಾಜ್ ಯಶಸ್ವಿಯಾದರು.

ರೆಹಾನ್ ಅಹ್ಮದ್ (6) ರನ್ನು ಕ್ಲೀನ್ ಬೌಲ್ಡ್ ಮಾಡುವ ಮೂಲಕ ಸಿರಾಜ್ ಭಾರತಕ್ಕೆ 8ನೇ ಯಶಸ್ಸು ತಂದುಕೊಟ್ಟರೆ, ಟಾಮ್ ಹಾರ್ಟ್ಲಿ (9) ಜಡೇಜಾ ಎಸೆತದಲ್ಲಿ ಸ್ಟಂಪ್ ಔಟ್ ಆದರು. ಇನ್ನು ಜೇಮ್ಸ್ ಆಂಡರ್ಸನ್ (1) ಅವರನ್ನು ಕ್ಲೀನ್ ಬೌಲ್ಡ್ ಮಾಡಿ ಸಿರಾಜ್ ಇಂಗ್ಲೆಂಡ್ ತಂಡವನ್ನು 319 ರನ್‌ಗಳಿಗೆ ಆಲೌಟ್ ಮಾಡಿದರು. ಭಾರತದ ಪರ ಮೊಹಮ್ಮದ್ ಸಿರಾಜ್ 4 ವಿಕೆಟ್ ಕಬಳಿಸಿ ಮಿಂಚಿದರೆ, ರವೀಂದ್ರ ಜಡೇಜಾ ಹಾಗೂ ಕುಲ್ದೀಪ್ ಯಾದವ್ ತಲಾ 2 ವಿಕೆಟ್ ಪಡೆದರು.

ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಟೀಮ್ ಇಂಡಿಯಾ 445 ರನ್ ಕಲೆಹಾಕಿದರೆ, ಇಂಗ್ಲೆಂಡ್ ತಂಡ 3190 ರನ್‌ಗಳಿಗೆ ಆಲೌಟ್ ಆಗಿದೆ. ಇದರೊಂದಿಗೆ ಭಾರತ ತಂಡವು ಮೊದಲ ಇನಿಂಗ್ಸ್ ನಲ್ಲಿ 126 ರನ್‌ಗಳ ಬೃಹತ್ ಅಂತರದ ಮುನ್ನಡೆ ಪಡೆದುಕೊಂಡಿದೆ.

**ಸಿನಿಮಾಗಳಲ್ಲಿ ನೇಮ ಅನುಕರಣೆ**

# ದೈವಾರಾಧಕರ ಹೋರಾಟಕ್ಕೆ ವಿಹೆಚ್‌ಪಿ

**ಮಂಗಳೂರು:** ಧಾರವಾಹಿ, ಸಿನಿಮಾಗಳಲ್ಲಿ ದೈವರಾಧನೆಗೆ ಅಪಮಾನವಾಗುತ್ತಿರುವ ವಿಚಾರವಾಗಿ ದೈವಾರಾಧಕರು ನಡೆಸುತ್ತಿರುವ ಹೋರಾಟಕ್ಕೆ ವಿಶ್ವ ಹಿಂದೂ ಪರಿಷತ್ ಬಜರಂಗದಳ ಬೆಂಬಲ ವ್ಯಕ್ತಪಡಿಸಿದೆ. ದೈವರಾಧನೆಗೆ ಅಪಮಾನವಾಗುತ್ತಿರುವ ಸಂಬಂಧ ಕ್ರಮ ಕೈಗೊಳ್ಳಲು ದಕ್ಷಿಣ ಕನ್ನಡ ಜಿಲ್ಲಾಧಿಕಾರಿಗೆ ತುಳುನಾಡ ದೈವರಾಧನ ಸಂರಕ್ಷಣಾ ವೇದಿಕೆ ಮನವಿ ಮಾಡಿದೆ.

ಮುಂದೆ ಸಿನಿಮಾ, ಧಾರಾವಾಹಿ, ನಾಟಕಗಳಲ್ಲಿ ದೈವಾರಾಧನೆಯ ಪ್ರದರ್ಶನವಾಗಬಾರದು ಎಂದು ವಿಶ್ವ ಹಿಂದೂ ಪರಿಷತ್ ಮುಖಂಡ ಶರಣ್ ಪಂಪುವೆಲ್ ಎಚ್ಚರಿಕೆ ನೀಡಿದ್ದಾರೆ. ಕರಾವಳಿಯಲ್ಲಿ ದೈವರಾಧನೆಗೆ ಆದರದ್ದೆ ಆದ ಮಹತ್ವವಿದೆ. ಆದರೆ ಚಲನಚಿತ್ರ, ಧಾರವಾಹಿ, ನಾಟಕಗಳಲ್ಲಿ ನಮ್ಮ ನಂಬಿಕೆಗೆ ಧಕ್ಕೆ ತರುವಂತಹ ಕೆಲಸ ಆಗುತ್ತಿದೆ. ಇದನ್ನು ವಿಎಚ್‌ಪಿ ಬಜರಂಗದಳ ವಿರೋಧಿಸುತ್ತದೆ. ದೈವರಾಧಕರ ಹೋರಾಟಕ್ಕೆ ಬೆಂಬಲ ನೀಡುತ್ತೇವೆ ಎಂದರು.

ಚಲನಚಿತ್ರ ಮಾಡುವ ಬಗ್ಗೆ ನಮ್ಮದೇನು ವಿರೋಧವಿಲ್ಲ. ಸಿನಿಮಾ, ಧಾರವಾಹಿಗಳಲ್ಲಿ ದೈವದ ಕಥೆ, ಇತಿಹಾಸ, ಚರಿತ್ರೆ, ನಂಬಿಕೆ ಹೇಳಲಿ. ಆದರೆ ಕೋಲ, ನೇಮೋತ್ಸವದ ಅನುಕರಣೆ ಮಾಡಬಾರದು. ಕಾಲಿಗೆ ಗಗ್ಗರ ಹಾಕೋದಕ್ಕೆ ಒಂದು ಕ್ರಮ ಹಾಗೂ ಅದರದ್ದೇ ಆದ ರೀತಿ ನೀತಿಗಳು ಇವೆ. ವೇಷಭೂಷಣ ಹಾಕುವುದಾದರೂ ಅದರದ್ದೇ ಆದ ಮಹತ್ವವಿದೆ. ಆದರೆ ಅದೆಲ್ಲಾವನ್ನು ಗಾಳಿಗೆ ತೂರಿ ದಾರಿಗೆ ತರಲಾಗುತ್ತಿದೆ ಎಂದರು.

**ಬೇರೆ ಧರ್ಮದ ದೇವರ ಫಿಲ್ಮ್ ತೆಗೆಯುವ ಧೈರ್ಯ ಇದೆಯಾ :** ದುಡ್ಡಿಗೆ, ಪ್ರಚಾರಕ್ಕಾಗಿ ದೈವಾರಾಧನೆಯನ್ನು ಚಲನಚಿತ್ರದಲ್ಲಿ ತೋರಿಸುವುದು ಸರಿಯಲ್ಲ. ಚಲನಚಿತ್ರ ನಿರ್ಮಾಪಕರಿಗೆ ತಾಕತ್ತು ಇದ್ದರೆ ಹಿಂದುಗಳು ಅಲ್ಲದ ಬೇರೆ ಸಮುದಾಯದ ಧಾರ್ಮಿಕ ಆಚರಣೆ ಚಿತ್ರೀಕರಣ ಮಾಡಲಿ. ನಾಟಕ, ಫಿಲ್ಮ್ ತೆಗೆದು ತೋರಿಸಲಿ. ಆ ಧೈರ್ಯ ಇದೆಯಾ ನಾವು ಸುಮ್ಮನೆ ಕುಳಿತುಕೊಳ್ಳುತ್ತೇವೆ ಎಂದು ಈ ರೀತಿ ಮಾಡುವುದು ಸರಿಯಲ್ಲ ಎಂದರು.



ದೈವರಾಧಕರ ಹೋರಾಟಕ್ಕೆ ಪೂರ್ತಿ ಬೆಂಬಲವನ್ನು ವಿಹೆಚ್‌ಪಿ, ಬಜರಂಗದಳ ನೀಡುತ್ತದೆ. ಜಿಲ್ಲಾಧಿಕಾರಿಗಳು ಏನು ಕ್ರಮ ತೆಗೆದುಕೊಳ್ಳುತ್ತಾರೆ ಎಂದು ಕಾದು ನೋಡುತ್ತೇವೆ. ಮುಂದಿನ ದಿನದಲ್ಲಿ ಮತ್ತೆ ಕೂತು ಯಾವ ರೀತಿಯ ಹೋರಾಟ ಮಾಡಬಹುದು ಎಂದು ಯೋಚಿಸುತ್ತೇವೆ ಎಂದರು.

**ಏನಿದು ಪ್ರಕರಣ :** ನಟ ರಿಷಬ್ ಶೆಟ್ಟಿ ಅಭಿನಯದ ಸೂಪರ್ ಹಿಟ್ ಕಾಂತರ ಸಿನಿಮಾವು ಬಣ್ಣದ ಲೋಕದಲ್ಲಿ ಧೂಳೆಬ್ಬಿಸಿತ್ತು. ದೈವದ ಕುರಿತ ಈ ಸಿನಿಮಾ ಪ್ರಸಾರದ ನಂತರ ಕೋಲ, ನೇಮೋತ್ಸವದ ರೀತಿ ಬಣ್ಣ ಹಚ್ಚಿ ಅನುಕರಣೆ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಪ್ರಚಾರ ಪಡೆಯುವ ಗೀಳು ಆರಂಭವಾಯಿತು. ಚಪ್ಪಲಿ ಹಾಕಿಕೊಂಡು ಅಣುಕಿಸಲಾಗಿತ್ತು. ಇದು ದೈವ ಭಕ್ತರ ನಂಬಿಕೆಗೆ ಘಾಸಿ ಉಂಟು ಮಾಡಿದ್ದಲ್ಲದೆ ದೈವಾರಾಧಕರ ಹೋರಾಟಕ್ಕೆ ಕಾರಣವಾಯಿತು.

ಕಾಂತಾರ ಭಾಗ 2 ರ ಕೆಲಸ ಕಾರ್ಯಗಳು ನಡೆಯುತ್ತಿರುವ ನಡುವೆ ಕನ್ನಡದ ಖಾಸಗಿ ವಾಹಿನಿಯಲ್ಲಿ ಪ್ರಸಾರವಾಗುವ ಧಾರವಾಹಿಯ ಪ್ರೋಮೋದಲ್ಲಿ ದೈವದಂತೆ ವೇಷ ಭೂಷಣ ಧರಿಸಿ ನಟನೆ ಮಾಡಲಾಗಿತ್ತು. ಹೀಗಾಗಿ ದೈವಾರಾಧಕರು ಗರಂ ಆಗಿದ್ದು ಕಾನೂನು ಹೋರಾಟಕ್ಕೆ ಇಳಿದಿದ್ದಾರೆ. ಇತ್ತೀಚೆಗಷ್ಟೇ ದೈವಗಳ ಹೆಸರಲ್ಲಿ ದಂಧೆಗೆ ಇಳಿದವರ ವಿರುದ್ಧ ದೈವಾರಾಧಕರು ಕೊರಗಜ್ಜನ ಮೊರೆ ಹೋಗಿದ್ದ ಘಟನೆ ನಡೆದಿತ್ತು.

# ವಿ. ಸೋಮಣ್ಣ ಲೋಕಸಭೆಗೆ ಸ್ಪರ್ಧಿಸುವುದು ಬಹುತೇಕ ಫಿಕ್ಸ್!

**ಬೆಂಗಳೂರು:** ಲೋಕಸಭಾ ಚುನಾವಣೆ ಹತ್ತಿರ ಬರುತ್ತಿದ್ದಂತೆ ಒಬ್ಬೊಬ್ಬರಾಗಿಯೇ ಎಲ್ಲಾ ಪಕ್ಷಗಳಲ್ಲಿಯೂ ಟಿಕೆಟ್ ಆಕಾಂಕ್ಷಿಗಳಾಗಿ ಗುರುತಿಸಿಕೊಳ್ಳುತ್ತಿದ್ದಾರೆ. ಇದೀಗ ಕಳೆದ ವಿಧಾನಸಭಾ ಚುನಾವಣೆಯಲ್ಲಿ 2 ಕ್ಷೇತ್ರಗಳಲ್ಲಿ ಸ್ಪರ್ಧಿಸಿ ಸೋತಿದ್ದ ಮಾಜಿ ಸಚಿವ ವಿ ಸೋಮಣ್ಣ ಕೂಡ ಲೋಕಸಭೆಗೆ ಸ್ಪರ್ಧಿಸಲು ಇಂಗಿತ ವ್ಯಕ್ತಪಡಿಸಿದ್ದಾರೆ.

ಈ ಸಂಬಂಧ ಮಾಧ್ಯಮಗಳ ಜೊತೆ ಮಾತನಾಡಿರುವ ಮಾಜಿ ಸಚಿವ ವಿ ಸೋಮಣ್ಣ, ನಾನು ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸೋದಕ್ಕೆ ಟಿಕೆಟ್ ಕೇಳಿದ್ದೀನಿ. ಹೈಕಮಾಂಡ್ ಗುರುತಿಸಿ ಟಿಕೆಟ್ ಕೊಟ್ಟರೆ ಸ್ಪರ್ಧಿಸುತ್ತೇನೆ, ಅವರು ಎಲ್ಲಿ ಹೇಳ್ತಾರೋ ಅಲ್ಲಿಂದ ಸ್ಪರ್ಧಿಸ್ತೇನೆ. ಮೋದಿ ಮತ್ತೆ ಪ್ರದಾನಿ ಆಗಬೇಕು, ಅವರಿಗೆ ನಾವು ನಮ್ಮ ಅಳಿಲು ಸೇವೆ ಮಾಡೋ ಆಸೆ ಇದೆ ಎಂದು ಹೇಳಿದ್ದಾರೆ.

ತುಮಕೂರು ಲೋಕಸಭಾ ಕ್ಷೇತ್ರದ ಟಿಕೆಟ್ ಸಿಗುವ ಬಗ್ಗೆಯೂ ಮಾತನಾಡಿದ ವಿ ಸೋಮಣ್ಣ,



ತುಮಕೂರು ಟಿಕೆಟ್ ನನಗೆ ಕೊಡೋ ಬಗ್ಗೆ ನನಗೇನೂ ಮಾಹಿತಿ ಇಲ್ಲ. ಮನೆ ಏನು ಮಾಡಿಲ್ಲ, ಬೆಂಗಳೂರಿನಿಂದ ಹತ್ತಿರದ ಜಿಲ್ಲೆಯದು, ಮೊದಲಿನಿಂದಲೂ ತುಮಕೂರು ಜೊತೆ ನನ್ನ ಸಂಬಂಧವಿದೆ. ಹೈಕಮಾಂಡ್ ಹೋಗು ಅಂದ್ರೆ ಹೋಗ್ತೀನಿ. ಇಲ್ಲಾಂದ್ರೆ, ನನ್ನ ಕೆಲಸ ಇದೆ ಅದೇ ಮಾಡ್ತೇನೆ ಎಂದು ಹೇಳಿದರು.

ಇನ್ನು, ನಾನು 365 ದಿನವೂ ರಾಜಕಾರಣ ಮಾಡ್ತೀನಿ ಎಂದ ಮಾಜಿ ಸಚಿವ ವಿ ಸೋಮಣ್ಣ, ನಾನು ಗೆದ್ದಾಗಲೂ ಒಂದು ದಿನ ಸುಮ್ಮನೆ ಕೂರಲ್ಲ, ಇದು ನನ್ನ ರೂಟೀನ್ ವರ್ಕ್. ಇದೀಗ ಸೋತಿದ್ದರಿಂದ ಸ್ವಲ್ಪ ಸೋಂಬೇರಿ ಆಗಿದ್ದೀನಿ ಎಂದು ಹೇಳಿದರು.

ಈ ಬಾರಿ ಸಿಎಂ ಸಿದ್ದರಾಮಯ್ಯ ಅವರ ಬಜೆಟ್ ಆಯ ತಪ್ಪಿದೆ ಎಂದ ವಿ.ಸೋಮಣ್ಣ, ಸಿದ್ದರಾಮಯ್ಯ ಅವರು 15 ಬಾರಿ ಬಜೆಟ್ ಮಂಡಿಸಿದ್ದಾರೆ. ಆದ್ರೆ ಈ ಬಾರಿ ಈ ಬಜೆಟ್ ಕಡೆ ಗಮನ ಹರಿಸಿಲ್ಲ, ಕೇಂದ್ರ ಸರ್ಕಾರ ದೂಷಣೆ ಮಾಡಿ ರಾಜಕಾರಣ ಮಾಡೋದು ಸರಿಯಲ್ಲ. ಅಧಿಕಾರಿಗಳು ಕೊಟ್ಟಿರೋದನ್ನು 3.15 ಗಂಟೆ ಓದಿದ್ದಾರೆ ಎಂದು ವ್ಯಂಗ್ಯವಾಡಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com